ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 89
22–9–2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 89

## ಪಂಚಮಸಾಲಿ ಪೀಠಾಧ್ಯಕ್ಷ ಸ್ಥಾನದಿಂದ ಜಯ ಮೃತ್ಯುಂಜಯ ಸ್ವಾಮೀಜಿ ಉಚ್ಚಾಟನೆ



**ಬಾಗಲಕೋಟೆ:** ಪಂಚಮಸಾಲಿ ಪೀಠಾಧ್ಯಕ್ಷ ಸ್ಥಾನದಿಂದ ಬಸವ ಜಯಮೃತ್ಯುಂಜಯ ಸ್ವಾಮೀಜಿಯನ್ನು ಉಚ್ಚಾಟನೆ ಮಾಡಲಾಗಿದೆ. ಅಖಿಲ ಭಾರತ ಲಿಂಗಾಯತ ಪಂಚಮಸಾಲಿ ಸಮಾಜ ಟ್ರಸ್ಟ್ ಈ ನಿರ್ಧಾರ ತೆಗೆದುಕೊಂಡಿದೆ. ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ ನೀಲಕಂಠ ಅಸೂಟಿ ಅವರು, ಪಂಚಮಸಾಲಿ ಸಮುದಾಯದ ಪ್ರಥಮ ಜಗದ್ಗುರು ಬಸವ ಜಯಮೃತ್ಯುಂಜಯ ಸ್ವಾಮೀಜಿ ಉಚ್ಚಾಟನೆ ಮಾಡಿರುವುದಾಗಿ ಮಾಧ್ಯಮಗಳಿಗೆ ತಿಳಿಸಿದರು.

ಲಿಂಗಾಯತ ಧರ್ಮ ವಿರೋಧಿ ಹೇಳಿಕೆ, ಅಕ್ರಮ ಆಸ್ತಿ ಗಳಿಕೆ ಸೇರಿದಂತೆ ಸ್ವಾಮೀಜಿ ಮೇಲೆ ಹಲವು ಆರೋಪ ಹೊರಿಸಿ, ಪೀಠದಿಂದ ಉಚ್ಚಾಟನೆ ಮಾಡಲಾಗಿದೆ ಎಂದು ಅಸೂಟಿ ಹೇಳಿದರು. ಇಂದು ನಡೆದ ಸಭೆಯಲ್ಲಿ ಸ್ವಾಮೀಜಿಯನ್ನು ಉಚ್ಚಾಟಿಸುವ ನಿರ್ಣಯ ತೆಗೆದುಕೊಳ್ಳಲಾಯಿತು.

## ದಕ್ಷಿಣ ಭಾರತದ ಸ್ಟಾರ್ ನಟ ಮೋಹನ್‌ಲಾಲ್‌ಗೆ ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ, ಪ್ರಧಾನಿ ಮೋದಿ ಅಭಿನಂದನೆ



**ನವದೆಹಲಿ:** ಭಾರತೀಯ ಚಿತ್ರರಂಗಕ್ಕೆ ನೀಡುವ ಅಮೂಲ್ಯ ಕೊಡುಗೆಯನ್ನು ಗುರುತಿಸಿ ಮಲಯಾಳಂ ಸೂಪರ್‌ಸ್ಟಾರ್ ಮೋಹನ್ ಲಾಲ್ ಅವರಿಗೆ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಘೋಷಿಸಲಾಗಿದೆ. ನಾಲ್ಕು ದಶಕಗಳಿಗೂ ಹೆಚ್ಚು ಕಾಲದ ಅವರ ವೃತ್ತಿಜೀವನದಲ್ಲಿ 400ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿದ್ದಾರೆ. ಮೋಹನ್ ಲಾಲ್) ಮಲಯಾಳಂನಲ್ಲಿ ಮಾತ್ರವಲ್ಲದೆ ಕನ್ನಡ, ತಮಿಳು, ತೆಲುಗು ಮತ್ತು ಹಿಂದಿ ಚಿತ್ರಗಳಲ್ಲಿಯೂ ತಮ್ಮ ನಟನಾ ಮಾಂತ್ರಿಕತೆಯನ್ನು ಹರಡಿದ್ದಾರೆ.

ಐದು ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳು ಮತ್ತು ಪದ್ಮಭೂಷಣವನ್ನು ಮೋಹನ್ ಲಾಲ್ ಪಡೆದಿದ್ದಾರೆ.

# ಜಾತಿ ಗಣತಿಯಲ್ಲಿ ಕ್ರಿಶ್ಚಿಯನ್ ಧರ್ಮದಡಿ ವಿವಿಧ ಜಾತಿಗಳ ಉಲ್ಲೇಖ ಕೈಬಿಡಲಾಗಿದೆ: ಸಿದ್ದರಾಮಯ್ಯ



**ಗದಗ:** ರಾಜ್ಯ ಸರ್ಕಾರದ ಬಹು ನಿರೀಕ್ಷಿತ ಜಾತಿ ಗಣತಿ ಸೋಮವಾರದಿಂದ ಆರಂಭವಾಗಲಿದ್ದು, ತೀವ್ರ ಆಕ್ರೋಶಕ್ಕೆ ಕಾರಣವಾಗಿರುವ ಕ್ರಿಶ್ಚಿಯನ್ ಧರ್ಮದಡಿ ವಿವಿಧ ಜಾತಿಗಳ ಉಲ್ಲೇಖವನ್ನು ತೋರಿಸುವ ಕಾಲಮ್ ಅನ್ನು ತೆಗೆದುಹಾಕಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ಹೇಳಿದ್ದಾರೆ.

ಇಂದು ಗದಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಬಿಜೆಪಿ ಈ ವಿಷಯದಲ್ಲಿ "ರಾಜಕೀಯ ಮಾಡುತ್ತಿದೆ" ಎಂದು ಆರೋಪಿಸಿದರು.

ಉಪಜಾತಿ ವರ್ಗದಲ್ಲಿ 'ಕ್ರಿಶ್ಚಿಯನ್' ಧರ್ಮದಡಿ ವಿವಿಧ ಜಾತಿಗಳನ್ನು ಉಲ್ಲೇಖದ ಗೊಂದಲದ ಬಗ್ಗೆ ಪ್ರತಿಕ್ರಿಯಿಸಿದ ಸಿಎಂ, "ಈಗ ಅದನ್ನು ತೆಗೆದುಹಾಕಲಾಗಿದೆ" ಎಂದು ಹೇಳಿದರು.

ಮತ್ತಷ್ಟು ಸ್ಪಷ್ಟಪಡಿಸುತ್ತಾ, "ಅದನ್ನು ತೆಗೆದುಹಾಕಿದ್ದು ನಾನಲ್ಲ. ಹಿಂದುಳಿದ ವರ್ಗಗಳ ಆಯೋಗ. ಆಯೋಗವು ಶಾಸನಬದ್ಧ ಸಂಸ್ಥೆಯಾಗಿದ್ದು, ಸಮೀಕ್ಷೆ ನಡೆಸಲು ಮಾರ್ಗಸೂಚಿಗಳನ್ನಷ್ಟೇ ಸರ್ಕಾರ ನೀಡಿದೆ. 1,75,000 ಶಿಕ್ಷಕರನ್ನು ಸಮೀಕ್ಷಾ ಕಾರ್ಯಕ್ಕೆ ನಿಯೋಜಿತರಾಗಿದ್ದಾರೆ. ಒಬ್ಬ ಶಿಕ್ಷಕರು ತಲಾ 150 ಮನೆಗಳಿಂದ ಮಾಹಿತಿ ಸಂಗ್ರಹಿಸಲಿದ್ದು, ಈ ಸಮೀಕ್ಷಾ ಕಾರ್ಯ 15 ದಿನಗಳ ಕಾಲ ನಡೆಯಲಿದೆ. ಸಮೀಕ್ಷೆಯಲ್ಲಿ ಧರ್ಮ, ಜಾತಿ, ಉಪಜಾತಿ, ಶಿಕ್ಷಣ, ಉದ್ಯೋಗ ಸೇರಿದಂತೆ ಹಲವು ಮಾಹಿತಿಗಳನ್ನು ಕಲೆಹಾಕಲಿದ್ದಾರೆ ಎಂದರು.

ಬಿಜೆಪಿ ನಾಯಕರು ಸಲ್ಲಿಸಿದ ಪತ್ರವನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ತಮಗೆ ಕಳುಹಿಸಿದ್ದಾರೆ ಎಂದು ಸಿದ್ದರಾಮಯ್ಯ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

# ಮಾನವನಾಗಿ ಹುಟ್ಟಿದ ಬಳಿಕ ಶಿವತತ್ವ ಜ್ಞಾನ ತಿಳಿಯದಿದ್ದರೆ ಪ್ರಾಣಿ,ಪಕ್ಷಿಗಳಿಗಿಂತ ಕಡೆ : ಡಾ.ಗುರುಬಸವ ಸ್ವಾಮೀಜಿ



**ಚನ್ನಗಿರಿ:** ಮಾನವನಾಗಿ ಹುಟ್ಟಿದ ಬಳಿಕ ಶಿವತತ್ವಜ್ಞಾನ ತಿಳಿಯದಿದ್ದರೆ ಪ್ರಾಣಿ,ಪಕ್ಷಿಗಳಿಗಿಂತ ಕಡೆ, ಎಂಬುದು ಶರಣರತತ್ವಾದರ್ಶ ಇಂದಿಗೂ ಸತ್ಯವಾಗಿದ್ದು 12 ನೇ ಶತಮಾನದಲ್ಲಿ ತನ್ನ ಕಾಯಕದ ಜೊತೆಯಲ್ಲಿ ವಚನ ಸಾಹಿತ್ಯವನ್ನು ರಕ್ಷಣೆ ಮಾಡಿದ ಕೀರ್ತಿ ಶರಣ ಮಡಿವಾಳ ಮಾಚಿದೇವರಿಗೆ ಸಲ್ಲುತ್ತದೆ ಎಂದು ಎಂದು ಪಾಂಡೋಮಟ್ಟಿ ವಿರಕ್ತ ಮಠದ ಡಾ.ಗುರುಬಸವ ಸ್ವಾಮಿಜಿ ಹೇಳಿದರು.

ತಾಲೂಕಿನ ಪಾಂಡೋಮಟ್ಟಿ ವಿರಕ್ತ ಮಠದಲ್ಲಿ ಏರ್ಪಡಿಸಿದ್ದ 875ನೇ ಮಾಸಿಕ ಶಿವಾನುಭವ ಹಾಗೂ ಶರಣ ಮಡಿವಾಳ ಮಾಚಿದೇವರ ಸ್ಮರಣೋತ್ಸವಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಅದೇರೀತಿಅವರಅವರಧರ್ಮ ಅವರಿಗೆ ಶ್ರೇಷ್ಟವಾಗಿರುತ್ತದೆ. ಅದ್ದರಿಂದ ಸಮಾಜದಲ್ಲಿಗೌರವ ನೀಡಿ ಗೌರವ ಪಡೆಯಬೇಕು ಎಂದು ಮಾಚಿದೇವ ತಿಳಿಸಿದ್ದಾರೆ ಎಂದರು.

ಸಮಾಜದಲ್ಲಿಜೀವನ ನಡೆಸಬೇಕಿದೆ. ಅದುನಿಕ ತಲ್ಲಣಗಳಿಂದ ಧರ್ಮದ ತತ್ವಗಳು ಮೊಟಕುಗೊಳದಂತೆ ನಾವುಗಳು ಕಾಪಾಡಬೇಕಿದೆ. ಶಿವಗೋಷ್ಟಿಗಳಿಂದ ನಮ್ಮಒತ್ತಡ ಹಾಗೂ ಮನಸ್ಸಿನ ನೆಮ್ಮದಿ ಪಡೆಯಬಹುದುಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗದಗ್‌ನ ವಯಲಿನ್ ಕಲಾವಿದೆ ವಾಣಿಶ್ರೀ ರವರಿಂದ ಸಂಗೀತಕಛೇರಿ ನಡೆಸಿದರು. ಸಾಹಿತಿ ಸಿದ್ದೇಶ್ ಸಿದ್ದನಮಠ ರವರ ರಚಿಸಿದ ಸಾಧನೆಗೆ ಸಾವಿರ ದಾರಿಗಳು ಹಾಗೂ ಅಭಿಸಾರಿಕೆ ಪುಸ್ತಕಗಳನ್ನು ಬಿಡುಗಡೆ ಗೋಳಿಸಲಾಯಿತು. ಡಾ.ಇಂಚರ ಮಡಿವಾಳ ಮಾಚಿದೇವರ ಕುರಿತು ಮಾತನಾಡಿದರು. ಹಿಂದುಳಿದ ವರ್ಗಗಳ ಕಲ್ಯಾಣಧಿಕಾರಿರವೀಂದ್ರಅರ್ಥರ್ಗ, ತುಮ್‌ಕೋಸ್ ಮಾಜಿಅಧ್ಯಕ್ಷಅರ್.ಎಂ.ರವಿ, ಜೆ.ಬಿ. ಕವಿತಾಚಂದ್ರಪ್ಪ, ಸುಮ ಯತೀಶ್, ಜ್ಯೋತ್ಯಮ್ಮ ಶಿವಲಿಂಗಯ್ಯ, ಜಂತುಕೋಳ್ ಮಹದೇವಪ್ಪ, ಎಂ.ಬಿ.ನಾಗರಾಜ್‌ಕಾಕನೂರು, ಧನಂಜಯ್ ಇದ್ದರು.

ಹಾಸನ: ಗಣೇಶ ಮೂರ್ತಿಗೆ ಚಪ್ಪಲಿ ಹಾರ ಪ್ರಕರಣ

## ಶಂಕಿತ ಮಹಿಳೆ ಬಂಧಿಸಿದ ಪೊಲೀಸರು



**ಹಾಸನ:** ಗಣೇಶ ಮೂರ್ತಿಗೆ ಚಪ್ಪಲಿ ಹಾರ ಹಾಕಿದ್ದ ಪ್ರಕರಣಕ್ಕೆ ಸಂಬಂಧ ಮಹಿಳೆಯೊಬ್ಬರನ್ನು ಬಂಧಿಸಲಾಗಿದೆ. ಹಾಸನದ ಬೇಲೂರು ಪಟ್ಟಣದ ಸಾರಿಗೆ ಬಸ್ ನಿಲ್ದಾಣ ಮುಂಭಾಗದ ಬೇಲೂರು ಪುರಸಭೆ ಆವರಣದಲ್ಲಿರುವ ಶ್ರೀ ವಿದ್ಯಾಗಣಪತಿ ದೇವಾಲಯದಲ್ಲಿ ಈ ಘಟನೆ ನಡೆದಿತ್ತು. ಬೆಳಗ್ಗೆ ಭಕ್ತಾಧಿಗಳು ಕೈಮುಗಿಯಲು ಹೋದಾಗ ಗಣಪತಿಗೆ ಚಪ್ಪಲಿ ಹಾರ ಹಾಕಿರುವುದನ್ನು ನೋಡಿದ ಭಕ್ತರು ಆಕ್ರೋಶ ವ್ಯಕ್ತಪಡಿಸಿದ್ದರು.

ಈ ನಡುವೆ ದೇವಸ್ಥಾನಕ್ಕೆ ಮುಖ ಮುಚ್ಚಿಕೊಂಡ ಮಹಿಳೆಯೊಬ್ಬರು ಗಣೇಶನ ದೇವಸ್ಥಾನಕ್ಕೆ ಬಂದಿದ್ದು ಮೂರ್ತಿಗೆ ಚಪ್ಪಲಿ ಹಾರ ಹಾಕಿರುವ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿತ್ತು. ಬೇಲೂರು ಪೊಲೀಸರು ಸಿಸಿಟಿವಿ ದೃಶ್ಯ ಆಧರಿಸಿ ಮಹಿಳೆಗಾಗಿ ಹುಡುಕಾಟ ಆರಂಭಿಸಿದ್ದಾರೆ. ಇದೀಗ ಹಾಸನದ ವಿಜಯನಗರ ಬಡಾವಣೆ ನಿವಾಸಿ ಲೀಲಮ್ಮ ಎನ್ನುವ ಮಹಿಳೆಯನ್ನು ಬಂಧಿಸಲಾಗಿದೆ.

1986 ಇಸವಿಯಲ್ಲಿ ಈ ಗಣೇಶ ಪ್ರತಿಷ್ಠಾಪನೆಯಾಗಿತ್ತು. ಇಲ್ಲಿರುವ ಸುತ್ತಮುತ್ತಲಿನ ಜನರು ವ್ಯಾಪಾರ ಉತ್ತಮವಾಗುತ್ತೆ ಎಂಬ ನಂಬಿಕೆಯಲ್ಲಿ ಮುಂಜಾನೆ ಪೂಜೆ ಮಾಡಿಕೊಂಡು ಹೋಗುತ್ತಾರೆ. ಮುಂಜಾನೆ ಎದ್ದ ನಿತ್ಯಕರ್ಮ ಮುಗಿಸಿ ದೇವರ ಮುಖ ನೋಡೋದೆ ಈ ಜನರ ವಾಡಿಕೆ. ಮೂವತ್ತು ನಲವತ್ತೈದು ವರ್ಷದಿಂದ ಈ ಪದ್ಧತಿ ನಡೆದುಕೊಂಡು ಬಂದಿದೆ.

# ಭರಮಸಮುದ್ರ ಕೆರೆ ಅಭಿವೃದ್ಧಿಗೆ ರೂ.3 ಕೋಟಿ ಅನುದಾನ: ಶಾಸಕ ಬಿ.ದೇವೇಂದ್ರಪ್ಪ ಭರವಸೆ

**ಜಗಳೂರು :** ಭರಮಸಮುದ್ರ ಕೆರೆ ಅಭಿವೃದ್ಧಿಗೆ ರೂ.3 ಕೋಟಿ, ಜಗಳೂರು ಕೆರೆ ಏರಿ ಮೇಲೆ ಫುಟ್ ಪಾಥ್ ನಿರ್ಮಾಣ, ವಿದ್ಯುತ್ ಬಲ್ಬ್ ಅಳವಡಿಕೆ, ಸೇರಿದಂತೆ ಅಭಿವೃದ್ಧಿಗೆ ರೂ.10 ಕೋಟಿ ಅನುಧಾನ ನೀಡಲಾಗುವುದು ಎಂದು ಶಾಸಕ ಬಿ. ದೇವೇಂದ್ರಪ್ಪ ಹೇಳಿದರು.

ಭರಮಸಮುದ್ರ ಕೆರೆಗೆ ಭಾನುವಾರ ಬಾಗೀನ ಅರ್ಪಿಸಿ ನಂತರ ಎಲ್ಲಮ್ಮ ದೇವಸ್ಥಾನದ ಬಳಿ ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ತಾಲ್ಲೂಕಿನಾದ್ಯಂತ ಕೆರೆಗಳಲ್ಲಿ ನೀರು ಭರ್ತಿಯಾಗಿದ್ದು ರೈತರು ಅಡಿಕೆಯತ್ತ ಮುಖಮಾಡಿದ್ದು ಮಲೆನಾಡು ಮೀರಿಸುವ ಕಾಲಸನ್ನಿಹಿತವಾಗಲಿದೆ. ಕೆರೆನೀರು ಖಾಲಿಯಾದ ನಂತರ ಮುಂದಿನ ದಿನಗಳಲ್ಲಿ



ಹಂತಹಂತವಾಗಿ ಹೂಳೆತ್ತುವ ಕಾಮಗಾರಿಗೆ ಕ್ರಮಕೈಗೊಳ್ಳಲಾಗುವುದು.

ತಾಲ್ಲೂಕಿನಾದ್ಯಂತ ಶಿಥಿಲಾವಸ್ಥೆಯಲ್ಲಿರುವ ಸರ್ಕಾರಿ ಶಾಲೆಗಳ ಕಟ್ಟಡ ದುರಸ್ಥಿಗೆ ರೂ.10 ಕೋಟಿ ಅನುದಾನ ಒದಗಿಸಲಾಗಿದೆ. ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಪಶು ಆಸ್ಪತ್ರೆ ಕೇಂದ್ರ ತೆರೆಯಲು ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಗ್ರಾಮಸ್ಥರ ಬೇಡಿಕೆಯಂತೆ ಶಾಲಾಕೊಠಡಿ ನಿರ್ಮಾಣ, ಪಶು ಆಸ್ಪತ್ರೆಗೆ ಅನುದಾನ ನೀಡುವೆ ಎಂದರು.

ಮಾಜಿ ಶಾಸಕ ಎಚ್.ಪಿ.ರಾಜೇಶ್ ಮಾತನಾಡಿ ನನ್ನ ಆಡಳಿತಾವಧಿಯಲ್ಲಿ ನಡೆದ ತರಳು ಬಾಳು ಹುಣ್ಣಿಮೆಯಲ್ಲಿ ಬಿತ್ತನೆ ಅಗಿ ಬಜೆಟ್ ನಲ್ಲಿ ಸೇರಿಸಲಾಯಿತು.



# ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಒರಟು ವರ್ತನೆ ನಿಮ್ಮ ಪತ್ನಿಯೊಂದಿಗಿನ ಸಂಬಂಧವನ್ನು ಹಾಳು ಮಾಡಬಹುದು. ಏನಾದರೂ ಬಾಲಿಶವಾದದ್ದನ್ನು ಮಾಡುವ ಮೊದಲು ನಿಮ್ಮ ವರ್ತನೆಯ ಪರಿಣಾಮದ ಬಗ್ಗೆ ಆಲೋಚಿಸಿ. ಸಾಧ್ಯವಾದಲ್ಲಿ ದೂರ ಹೊಗಿ ನಿಮ್ಮ ಮನಸ್ಥಿತಿಯನ್ನು ಬದಲಾಯಿಸಿ. ಇಂದು ಯಾವುದೇ ವಿರುದ್ಧ ಲಿಂಗದ ಸಹಾಯದಿಂದ ನೀವು ವ್ಯಾಪರ ಅಥವಾ ಉದ್ಯೋಗದಲ್ಲಿ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಇದೆ.

### ವೃಷಭ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನಿಮ್ಮ ಖರ್ಚುಗಳಲ್ಲಿ ಅನಿರೀಕ್ಷಿತ ಏರಿಕೆ ನಿಮ್ಮ ಮನಸ್ಸಿನ ಶಾಂತಿಗೆ ಭಂಗ ತರುತ್ತದೆ. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ. ಪ್ರೇಮ ಜೀವನ ಭರವಸೆ ತರುತ್ತದೆ ಇಂದು, ನೀವು ಮತ್ತು ನಿಮ್ಮ ಪ್ರೀತಿ ಸಂಗಾತಿ ಪ್ರೀತಿಯ ಸಾಗರದಲ್ಲಿ ತೇಲುತ್ತೀರಿ ಮತ್ತು ಪ್ರೀತಿಯ ಔನ್ನತ್ಯವನ್ನು ಅನುಭವಿಸುತ್ತೀರಿ.

### ಮಿಥುನ ರಾಶಿ

ನೀವು ಇಂದು ಆರಾಮವಾಗಿ ವಿಶ್ರಾಂತಿ ಪಡೆಯಬೇಕು ನೀವು ಆನಂದಿಸುವ ಮತ್ತು ಆಸಕ್ತಿಗಳು ಮತ್ತು ವಿಷಯಗಳಲ್ಲಿ ತೊಡಗಿಕೊಳ್ಳಿ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ. ಇಂದು ನೀವು ನಿಮ್ಮ ಜೀವನದಲ್ಲಿ ನಿಜವಾದ ಪ್ರೀತಿಯ ಅನುಪಸ್ಥಿತಿಯನ್ನು ಅನುಭವಿಸುತ್ತೀರಿ.

### ಕರ್ಕ ರಾಶಿ

ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ. ನಿಮ್ಮ ನಡೆಯಲ್ಲಿ ಉದಾರ ಮನೋಭಾವ ಹೊಂದಿರಿ ಮತ್ತು ನಿಮ್ಮ ಕುಟುಂಬದ ಸದಸ್ಯರ ಜೊತೆಗೆ ಉತ್ತಮವಾದ ಪ್ರೀತಿಯ ಕ್ಷಣಗಳನ್ನು ಕಳೆಯಿರಿ.

### ಸಿಂಹ ರಾಶಿ

ಗಾಯಗೊಳ್ಳುವುದನ್ನು ತಪ್ಪಿಸಲು ಕುಳಿತುಕೊಳ್ಳುವಾಗ ವಿಶೇಷ ಕಾಳಜಿ ವಹಿಸಿ. ಅಲ್ಲದೇ ಒಳ್ಳೆಯ ನಿಲುವು ಕೇವಲ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುವುದಷ್ಟೇ ಅಲ್ಲದೇ ಆರೋಗ್ಯ ಮತ್ತು ವಿಶ್ವಾಸಾರ್ಹತೆಯನ್ನು ಅಭಿವೃದ್ಧಿಪಡಿಸುವಲ್ಲೂ ಪ್ರಮುಖ ಪಾತ್ರ ವಹಿಸುತ್ತದೆ. ದೀರ್ಘಕಾಲದ ದೃಷ್ಟಿಕೋನದಿಂದ ಹೂಡಿಕೆ ಮಾಡಬೇಕು. ಜೀವನ ಮತ್ತು ಕೆಲಸದೆಡೆಗೆ ಪ್ರತಿಭಾಶಾಲಿಗಳೂ ಮತ್ತು ಪರಿಪೂರ್ಣರೂ ಆಗಿರಿ.

### ಕನ್ಯಾ ರಾಶಿ

ವಿಧಿಯನ್ನು ಆಧರಿಸದಿರಿ ಮತ್ತು ನಿಮ್ಮ ಆರೋಗ್ಯ ಸುಧಾರಿಸಲು ಪ್ರಯತ್ನಿಸಿ ಏಕೆಂದರೆ ಅದೃಷ್ಟವು ಒಂದು ಸೋಮಾರಿ ದೇವತೆಯಾಗಿದ್ದು ಇದು ಎಂದಿಗೂ ತಾನಾಗಿಯೇ ನಿಮ್ಮ ಬಳಿ ಬರುವುದಿಲ್ಲ. ನಿಮ್ಮ ತೂಕವನ್ನು ನಿಯಂತ್ರಿಸಲು ಮತ್ತು ನಿಮ್ಮ ಆರೋಗ್ಯವನ್ನು ಪುನಃ ಪಡೆಯಲು ವ್ಯಾಯಾಮ ಮಾಡಲು ಇದು ಒಳ್ಳೆಯ ಸಮಯ. ಕುಟುಂಬದ ಯಾವುದೇ ಸದಸ್ಯರ ಕಾಯಿಲೆ ಬೀಳುವ ಕಾರಣದಿಂದಾಗಿ ನೀವು ಆರ್ಥಿಕ ತೊಂದರೆಗೊಳಗಾಗಬಹುದು.

### ತುಲಾ ರಾಶಿ

ಅಭದ್ರತೆ / ದಿಗ್ಭ್ರಮೆಯ ಭಾವನೆ ತಲೆತಿರುಗುವಿಕೆಯನ್ನು ಉಂಟುಮಾಡಬಹುದು. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ಒಂದು ಹಳೆಯ ಸಂಪರ್ಕ ನಿಮಗೆ ಕೆಲವು ಸಮಸ್ಯೆಗಳನ್ನು ಸೃಷ್ಟಿಸಬಹುದು ನಿಮ್ಮ ಸಂಗಾತಿ ನಿಮ್ಮ ಸ್ಥಾನವನ್ನು ತಿಳಿದುಕೊಳ್ಳುವಂತೆ ಮಾಡಲು ನೀವು ತೊಂದರೆ ಹೊಂದಿರುತ್ತೀರಿ.

### ವೃಶ್ಚಿಕ ರಾಶಿ

ನಿಮ್ಮ ದೇಹದ ಪುನಃಶ್ಚೇತನಕ್ಕಾಗಿ ಸಂಪೂರ್ಣ ವಿಶ್ರಾಂತಿ ತೆಗೆದುಕೊಳ್ಳದಿದ್ದರೆ ನೀವು ಆಯಾಸ ಹಾಗೂ ನಿರಾಸೆಯಲ್ಲಿ ಸಿಲುಕುತ್ತೀರಿ. ಆವತ್ತಿಗಾಗಿ ಮಾತ್ರ ಬದುಕುವ ಮತ್ತು ಮನೋರಂಜನೆಗಾಗಿ ಹೆಚ್ಚು ಸಮಯ ಮತ್ತು ಹಣ ಖರ್ಚು ಮಾಡುವ ನಿಮ್ಮ ಪ್ರವೃತ್ತಿಯನ್ನು ನಿಯಂತ್ರಿಸಿ. ಜನರು ಮತ್ತು ಅವರ ಉದ್ದೇಶಗಳ ಬಗ್ಗೆ ಅವಸರದ ತೀರ್ಮಾನ ಕೈಗೊಳ್ಳಬೇಡಿ -ಅವರು ಒತ್ತಡದಲ್ಲಿರಬಹುದು ಮತ್ತು ಅವರಿಗೆ ನಿಮ್ಮ ಸಹಾನುಭೂತಿ ಮತ್ತು ತಿಳುವಳಿಕೆಯ ಅಗತ್ಯವಿರುತ್ತದೆ.

### ಧನು ರಾಶಿ

ಮನೋಬಲದ ನಿಮ್ಮ ಕೊರತೆ ನಿಮ್ಮನ್ನು ಭಾವನಾತ್ಮಕ ಮತ್ತು ಮಾನಸಿಕ ವರ್ತನೆಯ ಬಲಿಪಶುವಾಗಿ ಮಾಡಬಹುದು. ನೀವು ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ, ಇಂದು ನೀವು ಈ ವಿಷಯವನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಬಹುದು. ಪತ್ನಿಯ ವ್ಯವಹಾರಗಳಲ್ಲಿ ನಿಮ್ಮ ಹಸ್ತಕ್ಷೇಪ ಅವಳಿಗೆ ಕಿರಿಕಿರಿ ಮಾಡಬಹುದು.

### ಮಕರ ರಾಶಿ

ಇಂದು ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ಇಂದು ಸಾಲಗಾರನು ನಿಮಗೆ ಹೇಳದೆ ನಿಮ್ಮ ಖಾತೆಗೆ ಹಣವನ್ನು ಸೇರಿಸಬಹುದು. ಇದರ ಬಗ್ಗೆ ತಿಳಿದು ನೀವು ಆಶ್ಚರ್ಯಚಕಿತರಾಗಬಹು ಮತ್ತು ಸಂತೋಷವು ಪಡೆಯಬಹುದು. ಕುಟುಂಬದ ಸದಸ್ಯರು ಅಥವಾ ಸಂಗಾತಿ ಕೆಲವು ಆತಂಕಗಳನ್ನು ಉಂಟುಮಾಡುತ್ತಾರೆ.

### ಕುಂಭ ರಾಶಿ

ಕೆಲವು ಅನಿವಾರ್ಯ ಸಂದರ್ಭಗಳು ನಿಮಗೆ ಅಹಿತಕರವೆನಿಸಬಹುದು. ಆದರೆ ನೀವು ನಿಮ್ಮ ಸಮತೋಲನ ಕಾಯ್ದುಕೊಳ್ಳಬೇಕು ಮತ್ತು ಪರಿಸ್ಥಿತಿಯನ್ನು ನಿಭಾಯಿಸಲು ತಕ್ಷಣವೇ ಪ್ರತಿಕ್ರಿಯಿಸಬಾರದು. ಇಂದು ಹೂಡಿಕೆಗಳನ್ನು ಮಾಡಬಾರದು. ಮನೆಯಲ್ಲಿನ ಕೆಲವು ಬದಲಾವಣೆಗಳು ನಿಮ್ಮನ್ನು ಭಾವುಕರನ್ನಾಗಿಸಬಹುದು- ಆದರೆ ನಿಮಗೆ ಮುಖ್ಯವಾದವರಿಗೆ ನೀವು ನಿಮ್ಮ ಭಾವನೆಗಳನ್ನು ಪರಿಣಾಮಕಾರಿಯಾಗಿ ಹೇಳಲು ಸಾಧ್ಯವಾಗುತ್ತದೆ.

### ಮೀನ ರಾಶಿ

ಲಕ್ಕವಿಲ್ಲದಷ್ಟು ಗಾಬರಿಗಳು ನಿಮ್ಮ ಪ್ರತಿರೋಧಕತೆ ಮತ್ತು ಆಲೋಚನಾ ಶಕ್ತಿಯನ್ನು ದುರ್ಬಲಗೊಳಿಸಬಹುದು. ಸಕಾರಾತ್ಮಕ ಚಿಂತನೆಯ ಜೊತೆ ಈ ರೋಗದ ವಿರುದ್ಧ ಹೋರಾಡಲು ಪ್ರಯತ್ನಿಸಿ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು.

# ಅಭಿವೃದ್ಧಿ ಹರಿಕಾರರು, ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರು": ಸುರೇಶ್ ಎಂ ಜಾಧವ್



**ದಾವಣಗೆರೆ:** ಜಿಲ್ಲೆಯನ್ನು ವಿಶ್ವಮಟ್ಟಕ್ಕೆ ಕೊಂಡುಯ್ಯುವಲ್ಲಿ ಎಸ್ ಎಸ್ ಮಲ್ಲಿಕಾರ್ಜುನ ಅವರ ಪಾತ್ರ ದೊಡ್ಡದು ಸಾವಿರಾರು ಕೋಟಿ ಅನುದಾನ ತಂದ ಪ್ರಾಮಾಣಿಕವಾಗಿ ಅಭಿವೃದ್ಧಿ ಕೆಲಸ ಮಾಡಿದ್ದಾರೆ. ನಗರದ ರಸ್ತೆಗಳಿಗೆ ಆಧುನಿಕ ಸ್ಪರ್ಶ ನೀಡಿದ್ದಾರೆ ಎಂದು ಕಿಸಾನ್ ಕಾಂಗ್ರೆ ಮುಖಂಡರಾದ ಸುರೇಶ್ ಎಂ ಜಾಧವ್ ಅವರು ತಿಳಿಸಿದ್ದಾರೆ. ನಗರದಲ್ಲಿ ಪಾರ್ಕ್ ರಸ್ತೆಗಳ ಅಭಿವೃದ್ಧಿ, ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರು ಸೌಲಭ್ಯ, ಲೆಕ್ಕಕ್ಕಿಲ್ಲದ ಬಸ್ ತಂಗುದಾಣ, ಕೆರೆಗಳ ಅಭಿವೃದ್ಧಿ, ಸುಸಜ್ಜಿತ ಶಾಲಾ ಕಟ್ಟಡಗಳು, ಆಸ್ಪತ್ರೆಗಳ ಉನ್ನತೀಕರಣ, ಉದ್ಯೋಗ ಅವಕಾಶಗಳಿಗೆ ಅವಕಾಶ ಕಲ್ಪಿಸಿದ ಜನಪ್ರತಿನಿಧಿ ಎಂದರೆ ಎಸ್ ಎಸ್ ಮಲ್ಲಿಕಾರ್ಜುನ ಅವರು. ಅವರ ಅಧಿಕಾರವಾಧಿಯಲ್ಲಿನ ಕೆಲಸಗಳು ಮಾತನಾಡುತ್ತಿವೆ ಎಂದರು. ಈ ಹಿಂದೆ ಎಸ್ ಎಂ ಕೃಷ್ಣ ರವರು ಮುಖ್ಯಮಂತ್ರಿಯಾದ ವೇಳೆ ಸಚಿವರಾಗಿದ್ದ ಎಸ್ ಎಸ್ ಮಲ್ಲಿಕಾರ್ಜುನ್ ರವರು ಬಡವರಿಗೆ ಸಾವಿರಾರು ಮನೆ ನಿರ್ಮಿಸಿಕೊಟ್ಟಿದ್ದಾರೆ. ಜಿಲ್ಲೆಯ ಬಡವರ್ಗ, ಕಾರ್ಮಿಕರ ಕಲ್ಯಾಣಕ್ಕಾಗಿ ದುಡಿದಿದ್ದಾರೆ ಎಂದರು.

ಪ್ರೀತಿ ವಿಶ್ವಾಸದಿಂದ ಜನಾನುರಾಗಿಯಾಗಿ ಆಡಳಿತ ಮಾಡಿದವರು. ಅಧಿಕಾರಕ್ಕಾಗಿ ದ್ವೇಷದ ರಾಜಕಾರಣ ಮಾಡಿದವರೇ ಹೆಚ್ಚು ಆದರೆ ಮಲ್ಲಿಕಾರ್ಜುನ ಅವರು ಜನರ ಪ್ರೀತಿಯನ್ನು ಗೆದ್ದು ಅಧಿಕಾರಕ್ಕೆ ಬಂದವರು, ಇನ್ನೂ ಆಡಳಿತಾತ್ಮಕವಾದ ವಿಚಾರಗಳಿಗೆ ಪ್ರತಿಪಕ್ಷದವರನ್ನು ಟೀಕೆ ಮಾಡಿರಬಹುದು ಆದರೆ ರಾಜಕೀಯವಾಗಿ ದ್ವೇಷ ಮಾಡಲಿಲ್ಲ.

ಎಲ್ಲಾ ಪಕ್ಷದ ಜನರಿಗೂ ಒಳ್ಳೆಯದನ್ನೇ ಬಯಸಿ ಇಡೀ ಕ್ಷೇತ್ರದ ಜನರ ಮನಸ್ಸನ್ನ ಗೆದ್ದಿದ್ದಾರೆ, ಅಧಿಕಾರ ಇರಲಿ ಬಿಡಲಿ ಜನರ ಪ್ರೀತಿಗೆ ಪಾತ್ರರಾಗಿದ್ದಾರೆ ಎಂದರು. ಇಂಥ ದೂರದೃಷ್ಟಿ ಹೊಂದಿರುವ ಹಾಗೂ ಬಡವರ ಬಗ್ಗೆ ಕಾಳಜಿ ಹೊಂದಿರುವ ಎಸ್ ಎಸ್ ಮಲ್ಲಿಕಾರ್ಜುನ್ ಅವರಿಗೆ ಹುಟ್ಟುಹಬ್ಬದ ಶುಭಾಶಯಗಳನ್ನು ತಿಳಿಸುತ್ತಾ ದೇವರು ಆಯೂರ್ ಆರೋಗ್ಯ ಕರುಣಿಸಲಿ ಎಂದು ಎಂದು ಸುರೇಶ್ ಎಂ ಜಾಧವ್ ತಿಳಿಸಿದರು.

# ರಾಜ್ಯಮಟ್ಟದ ಫುಟ್ಬಾಲ್ ಕ್ರೀಡಾಕೂಟ ಭವ್ಯವಾಗಿ ಯಶಸ್ವಿ



**ದಾವಣಗೆರೆ :** ಜಿಲ್ಲಾ ಕ್ರೀಡಾಂಗಣದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ಆನಂದ್ ಪದವಿ ಪೂರ್ವ ಕಾಲೇಜು ಇವರ ಸಂಯುಕ್ತ ಆಶ್ರಯದಲ್ಲಿ 2025-26ನೇ ಸಾಲಿನ ರಾಜ್ಯಮಟ್ಟದ ಫುಟ್ಬಾಲ್ ಕ್ರೀಡಾಕೂಟವು ಸೆಪ್ಟೆಂಬರ್ 18, 19 ಮತ್ತು 20ರಂದು ಮೂರು ದಿನಗಳ ಕಾಲ ಅದ್ದೂರಿಯಾಗಿ ನೆರವೇರಿತು.

ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ 1,200 ಪ್ರತಿಭಾವಂತ ಕ್ರೀಡಾಪಟುಗಳು ಭಾಗವಹಿಸಿ ತಮ್ಮ ಶ್ರೇಷ್ಠ ಪ್ರದರ್ಶನ ತೋರಿದರು. ಸಮಾರೋಪ ಸಮಾರಂಭವನ್ನು ಆಯೋಜಿಸಲಾಗಿದ್ದು, ಕ್ರೀಡಾಕೂಟದಲ್ಲಿ ಸಾಧನೆ ಮೆರೆದ ಕ್ರೀಡಾಪಟುಗಳನ್ನು ಗೌರವಿಸಲಾಯಿತು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಆನಂದ್ ಪದವಿ ಪೂರ್ವ ಕಾಲೇಜಿನ ಸಂಸ್ಥಾಪಕರಾದ ಆನಂದ್ ಪುತಿನ ಅವರು ವಹಿಸಿದ್ದರು. ಸಮಾರಂಭದಲ್ಲಿ ಪಳನಿ ವೇಲು ಡಿ., ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ ಪದವಿ ಪೂರ್ವ, ಆನಂದ್ ಪಿಯು ಕಾಲೇಜಿನ ಪ್ರಾಂಶುಪಾಲರಾದ ಶ್ರೀಯುತ ಅವಿನಾಶ್ ಜೆ ನಾಯ್ಕ್, ಎಜಿಬಿ ಕಾಲೇಜಿನ ಪ್ರಾಂಶುಪಾಲರಾದ ಪ್ರದೀಪ್ ಸರ್ ಹಾಗೂ ಅನೇಕ ಗಣ್ಯರು ಭಾಗವಹಿಸಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಿದರು.

ಪಂದ್ಯಾವಳಿಗಳ ಫಲಿತಾಂಶ:

ಬಾಲಕರ ವಿಭಾಗದಲ್ಲಿ ಬಳ್ಳಾರಿ ತಂಡ ಪ್ರಥಮ ಸ್ಥಾನ ಹಾಗೂ ಉಡುಪಿ ತಂಡ ದ್ವಿತೀಯ ಸ್ಥಾನ ಪಡೆದಿತು.

ಬಾಲಕಿಯರ ವಿಭಾಗದಲ್ಲಿ ದಕ್ಷಿಣ ಕನ್ನಡ ಪ್ರಥಮ ಸ್ಥಾನ ಮತ್ತು ಧಾರವಾಡ ದ್ವಿತೀಯ ಸ್ಥಾನ ಪಡೆದುಕೊಂಡವು.

ರಾಜ್ಯಮಟ್ಟದಲ್ಲಿ ಆಯ್ಕೆಯಾದ ಈ ಕ್ರೀಡಾಪಟುಗಳು ಮುಂದಿನ ದಿನಗಳಲ್ಲಿ ರಾಷ್ಟ್ರಮಟ್ಟದಲ್ಲಿ ಕರ್ನಾಟಕವನ್ನು ಪ್ರತಿನಿಧಿಸಲಿದ್ದಾರೆ. ಸಮಾರೋಪ ಸಮಾರಂಭದಲ್ಲಿ ಆನಂದ್ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ದೊಡ್ಡ ಸಂಖ್ಯೆಯಲ್ಲಿ ಹಾಜರಿದ್ದರು.

# 13 ಸಾವಿರ ಶಿಕ್ಷಕರ ನೇಮಕಾತಿಗೆ ಕ್ರಮ; ಶಿಕ್ಷಣ ಸಚಿವ ಎಸ್.ಮಧು ಬಂಗಾರಪ್ಪ



**ದಾವಣಗೆರೆ:** ಮಕ್ಕಳಿಗೆ ಸರಿಯಾದ ಶಿಕ್ಷಣ ನೀಡಿದಾಗ ದೇಶ ವಿವಿಧ ರಂಗಗಳಲ್ಲಿ ಮುಂದುವರೆಯಲು ಸಾಧ್ಯ ಈ ನಿಟ್ಟಿನಲ್ಲಿ 13 ಸಾವಿರ ಶಿಕ್ಷಕರ ನೇಮಕಾತಿಗೆ ಕ್ರಮವಹಿಸಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್.ಮಧು ಬಂಗಾರಪ್ಪ ಹೇಳಿದರು.

ಅವರು ಸೆ.20 ಚನ್ನಗಿರಿಯ ಆಂಜನೇಯಸ್ವಾಮಿ ಸಮುದಾಯ ಭವನದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಿಂದ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನ ಮತ್ತು ಗುರುಭವನ ನಿರ್ಮಾಣದ ಶಂಕುಸ್ಥಾಪನೆ ನೆರವೇರಿಸಿ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಭವಿಷ್ಯಕ್ಕಾಗಿ ಮುಂದಿನ ಪೀಳಿಗೆಗೆ ನಾವು ಏನಾದರೂ ಕೊಡುಗೆ ನೀಡಬೇಕಾಗಿದ್ದರೆ ಅದು ಶಿಕ್ಷಣ ವಾಗಿವಾಗಿರಬೇಕು. ಈ ನಿಟ್ಟಿನಲ್ಲಿ ಶಿಕ್ಷಣವೇ ನಿರ್ಣಾಯಕವಾಗಿದ್ದು ಇದಕ್ಕಾಗಿ ಶಿಕ್ಷಕರು ಪ್ರಾಮಾಣಿಕೆ ಸೇವೆ ಸಲಿಸುತ್ತಿದ್ದಾರೆ. ಶಿಕ್ಷಣ ಎನ್ನುವುದು ನಿರಂತರ ಇದಕ್ಕೆ ಯಾವುದೇ ಅಂತಿಮ ಇರುವುದಿಲ್ಲ ಎಂದರು.

ವಲಸೆ ಹೋಗಿ ಗಂಡ, ಹೆಂಡತಿ ಇಬ್ಬರೂ ದುಡಿಯುತ್ತಿದ್ದರೆ ಮಕ್ಕಳು ಅಲ್ಲೆ ಆಟ ಆಡುತ್ತಿದ್ದರು. ಇದನ್ನು ಮನಗಂಡ ಮುಖ್ಯಮಂತ್ರಿ ದಿವಗಂತ ಬಂಗಾರಪ್ಪ ಅವರು ಅಂಗನವಾಡಿಗಳನ್ನು ತೆರೆದರು. ಇದರಿಂದ ಶಿಕ್ಷಣ ವಂಚಿತ ಮಕ್ಕಳು ಸಹ ಶಿಕ್ಷಣ ಪಡೆಯಲು ಸಾಧ್ಯವಾಯಿತು. ಗ್ರಾಮೀಣ ಭಾಗದಲ್ಲಿ ವ್ಯಾಸಂಗ ಮಾಡಿದ ವಿಧ್ಯಾರ್ಥಿಗಳಿಗೆ ಶೇಕಡ ಹದಿನೈದು ರಷ್ಟು ಅಂಕ ನೀಡಿ ಗ್ರಾಮೀಣ ಭಾಗದಲ್ಲಿ ಓದಿದವರಿಗೆ ವಿದ್ಯಾಭ್ಯಾಸ ಮತ್ತು ನೌಕರಿಯಲ್ಲಿ ನೆರವಾಗಿದ್ದರಷ್ಟೆ ಅಲ್ಲದೆ ಆಶ್ರಯ ಯೋಜನೆ ಮತ್ತು ಆರಾಧನಾ ಯೋಜನೆಗಳನ್ನು ಜಾರಿಗೆ ತಂದರು. ಇದರಿಂದ ಅನೇಕ ಗ್ರಾಮೀಣ ಜನರಿಗೆ ಸಾಕಷ್ಟು ಅನುಕೂಲವಾಗಿ ಬಡತನದಿಂದ ಮೇಲೆ ಬರಲು ಸಾಧ್ಯವಾಗಿದೆ ಎಂದರು.

ನಮ್ಮ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಅನೇಕ ಮನೆಗಳು ಬೆಳಗುತ್ತಿವೆ, ಪ್ರಾಣಾಳಿಕೆಯಲ್ಲಿ ತಿಳಿಸಿದಂತೆ ಹಳೆ ಪಿಂಚಣಿ ಪದ್ಧತಿಯನ್ನು ಜಾರಿಗೆ ತರಲಿದ್ದು ಇದರಿಂದ ಲಕ್ಷಾಂತರ ನೌಕರರಿಗೆ ಅನುಕೂಲ ವಾಗಲಿದೆ. ಇಲಾಖೆಯಲ್ಲಿ ಈಗಾಗಲೇ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡಿದ್ದು ಶಿಕ್ಷಕರಿಗೆ ಮುಂಬಡ್ತಿಯಲ್ಲಿ ಅನುಕೂಲವಾಗಲಿದೆ ಇದನ್ನು ಆದಷ್ಟು ಶೀಘ್ರದಲ್ಲಿ ಜಾರಿಗೆ ತರಲಾಗುವುದು ಎಂದರು.

ಸರ್ಕಾರ ಅಧಿಕಾರಕ್ಕೆ ಬಂದ ನಂತರ ಶಾಲೆಗಳಲ್ಲಿ ಸಂವಿಧಾನ ಪೀಠಿಕೆ ಓದುವುದನ್ನು ಕಡ್ಡಾಯ ಮಾಡಲಾಗಿದೆ. ಮತ್ತು ವರ್ಗಾವಣೆಗೆ ಕಾಯುತ್ತಿದ್ದ ಮೂವತ್ತಾರು ಸಾವಿರ ಶಿಕ್ಷಕರ ವರ್ಗಾವಣೆ ಮಾಡಲಾಗಿದೆ. ಜೊತೆಗೆ ಪರೀಕ್ಷಾ ಸುಧಾರಣೆಗೂ ಕ್ರಮವಹಿಸಲಾಗಿದ್ದು ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ನೇರವಾಗಿ ವೀಕ್ಷಣೆ ಮಾಡಲು ಎಲ್ಲಾ ಕೇಂದ್ರಗಳ ಕೊಠಡಿಗಳಲ್ಲಿ ವೆಬ್ ಕಾಸ್ಟಿಂಗ್ ಮಾಡಿ ಪರೀಕ್ಷಾ ಅವ್ಯವಹಾರ ತಡೆಗಟ್ಟಲಾಗಿದೆ. ಮತ್ತು ಸರ್ಕಾರಿ ಶಾಲೆಗಳಿಗೆ ಉಚಿತ ವಿದ್ಯುತ್ ಪೂರೈಕೆ ಮಾಡಲಾಗಿದೆ, ಸ್ಮಾರ್ಟ್ ಕ್ಲಾಸ್ ಜಾರಿಗೆ ತಂದಿದ್ದು ಇದರಿಂದ ಗುಣಮಟ್ಟದ ಶಿಕ್ಷಣ ಪಡೆಯಲು ಸಾಧ್ಯವಾಗುತ್ತಿದೆ.

ರಾಜ್ಯದಲ್ಲಿ ಸರ್ಕಾರದಿಂದ 800 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ತೆರೆಯಲು ಕ್ರಮವಹಿಸಲಾಗಿದೆ. ಪ್ರಥಮ ಮತ್ತು ದ್ವಿತೀಯ ಪಿಯುಸಿ ವ್ಯಾಸಂಗ ಮಾಡುತ್ತಿರುವ ವಿಧ್ಯಾರ್ಥಿಗಳಿಗೆ ಸಿಇಟಿ ಹಾಗೂ ನೀಟ್ ಪರೀಕ್ಷೆಗೆ ಅನುಕೂಲವಾಗಲೆಂದು ಉಚಿತ ಕೋಚಿಂಗ್ ತರಗತಿಗಳನ್ನು ನಡೆಸಲಾಗುತ್ತಿದೆ. ಇದರಿಂದ ಇಪ್ಪತ್ತೈದು ಸಾವಿರ ವಿದ್ಯಾರ್ಥಿಗಳು ಅನುಕೂಲ ಪಡೆಯುತ್ತಿದ್ದಾರೆ. ಮುಂದೆ ಎಲ್ಲಾ ಮಕ್ಕಳಿಗೂ ಇದನ್ನು ವಿಸ್ತರಿಸಲು ಕ್ರಮ ಕೈಗೊಳ್ಳಲಾಗಿದೆ. ಅತೀಹೆಚ್ಚು ಅಂಕ ಪಡೆಯುವ ವಿಧ್ಯಾರ್ಥಿಗಳಿಗೆ ಮತ್ತು ಶಾಲೆಗಳಿಗೆ ಪ್ರೊತ್ಸಾಹ ಧನ ನೀಡಲಾಗುವುದು.

ಕಳೆದ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಚನ್ನಗಿರಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದೆ. ಖಾಸಗಿ ಶಾಲೆಗಳಿಗಿಂತ ಸರ್ಕಾರಿ ಶಾಲೆಗಳಲ್ಲಿ ಹೆಚ್ಚು ಫಲಿತಾಂಶ ತರಲು ಶಿಕ್ಷಕರು ಪ್ರಾಮಾಣಿಕೆ ಪ್ರಯತ್ನ ಮಾಡಬೇಕಿದೆ. ತಾಲ್ಲೂಕಿನ ಶಿಕ್ಷಕರ ಬಹುದಿನಗಳ ಕನಸಾಗಿದ್ದ ಗುರುಭವನವನ್ನು ರೂ.4 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗುತ್ತಿದ್ದು ಶಿಕ್ಷಣ ಸಚಿವರಿಂದ ಶಂಕುಸ್ಥಾಪನೆ ನೆರವೇರಿರುವುದು ಅತೀವ ಸಂತೋಷ ತಂದಿದೆ ಎಂದರು.

ಕಾರ್ಯಕ್ರಮದಲ್ಲಿ ಡಿಡಿಪಿಐ ಜಿ.ಕೊಟ್ರೇಶ್, ಡಯಟ್ ಪ್ರಾಂಶುಪಾಲರಾದ ಗೀತಾ, ತಹಶೀಲ್ದಾರ್ ನಾಗರಾಜ್ ಹಾಗೂ ಇನ್ನಿತರೆ ಗಣ್ಯರು ಉಪಸ್ಥಿತರಿದ್ದರು.

# ಸಿಮ್ಸ್ವೈದ್ಯಕೀಯ ಮಹಾವಿದ್ಯಾಲಯದ ಸರ್ವಾಂಗೀಣ ವಿಕಾಸಕ್ಕೆ ಕ್ರಮ : ಶರಣಪ್ರಕಾಶ ಆರ್.ಪಾಟೀಲ

**ಶಿವಮೊಗ್ಗ:** ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಮಹಾವಿದ್ಯಾಲಯದಲ್ಲಿನ ಬೋದನಾ ಸಿಬ್ಬಂಧಿ, ಆಡಳಿತ ಸಿಬ್ಬಂಧಿ, ತಜ್ಞ ವೈದ್ಯರುಗಳ ನೇಮಕ, ಎಲ್ಲಾ ಶ್ರೇಣಿಯ ಖಾಲಿ ಹುದ್ದೆಗಳ ಭರ್ತಿ, ಕಟ್ಟಡ ನಿರ್ಮಾಣ, ದುರಸ್ತಿ, ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು ಸೇರಿದಂತೆ ಸಿಮ್ಸ್ನ ಸರ್ವಾಂಗೀಣ ವಿಕಾಸಕ್ಕೆ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ರಾಜ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವ ಶರಣ ಪ್ರಕಾಶ ಆರ್.ಪಾಟೀಲ ಅವರು ಹೇಳಿದರು.ಅವರು ಇಂದು ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಮಹಾವಿದ್ಯಾಲಯಕ್ಕೆ ಭೇಟಿ ನೀಡಿ, ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡುತ್ತಿದ್ದರು. ಇಲ್ಲಿನ ಕ್ಯಾನ್ಸರ್‌ಸ್ಪತ್ರೆಯ ಕಟ್ಟಡ ನಿರ್ಮಾಣ ಕಾರ್ಯ ಆರಂಭಗೊಂಡಿದ್ದು, ತ್ವರಿತಗತಿಯಲ್ಲಿ ಪೂರ್ಣಗೊಳಿಸಿ, ಲೋಕಾರ್ಪಣೆ ಮಾಡಲು ಉದ್ದೇಶಿಸಲಾಗಿದೆ ಎಂದರು. ಇಲ್ಲಿನ ತಜ್ಞ ವೈದ್ಯರುಗಳು ಮತ್ತು ಕೆಲವಿಭಾಗಗಳ ಸಿಬ್ಬಂಧಿಗಳನ್ನು ಆರೋಗ್ಯ ಇಲಾಖೆ ಹಿಂಪಡೆದುಕೊಂಡಿದೆ ಅಲ್ಲದೆ ಇಲ್ಲಿನ ಆಸ್ಪತ್ರೆಗೆ ಚಿಕಿತ್ಸೆಗೆ ಆಗಮಿಸುತ್ತಿರುವ ನೆರೆಯ ಜಿಲ್ಲೆಗಳ ರೋಗಿಗಳ ಸಂಖ್ಯೆಯಲ್ಲೂ ಗಣನೀಯ ಪ್ರಮಾಣ ಹೆಚ್ಚಳ ಕಂಡುಬರುತ್ತಿದೆ ಎಂಬ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಅವರು, ಈ ಸಂಬಂಧ ಈಗಾಗಲೇ ಆರೋಗ್ಯ ಇಲಾಖೆಯ ಸಚಿವರೊಂದಿಗೆ ಸಮಾಲೋಚನೆ ನಡೆಸಲಾಗಿದ್ದು, ವಾಪಾಸ್ಪಡೆದುಕೊಂಡಿರುವ ವೈದ್ಯರ ತೆರವಿನಿಂದಾಗಿರುವ ಖಾಲಿ ಹುದ್ದೆಗಳನ್ನು ಆರೋಗ್ಯ ಇಲಾಖೆಯಿಂದಲೇ ಗುತ್ತಿಗೆ ಆಧಾರದ ಮೇಲೆ ಭರ್ತಿಮಾಡಿಕೊಳ್ಳಲು ಅವಕಾಶ ಕೊಡುವುದಾಗಿ ತಿಳಿಸಿದ್ದಾರೆ.ಇಲ್ಲಿನ ತಪಾಸಣೆಗೆ ಬರುವ ರೋಗಿಗಳಿಗೆ ಚಿಕಿತ್ಸೆ ನೀಡಲು ಹಾಗೂ ಔಷಧ ಚೀಟಿಗಳನ್ನು ವೈದ್ಯಾಧಿಕಾರಿಗಳು ಆನ್ಲೈನ್ನಲ್ಲಿಯೇ ಬರೆದು ಕೊಡುತ್ತಿದ್ದಾರೆ. ಇದರಿಂದಾಗಿ ರೋಗಿಗಳು ಹೊರಗೆ ಔಷಧ ಖರೀದಿಸುವುದನ್ನು ನಿಲ್ಲಿಸಿದಂತಾಗಿದೆ ಅಲ್ಲದೇ ಇಲ್ಲಿಯೇ ಪೂರೈಸಲಾಗುತ್ತಿದೆ. ಕಾಗದ ರಹಿತ ಆಡಳಿತ ಜಾರಿಯಾಗಿದೆ ಎಂದರು. ಸಿಮ್ಸ್‌ನ್ನು ಈಗಾಗಲೇ ಸೂಪರ್ಸ್ಪೆಷಾಲಿಟಿ ಆಸ್ಪತ್ರೆಯನ್ನಾಗಿ ಪರಿವರ್ತಿಸಿ, ವೈದ್ಯಕೀಯ ಸೇವೆಯನ್ನು ನೀಡಲಾಗುತ್ತಿದೆ. ಅದಕ್ಕೆ ಸಂಬಂಧಿಸಿದಂತೆ ಖಾಯಂ ವೈದ್ಯರು ಹಾಗೂ ವೈದ್ಯಕೀಯ ಸಿಬ್ಬಂಧಿಗಳನ್ನು ನಿಯೋಜಿಸಲಾಗಿದೆ. ಕ್ಯಾತಾರಂಭಿಸಲಾಗಿದೆ. ನರರೋಗಕ್ಕೆ ಸಂಬಂಧಿಸಿದಂತೆ ಪ್ರತ್ಯೇಕವಾದ ವಿಭಾಗವನ್ನು ಆರಂಭಿಸಲು ಉದ್ದೇಶಿಸಲಾಗಿದೆ ಎಂದ ಅವರು, ಇನ್ನಷ್ಟು ಸೌಲಭ್ಯಗಳನ್ನು ಒದಗಿಸಲು ಉದ್ದೇಶಿಸಲಾಗಿದ್ದು, ನಿರೀಕ್ಷೆಯಂತೆ ತ್ವರಿತಗತಿಯಲ್ಲಿ ಎಲ್ಲಾ ಸೌಲಭ್ಯಗಳನ್ನು ಒದಗಿಸುವಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದರು.

# ಜಾತಿ ಸಮೀಕ್ಷೆಯಲ್ಲಿ ಕುರುಬ ಎಂದು ನಮೂದಿಸಿ



**ಚಿಕ್ಕಮಗಳೂರು:** ಸರ್ಕಾರ ಇದೇ ಸೆ.22 ರಿಂದ ಅ.7 ರವರೆಗೆ ನಡೆಸಲು ಉದ್ದೇಶಿಸಿರುವ ಸಾಮಾಜಿಕ, ಶೈಕ್ಷಣಿಕಜಾತಿ ಸಮೀಕ್ಷೆಯಲ್ಲಿಗಣತಿದಾರರು ಮನೆಗೆ ಬಂದಾಗಜಾತಿ ಕಾಲಂ ಸಂಖ್ಯೆ 9 ರಲ್ಲಿ ಂ-0809 ಕುರುಬ ಎಂದು ಬರೆಸುವಂತೆಜಿಲ್ಲಾಕುರುಬರ ಸಂಘದಅಧ್ಯಕ್ಷಕೆ.ಎಸ್ ಶಾಂತೇಗೌಡ ಸಮಾಜ ಬಾಂಧವರಲ್ಲಿ ಮನವಿ ಮಾಡಿದರು.

ಅವರುಇಂದು ಕನಕ ಸಮುದಾಯ ಭವನದಲ್ಲಿಏರ್ಪಡಿಸಲಾಗಿದ್ದ ಸಂಘದ ಸಭೆಯಲ್ಲಿ ಭಾಗವಹಿಸಿ ಮಾತನಾಡಿ, ಈ ಬಗ್ಗೆ ಒಮ್ಮತದತೀರ್ಮಾನಕೈಗೊಂಡಿದ್ದು, ಸಮಾಜದ ಮುಖಂಡರು ಸಮುದಾಯದ ಪ್ರತಿ ಮನೆಗೆ ಭೇಟಿನೀಡಿ ಮನವರಿಕೆ ಮಾಡಬೇಕೆಂದು ಸೂಚನೆ ನೀಡಿದರು. ಜಿಲ್ಲೆಯಲ್ಲಿ ಎಲ್ಲಾ ತಾಲ್ಲೂಕು ಕುರುಬರ ಸಂಘದ ಪದಾಧಿಕಾರಿಗಳು, ಮುಖಂಡರು ಸಮಾಜ ಬಾಂಧವರಿಗೆ ಈ ಕುರಿತು ಮನವರಿಕೆ ಮಾಡಬೇಕೆಂದುಕರೆನೀಡಿದ್ದೇವೆಎಂದರು.ಪ್ರಧಾನ ಕಾರ್ಯದರ್ಶಿ ಹೆಚ್.ಎಸ್. ಪುಟ್ಟೇಗೌಡ ಮಾತನಾಡಿ, ಜಾತಿ ಸಮೀಕ್ಷೆಯಲ್ಲಿರಾಜ್ಯಕುರುಬರ ಸಂಘದ ಸೂಚನೆ ಮೇರೆಗೆರಾಜ್ಯಾದ್ಯಂತ ಪ್ರವಾಸಕೈಗೊಂಡು ಪ್ರಚಾರ ಮಾಡುತ್ತಿದ್ದು, ಗಣತಿದಾರರಿಗೆ ಹಿಂದೂ, ಕುರುಬ, ಕಸುಬು ಕಾಲಂನಲ್ಲಿಕುರಿ ಸಾಕಾಣಿಕೆಎಂದು ಬರೆಸಬೇಕು, ಯಾವುದೇಗೊಂದಲ ಮಾಡಿಕೊಳ್ಳಬಾರದು ಎಂದು ವಿನಂತಿಸಿದರು.

ನಿರ್ದೇಶಕ ಕೆಂಪನಹಳ್ಳಿ ಪುಷ್ಪರಾಜ್ ಮಾತನಾಡಿ, ಜಾತಿ ಸಮೀಕ್ಷೆಯ ಸಂದರ್ಭದಲ್ಲಿಗಣತಿದಾರರು ಮನೆಗೆ ಬಂದಾಗ ಹಿಂದೂ, ಜಾತಿಕಾಲಂನಲ್ಲಿಕುರುಬ, ಕಸುಬು ಕಾಲಂನಲ್ಲಿಕುರಿ ಸಾಕಾಣಿಕೆಎಂದು ಬರೆಸುವಂತೆಜಿಲ್ಲೆಯಾದ್ಯಂತಪ್ರವಾಸಕೈಗೊಂಡು ಮನವಿ ಮಾಡುತ್ತಿದ್ದೇವೆಎಂದರು.

ನಿರ್ದೇಶಕರೇಖಾಪುಲಿಯಪ್ಪಗೌಡ ಮಾತನಾಡಿ, ಸಮಾಜದ ಬಂಧುಗಳಲ್ಲಿ ಜಾತಿ ಸಮೀಕ್ಷೆಯ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಇಂದು ಸಭೆ ನಡೆಸಲಾಗಿದ್ದು, ಪ್ರತಿಗ್ರಾಮ, ಪಂಚಾಯಿತಿಯಿಂದ ಸಮಾಜದವರು ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಸರಿಯಾದ ಮಾಹಿತಿ ನೀಡುವಂತೆ ಮನೆಗೆ ಭೇಟಿನೀಡಿಜಾಗೃತಿ ಮೂಡಿಸಲು ನಿರ್ಧರಿಸಲಾಗಿದೆಎಂದು ಹೇಳಿದರು.

ಇನ್ನೋರ್ವ ಮುಖಂಡ ಹೆಚ್.ಪಿ ಮಂಜೇಗೌಡ ಮಾತನಾಡಿ, ಜಾತಿ ಸಮೀಕ್ಷೆಯಲ್ಲಿ ಗೊಂದಲಕ್ಕೊಳಗಾಗದೆ ಹಿಂದೂಕುರುಬ ಎಂದುತಪ್ಪದೆ ಸರಿಯಾದ ಮಾಹಿತಿ ನೀಡಿ ಬರೆಸಲು ವಿನಂತಿಸಿದ ಅವರು, ಪರಿಶಿಷ್ಟ ಪಂಗಡಕ್ಕೆ ಸೇರ್ಪಡೆ ಬಗ್ಗೆ ತಲೆಕೆಡಿಸಿಕೊಳ್ಳದೆ ಹಾಲಿ ಕುರುಬ ಎಂದು ಬರೆಸಿ ಸರ್ಕಾರದಿಂದ ಸಿಗುವ ಮೀಸಲಾತಿ ಸೌಲಭ್ಯವನ್ನು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ನಿಕಟಪೂರ್ವಜಿಲ್ಲಾಧ್ಯಕ್ಷ ಕೆ. ಮಂಜುನಾಥ್, ಜಿಲ್ಲಾ ಕಾರ್ಯದರ್ಶಿ ಕೆ.ವಿ ಮಂಜುನಾಥ್, ಕೆಂಪನಹಳ್ಳಿ ಪುಷ್ಪರಾಜ್, ಖಜಾಂಚಿ ಸಿದ್ದೇಗೌಡ, ನಿರ್ದೇಶಕರುಗಳಾದ ಈಶ್ವರಹಳ್ಳಿ ಮಹೇಶ್, ತ್ರಿಭುವನ್, ಮಣ್ಣೇನಹಳ್ಳಿ ರಾಜು, ಎಪಿಎಂಸಿ ಮಾಜಿಅಧ್ಯಕ್ಷ ಬಸವರಾಜ್, ಎನ್.ಟಿಚಂದ್ರಪ್ಪ, ಸಚಿನ್, ಎತ್ತಿನಮನೆದಾಸೇಗೌಡ, ಕನಕ ಮಹಿಳಾ ಮಂಡಳಿ ಅಧ್ಯಕ್ಷೆ ಶಾರದಮ್ಮ ಮಾಸ್ತಿಗೌಡ ಮತ್ತಿತರರು ಉಪಸ್ಥಿತರಿದ್ದರು.

# ನಿಧನ ಸುದ್ದಿಗಳು

### ರಾಜಶೇಖರ್ ಗುಂಡಗಟ್ಟಿ ನಿಧನ

**ದಾವಣಗೆರೆ :**ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಕಾರ್ಯದರ್ಶಿಗಳಾದ ರಾಜಶೇಖರ್ ಗುಂಡಗಟ್ಟಿ ( 80 ವರ್ಷ) ಯವರು ನಿಧನರಾಗಿದ್ದಾರೆ.ಶ್ರೀಯುತರು ಸದಾ ಕ್ರಿಯಾಶೀಲರಾಗಿ ಜಿಲ್ಲೆಯ ಸಾಹಿತ್ಯದ ಚಟುವಟಿಕೆಗಳಲ್ಲಿ ಭಾಗವಹಿಸುತ್ತಿದ್ದರು. ಇವರ ಅಗಲಿಕೆಯಿಂದ ಜಿಲ್ಲೆಯ ಸಾಹಿತ್ಯ ವಲಯಕ್ಕೆ ನೋವು ಉಂಟಾಗಿದೆ ಎಂದು ಜಿಲ್ಲಾ ಕನ್ನಡ ಜಾಗೃತಿ ಸಮಿತಿಯ ಸದಸ್ಯರು, ಚನ್ನಗಿರಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಲ್.ಜಿ.ಮಧುಕುಮಾರ್ ಸಂತಾಪ ಸೂಚಿಸಿದ್ದಾರೆ.

**ಮಾನ್ಯ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಎಂ.ಎ.ಸಿ.ಟಿ. ನ್ಯಾಯಾಲಯ, ಹರಪನಹಳ್ಳಿ**

**ಎಂ.ವಿ.ಸಿ.ನಂ.716/2022**

**ಅರ್ಜಿದಾರರು:** ವೀರೇಶ್. ಹೆಚ್.ಎಂ

**ವಿರುದ್ಧ**

**ಎದುರುದಾರರು:** ಸಂಜಯ್ ಕೊಟ್ಟಿಗೆ ಶ್ರೀಶೈಲ ಮತ್ತು ಇತರರು

**ಎದುರುದಾರ ನಂ.1/: ನೋಟೀಸ್ ದಾರರು** ಸಂಜಯ್ ಕೊಟ್ಟಿಗೆ ಶ್ರೀಶೈಲ ಬಿನ್ ಶ್ರೀಶೈಲ ಕೊಟ್ಟಿಗೆ ತಿಮ್ಮಪ್ಪ, ನಂ.102, ಚೇತನ ಅಪಾರ್ಟ್‌ಮೆಂಟ್, ಮಲ್ಲಪ್ಪನಹಟ್ಟಿ ರಸ್ತೆ, ಕೆ.ಎಫ್.ಸಿ.ಹೆಚ್.ಪಿ.ಪೆಟ್ರೋಲ್ ಬಂಕ್ ಹತ್ತಿರ, ದವಳಗಿರಿ ಬಡಾವಣೆ, ಚಿತ್ರದುರ್ಗ

**ಸಿ.ಪಿ.ಸಿ ಆದೇಶ 5 ನಿಯಮ 20 ರ ಅಡಿಯಲ್ಲಿ 1ನೇ ಎದುರುದಾರರ ವಿರುದ್ಧ ನೀಡಲಾದ ಪ್ರಕಟಣಾ ನೋಟೀಸು**

ಈ ಮೇಲ್ಕಂಡ ಪ್ರಕರಣವನ್ನು ಅರ್ಜಿದಾರರಯ ಎದುರುದಾರರ ವಿರುದ್ದ ವಾಹನ ಅಪಘಾತದಲ್ಲಿ ಗಾಯಗೊಂಡಿದ್ದಕ್ಕಾಗಿ ಪರಿಹಾರ ಕೋರಿ ಮಾನ್ಯ ಘನ ನ್ಯಾಯಾಲಯದಲ್ಲಿ ಸಲ್ಲಿಸಿರುತ್ತಾರೆ. ಸದರಿ ಪ್ರಕರಣದಲ್ಲಿ ನೀವು 1ನೇ ಎದುರುದಾರರಾಗಿದ್ದು, ನ್ಯಾಯಾಲಯವು ನಿಮ್ಮ ವಿರುದ್ಧ ನ್ಯಾಯಾಲಯದಿಂದ ಸಮನ್ ಅನ್ನು ನೋಂದಾಯಿತ ಅಂಚೆಯ ಮೂಲಕ ಕಳಿಸಿದ್ದರೂ ಸಹಾ ಅವು ನಿಮಗೆ ಜಾರಿಯಾಗಿರುವುದಿಲ್ಲ. ಕಾರಣ ನಿಮ್ಮ ಹಾಜರಾತಿಗಾಗಿ ದಿನಾಂಕ: 13.10.25 ರಂದು 11-00 ಗಂಟೆಗೆ ಮುದ್ದತ್ತು ನಿಗಧಿಯಾಗಿದ್ದು ಆ ದಿನ ನೀವು ಖುದ್ದಾಗಿಯಾಗಲೀ ಅಥವಾ ವಕೀಲರ ಮುಖಾಂತರವಾಗಲೀ ಪ್ರಕರಣದಲ್ಲಿ ತಕರಾರು ಇದ್ದಲ್ಲಿ ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ನಿಮ್ಮ ವಿರುದ್ಧ ಏಕಪಕ್ಷಿಯ ತೀರ್ಮಾನ ತೆಗೆದುಕೊಳ್ಳಲಾಗುವುದು ತಿಳಿಯಿರಿ.

ನ್ಯಾಯಾಲಯದ ಮುದ್ರೆ ಹಾಗೂ ನನ್ನ ಸಹಿಯೊಂದಿಗೆ ದಿನಾಂಕ :15.09.2025 ರಂದು ಕೊಡಲ್ಪಟ್ಟಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/-
ಅರ್ಜಿದಾರರ ಪರ ವಕೀಲರು
(ದಿನೇಶ್ ಹೆಚ್.ಪಾಟೀಲ್)

ಸಹಿ/-
ಶಿರಸ್ತೇದಾರರು
ಮಾನ್ಯ ಹಿರಿಯ ಸಿವಿಲ್
ನ್ಯಾಯಾಧೀಶರು ಹಾಗೂ ಎಂ,ಎ.ಸಿ.ಟಿ
ನ್ಯಾಯಾಲಯ, ಹರಪನಹಳ್ಳಿ.

# ದಾವಣಗೆರೆ ಜನತೆಯ "ಬೆನ್ನ ಹಿಂದಿನ ಶಕ್ತಿ – ಕಣ್ಣ್ ಮುಂದಿನ ಬೆಳಕು"

ದಾವಣಗೆರೆ ನಗರದ ದೈವ ಭಕ್ತರು, ಸಾತ್ವಿಕರು ಆದ ಶ್ರೀ ಶಾಮನೂರು ಶಿವಶಂಕ್ರಪ್ಪ ಶ್ರೀಮತಿ ಪಾರ್ವತಮ್ಮ ದಂಪತಿಗಳ 3 ನೇ ಪುತ್ರರಾಗಿ ದಿನಾಂಕ : 22–09–1967 ರಂದು ಜನಿಸಿದ, ಧಾರ್ಮಿಕ ಶ್ರದ್ಧೆಯ, ನೈತಿಕ ಬದುಕಿನ ಪರಿಸರದಲ್ಲಿ ಬೆಳೆದ

ಎಸ್. ಎಸ್.ಮಲ್ಲಣ್ಣನವರು ರವರು ಬಿ. ಕಾಂ. ಪದವಿಯನ್ನು ಪಡೆದು ನಂತರ ತಮ್ಮ ತಂದೆಯವರ ಮಾರ್ಗದರ್ಶನದಂತೆ ಹಾಗೂ ತಮ್ಮ ಅಣ್ಣಂದಿರುಗಳಾದ ಎಸ್. ಎಸ್. ಬಕ್ಕೇಶಣ್ಣ, ಎಸ್. ಎಸ್. ಗಣೇಶಣ್ಣ ನವರ ಜೊತೆಗೂಡಿ ವ್ಯಾಪಾರ –ವ್ಯವಹಾರದಲ್ಲಿ ತೊಡಗಿಸಿಕೊಂಡು, ತಮ್ಮ ಜಾಣ್ಮೆ– ಬುದ್ದಿವಂತಿಕೆಯಿಂದ ಅವಿರತ ಶ್ರಮ ಮತ್ತು ಸ್ವ–ಸಾಮರ್ಥ್ಯದಿಂದ ವ್ಯಾಪಾರ –ವ್ಯವಹಾರ ದಲ್ಲಿ ಅಪ್ರತಿಮ ಸಾಧನೆ ಮಾಡಿ ಉನ್ನತ ಮಟ್ಟಕ್ಕೇರಿದ್ದಲ್ಲದೆ ಹೊಸ ಹೊಸ ಉದ್ದಿಮೆಗಳನ್ನು ಸ್ಥಾಪಿಸಲು ದೇಶ –ವಿದೇಶಗಳಿಗೆ ಭೇಟಿ ನೀಡಿ ಅಲ್ಲಿನ ತಾಂತ್ರಿಕತೆಯ ಬಗ್ಗೆ, ಉದ್ಯಮಗಳ ಬಗ್ಗೆ, ಕೈಗಾರಿಕೆಗಳ ಬಗ್ಗೆ, ಮಾರುಕಟ್ಟೆಯ ಬಗ್ಗೆ ಅಧ್ಯಯನ ನಡೆಸಿ ಉನ್ನತ ತಂತ್ರಜ್ಞಾನಗಳೊಂದಿಗೆ ವಿವಿಧ ರೀತಿಯ ಕೈಗಾರಿಕೆಗಳನ್ನು, ಉದ್ಯಮಗಳನ್ನು ಸ್ಥಾಪಿಸಿ ಪ್ರತ್ಯಕ್ಷವಾಗಿ –ಪರೋಕ್ಷವಾಗಿ ಉದ್ಯೋಗ ಸೃಷ್ಟಿ ಮಾಡುವುದರೊಂದಿಗೆ ಒಬ್ಬ ಯಶಸ್ವೀ ಉದ್ಯಮಿಯಾಗಿ ಹೊರಹೊಮ್ಮಿದ್ದಲ್ಲದೆ,

ಇದರ ಜೊತೆಗೆ ಕೃಷಿ ಕ್ಷೇತ್ರದಲ್ಲಿಯೂ ತಮ್ಮ ಛಾಪು ಮೂಡಿಸಿ ಉತ್ತಮ ಕೃಷಿಕರೂ ಆಗಿರುವ ಎಸ್. ಎಸ್. ಮಲ್ಲಣ್ಣ ನವರು ಒಬ್ಬ ಸಾಮಾನ್ಯ ಪ್ರಜೆಯಾಗಿ ಬದುಕಿನಲ್ಲಿ ಉತ್ತುಂಗ ಶಿಖರಕ್ಕೆ ಏರಿದ್ದಾರೆ.

ಎಸ್. ಎಸ್. ಮಲ್ಲಣ್ಣ ನವರು ಕೇವಲ ವ್ಯಾಪಾರ, ಕೈಗಾರಿಕೆ, ಕೃಷಿ ಉದ್ಯಮ ಪ್ರಾರಂಭ ಮಾಡಿದ್ದಷ್ಟೇ ಅಲ್ಲ ಶಿಕ್ಷಣ, ಸಹಕಾರಿ, ಧಾರ್ಮಿಕ, ಸಾಮಾಜಿಕ ಸಾಂಸ್ಕೃತಿಕ, ರಾಜಕೀಯ ಕ್ಷೇತ್ರಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಆ ಎಲ್ಲಾ ಸಂಘ –ಸಂಸ್ಥೆ ಗಳನ್ನು ಯಶಸ್ವಿಯಾಗಿ ಮುನ್ನೆಡಿಸಿಕೊಂಡು ಹೋಗುತ್ತಿರುವುದು ಹೆಮ್ಮೆಪಡುವಂತಹ ವಿಷಯ ಹಾಗೂ ಸಮತಾ ಸಮಾಜದ ಕನಸು ಕಾಣುತ್ತಾ ಕಂಡ ಕನಸನ್ನು ನನಸು ಮಾಡುವ ಆಶಯದೊಂದಿಗೆ ಹೆಜ್ಜೆ ಹಾಕುತ್ತಿದ್ದಾರೆ. ಕಾಯಕವೇ ಕೈಲಾಸ, ಕಾಯಕವೇ ಪೂಜೆ, ಕಾಯಕವೇ ಗುರುದರ್ಶನ ಎಂಬ ತತ್ವವನ್ನು ಪಾಲಿಸುತ್ತಾ ಕಾಯಕಕ್ಕೆ ಹೆಚ್ಚು ಮಹತ್ವ ಕೊಟ್ಟು ಅದೇ ರೀತಿ ಶ್ರಮ ಹಾಕಿ ದುಡಿಯುತ್ತಿರುವ ಎಸ್ ಎಸ್ ಮಲ್ಲಣ್ಣ ಇಂದಿನ ಪೀಳಿಗೆಗೆ ಮಾದರಿಯಾಗಿದ್ದಾರೆ ಎಂದರೆ ತಪ್ಪಾಗಲಾರದು.



ಎಸ್ ಎಸ್ ಮಲ್ಲಣ್ಣ ನವರು ಹಲವು ಸಂಘ ಸಂಸ್ಥೆ ಗಳಲ್ಲಿ, ಶೈಕ್ಷಣಿಕ, ಸಾಮಾಜಿಕ, ರಾಜಕೀಯ ಕ್ಷೇತ್ರಗಳಲ್ಲಿ ಕ್ರಿಯಾಶೀಲರಾಗಿ ದುಡಿದು ತಮ್ಮದೇ ಆದ ಕೊಡುಗೆ ನೀಡಿದ್ದಾರೆ –ಛಾಪು ಮೂಡಿಸಿದ್ದಾರೆ. ಎಸ್ ಎಸ್ ಎ ಂ ರವರು 1993– 9 9 ರ ಅವಧಿಯಲ್ಲಿ ಕುವೆಂಪು ವಿಶ್ವವಿದ್ಯಾನಿಲಯದ ಮತ್ತು ರಾಜೀವ ಗಾಂಧಿ ವೈದ್ಯಕೀಯ ವಿಶ್ವ ವಿದ್ಯಾಲಯದ ಸೆನೇಟ್ ಮತ್ತು ಸಿಂಡಿಕೇಟ್ ಸದಸ್ಯರಾಗಿ, ಬಾಪೂಜಿ ವಿದ್ಯಾಸಂಸ್ಥೆಯ ಗೌರವ ಜಂಟೀ ಕಾರ್ಯದರ್ಶಿಯಾಗಿ, ಬಾಪೂಜಿ ಸಹಕಾರಿ ಬ್ಯಾಂಕಿನ ಉಪಾಧ್ಯಕ್ಷರಾಗಿ, ಎಸ್ ಎಸ್ ಐ ಎಂ ಎಸ್ ಆಸ್ಪತ್ರೆ ಮತ್ತು ಮೆಡಿಕಲ್ ಕಾಲೇಜ್ ನ ಚೇರ್ಮನ್ ರಾಗಿ, 1997 ರಿಂದ ಕರ್ನಾಟಕ ರಾಜ್ಯ ಯುವ ಕಾಂಗ್ರೆಸ್ ನ ಕಾರ್ಯದರ್ಶಿಯಾಗಿ ನಂತರ ಪ್ರಧಾನ ಕಾರ್ಯದರ್ಶಿಯಾಗಿ, 1998 ರ ಉಪ ಚುನಾವಣೆಯಲ್ಲಿ ದಾವಣಗೆರೆ ಕ್ಷೇತ್ರದ ಶಾಸಕರಾಗಿ, 1999–2004 ರ ಅವಧಿಯಲ್ಲಿ ಕರ್ನಾಟಕ ರಾಜ್ಯ ಕ್ರೀಡಾ ಪ್ರಾಧಿಕಾರದ ಅಧ್ಯಕ್ಷರಾಗಿ, ರಾಜ್ಯ ಫುಟ್ಬಾಲ್ ಅಸೋಷಿಯೇಷನ್ ಅಧ್ಯಕ್ಷರಾಗಿ, ರಾಜ್ಯ ಅಮೆಚೂರ್ ಕಬ್ಬಡ್ಡಿ ಸಂಸ್ಥೆ ಅಧ್ಯಕ್ಷ ರಾಗಿ ನಂತರ ಮತ್ತೆ 1999 ರಲ್ಲಿ ಶಾಸಕರಾಗಿ ಅಂದಿನ ಮುಖ್ಯಮಂತ್ರಿ ಎಸ್ ಎಂ ಕೃಷ್ಣ ರವರ ಮಂತ್ರಿಮಂಡಲದಲ್ಲಿ ಯುವ ಜನ ಸೇವೆ ಮತ್ತು ಕ್ರೀಡಾ ಸಚಿವರಾಗಿ ಕ್ರೀಡೆಗೆ, ಯುವಕ ಸಂಘ ಗಳಿಗೆ ಹೆಚ್ಚಿನ ಉತ್ತೇಜನ ಕೊಟ್ಟು ಯುವ ಜನ ಮೇಳಗಳಂತಹ ಕಾರ್ಯಕ್ರಮ ಗಳನ್ನು ನಡೆಸಿದ್ದಲ್ಲದೆ ಕ್ರೀಡಾಂಗಣಗಳನ್ನು ನಿರ್ಮಿಸಿ ಕ್ರೀಡಾ ಪಟು ಗಳನ್ನು, ಕ್ರೀಡೆ ಗಳನ್ನು ಪ್ರೋತ್ಸಾಹಿಸಿ ಬೆಳೆಸಿದರು. ನಂತರ 2005 ರಲ್ಲಿ ಮುದೋಳ ನಲ್ಲಿ ತಮ್ಮ ಒಡೆತನದಲ್ಲಿ ಇಂಡಿಯನ್ ಕೇನ್ ಪವರ್ ಲಿ. ಎಂಬ ಸಕ್ಕರೆ ಕಾರ್ಖಾನೆಯನ್ನು ಸ್ಥಾಪಿಸಿ ಅದರ ವ್ಯವಸ್ಥಾಪಕ ನಿರ್ದೇಶಕರಾಗಿದ್ದಾರೆ. ಮತ್ತೆ 2016 ರಲ್ಲಿ ಶಾಸಕರಾಗಿ ಮುಖ್ಯಮಂತ್ರಿ ಯಾಗಿದ್ದ ಶ್ರೀ ಸಿದ್ದರಾಮಯ್ಯ ನವರ ಸಚಿವ ಸಂಪುಟದಲ್ಲಿ ತೋಟಗಾರಿಕೆ, ಎಪಿಎಂಸಿ ಸಚಿವರಾಗಿ, ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರಾಗಿ ಕಾರ್ಯನಿರ್ವಹಿಸುತ್ತಿದ್ದರೆ.

### ಕೃಷಿಕರ ಕಣ್ಮಣಿ

ದಾವಣಗೆರೆ ನಗರದ ಎಪಿಎಂಸಿ ಮಾರುಕಟ್ಟೆಗಳನ್ನು ಅಭಿವೃದ್ಧಿಪಡಿಸಿ, ರೈತರು ಬೆಳೆದ ದಾಸ್ತಾನುಗಳನ್ನು ಸಂಗ್ರಹಿಸಿಡಲು ಸಾಕಷ್ಟು ಸಾಮರ್ಥ್ಯದ ವೈಜ್ಞಾನಿಕ ಗೋಡೌನ್ ಗಳನ್ನು, ದಾವಣಗೆರೆಯಲ್ಲಿ ಎಲ್ಲಾ ರಸ್ತೆಗಳನ್ನು ಸಿಮೆಂಟ್ ರಸ್ತೆಗಳನ್ನಾಗಿ ನಿರ್ಮಿಸಿದ್ದಲ್ಲದೆ ದನಗಳ –ಎತ್ತಿನ ಮಾರುಕಟ್ಟೆಯನ್ನು ನವ ಮಾದರಿ ಯಲ್ಲಿ ಕಟ್ಟಿಸಿದ್ದಾರೆ ಅಲ್ಲದೆ ರೈತರನ್ನು ಆರ್ಥಿಕವಾಗಿ ಸದೃಢಗೊಳಿಸಲು ತೋಟಗಾರಿಕೆ ಬೆಳೆಗಳನ್ನು ರೈತರು ಹೆಚ್ಚು ಹೆಚ್ಚು ಬೆಳೆಯಲು ತೋಟಗಾರಿಕೆ ಇಲಾಖೆಯಿಂದ ಅನೇಕ ಹೊಸ ಹೊಸ ಯೋಜನೆಗಳನ್ನು ಜಾರಿಗೆ ತಂದು ಅವುಗಳನ್ನು ರೈತರಿಗೆ ಮುಟ್ಟುವಂತೆ ಮಾಡಿ ರೈತರಿಗೆ ಪ್ರೋತ್ಸಾಹ, ಉತ್ತೇಜನ ನೀಡಿದ ರೈತರ ಹಿತೈಷಿ ಕೃಷಿಕರ ಕಣ್ಮಣಿ

### ಕನಸನ್ನು ನನಸಾಗಿಸಿದ ಹರಿಕಾರ

ದಾವಣಗೆರೆಯಲ್ಲಿ ಜನಸಂಖ್ಯೆ ದಿನೇ ದಿನೇ ಬೆಳೆಯುತ್ತಿರುವುದನ್ನು ಮನಗಂಡು ನಿವೇಶನ ಇಲ್ಲದವರಿಗೆ ನಿವೇಶನ, ಮನೆ ಇಲ್ಲದವರಿಗೆ ಸುಮಾರು 20,000 ಮನೆಗಳನ್ನು ಒದಗಿಸಿಕೊಟ್ಟ ಆಶ್ರಯದಾತ ಅಲ್ಲದೆ ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಕೊರತೆಯಾಗಬಾರದೆಂದು ಮುಂದಾಲೋಚನೆಯಿಂದ ಟಿ ವಿ ಸ್ಟೇಷನ್ ಕೆರೆ ಮತ್ತು ಕುಂದವಾಡ ಕೆರೆಗಳನ್ನು ಅಭಿವೃದ್ಧಿಪಡಿಸಿ ಇಡೀ ದಾವಣಗೆರೆಯ ಜನತೆಗೆ ಕುಡಿಯುವ ನೀರಿನ ಅನುಕೂಲ ಮಾಡಿಕೊಟ್ಟ ಭಗೀರಥ. ದಾವಣಗೆರೆಯ ಸರ್ವತೋಮುಖ ಅಭಿವೃದ್ಧಿಯ ಬಗ್ಗೆ ಕನಸು ಕಂಡ ಕನಸುಗಾರ ಎಸ್ ಎಸ್ ಎಂ ರವರು ಆ ನಿಟ್ಟಿನಲ್ಲಿ ಯೋಜನೆಯ ರೂಪುರೇಷೆಗಳ ನೀಲಿ ನಕ್ಷೆ ತಯಾರಿಸಿ, ಸ್ಮಾರ್ಟ್ ಸಿಟಿ ಯೋಜನೆಗೆ ದಾವಣಗೆರೆ ಯನ್ನು ಆಯ್ಕೆ ಮಾಡಿಸಿದ್ದಲ್ಲದೆ ಸಾಕಷ್ಟು ಅನುದಾನದೊಂದಿಗೆ ಸ್ಮಾರ್ಟ್ ಸಿಟಿ ಯೋಜನೆಯನ್ನು ದಾವಣಗೆರೆಗೆ ತಂದುಕೊಟ್ಟ ಎಸ್ ಎಸ್ ಎಂ ರವರು ಅಭಿವೃದ್ಧಿಯ ಬಗ್ಗೆ ಕಂಡಿದ್ದ ಕನಸನ್ನು ನನಸನ್ನಾಗಿ ಮಾಡಿದ ಅಭಿವೃದ್ಧಿಯ ಹರಿಕಾರ.

### ಜ್ಯಾತ್ಯಾತೀತ ನಾಯಕ

"ಹಗಲ ಇರುಳ ಮಾಡಿ, ಇರುಳ ಹಗಲ ಮಾಡಿ, ಆಚಾರವ ಅನಾಚಾರವ ಮಾಡಿ, ಅನಾಚಾರವ ಆಚಾರವ ಮಾಡಿ, ಭಕ್ತನ ಭವಿಯ ಮಾಡಿ, ಭವಿಯ ಭಕ್ತನ ಮಾಡಿ ನುಡಿವವರ ಮಾತ ಕೇಳಲಾಗದು ಗುಹೇಶ್ವರಾ".. ಎಂಬ ಅಲ್ಲಮ ಪ್ರಭುದೇವರ ನುಡಿಗಳಂತೆ, ಎಸ್. ಎಸ್. ಮಲ್ಲಣ್ಣ ನವರ ಬಗ್ಗೆ, ಅವರ ಅಭಿವೃದ್ಧಿ ಪರ ಚಿಂತನೆಗಳ ಬಗ್ಗೆ, ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಯ ಬಗ್ಗೆ, ಅವರ ಧರ್ಮಾತೀತ, ಜ್ಯಾತ್ಯಾತೀತ ಮತ್ತು ಕೋಮು ಸೌಹಾರ್ದತೆಯ ನಿಲುವುಗಳ ಬಗ್ಗೆ ಅಪಪ್ರಚಾರದ ಮೂಲಕ ಜನರನ್ನು ಮರುಳು ಮಾಡುವವರ ಬಗ್ಗೆ, ನಾಟಕ ಮಾಡುವ ನುಡಿ ಜಾಣರ ಬಗ್ಗೆ ತಲೆ ಕೆಡಿಸಿಕೊಳ್ಳದೆ ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಗಾಗಿ, ಜಿಲ್ಲೆಯ ಜನತೆಯ ಹಿತ ಕಾಯುವ ಬಗ್ಗೆ , ಶರಣರು ಕಂಡ ಕಲ್ಯಾಣವನ್ನು ಕೇಂದ್ರವಾಗಿರಿಸಿಕೊಂಡು ತಮ್ಮ ಆತ್ಮ ಕಲ್ಯಾಣದ ಜೊತೆಗೆ ಲೋಕ ಕಲ್ಯಾಣಕ್ಕಾಗಿ, ಭ್ರಷ್ಟಾಚಾರ, ಜಾತೀಯತೆ, ಕೋಮು ಸಂಘರ್ಷ,



–ವಿಶ್ವಾಸದಿಂದ, ಭ್ರಾತೃತ್ವದಿಂದ, ಬಂಧುತ್ವದಿಂದ ಸೌಹಾರ್ದತೆಯಿಂದ ಬಾಳಬೇಕೆನ್ನುವ, ದ್ವೇಷ –ವೈಷಮ್ಯ ಗಳ ಗೋಡೆಯನ್ನು ಕೆಡವೋಣ, ಪ್ರೀತಿ ವಿಶ್ವಾಸಗಳ ಸೇತುವೆಯನ್ನು ಕಟ್ಟೋಣ ಎನ್ನುವ ಸಿದ್ಧಾಂತವನ್ನು ಇಟ್ಟುಕೊಂಡಿರುವ ಅಂತಕರಣವುಳ್ಳ ಸಮಾನತೆಯ ಚಿಂತಕ, ಜ್ಯಾತ್ಯಾತೀತ ನಾಯಕ, ಕರುಣಾಮಯಿ ಎಂದರೆ ಎಸ್ ಎಸ್ ಮಲ್ಲಣ್ಣ ನವರು.

ಜ್ಞಾನದ ಭಂಡಾರವೇ ಆಗಿರುವ ಎಸ್ ಎಸ್ ಮಲ್ಲಣ್ಣ ನವರು ಉದ್ಯಮದಲ್ಲಿ, ಸಮಾಜ ಸೇವೆಯಲ್ಲಿ, ಶೈಕ್ಷಣಿಕ ಸೇವೆಯಲ್ಲಿ, ರಾಜಕೀಯ ಸೇವೆಯಲ್ಲಿ, ಜಿಲ್ಲೆಯ ಅಪರಾಧ,ಅನೈತಿಕತೆಗಳಿಂದ ಮುಕ್ತವಾದ ಜಿಲ್ಲೆಯನ್ನಾಗಿ ಮಾಡಲು, ಸಾಮಾಜಿಕ, ಧಾರ್ಮಿಕ, ಆದ್ಯಾತ್ಮಿಕ, ಆರ್ಥಿಕ, ಸಾಂಸ್ಕೃತಿಕ ಪರಿವರ್ತನೆ ಮಾಡಲು ಇತರೆ ರಾಜಕಾರಣಿಗಳೊಂದಿಗೆ, ಅಧಿಕಾರಿ ಗಳೊಂದಿಗೆ, ಸಾರ್ವಜನಿಕರೊಂದಿಗೆ ಉತ್ತಮ ಭಾಂದವ್ಯ ವನ್ನು, ಬಂಧುತ್ವ ವನ್ನು ಇಟ್ಟುಕೊಂಡು ಇಡೀ ಜಿಲ್ಲೆಯನ್ನು ಬೆರಗುಗೊಳ್ಳುವಂತೆ ಮಾಡಲು ಕಾಲ ಪ್ರಜ್ಞೆ, ಕಾಯಕ ಶ್ರದ್ಧೆ ಯೊಂದಿಗೆ ಹಗಲಿರಳು ದುಡಿಯುತ್ತಿರುವ, ಅವಿರತ ಶ್ರಮಿಸುತ್ತಿರುವ ಆದರ್ಶ, ಅನುಕರಣೀಯ, ಜನಾಭಿಮಾನಿ ಸಶಕ್ತ ರಾಜಕಾರಣಿ ಎಂದರೆ ಎಸ್. ಎಸ್. ಮಲ್ಲಣ್ಣ ನವರು. ಎಸ್ ಎಸ್ ಎಂ ಗೆ ಎಸ್ ಎಸ್ ಎಂ ರವರೇ ಮಾದರಿ ಎಂದರೆ ಅತಿಶಯೋಕ್ತಿ ಎನಿಸದು.

### ಬಸವಣ್ಣನವರ ಅನುಯಾಯಿ

ತಮ್ಮ ಪ್ರಾಮಾಣಿಕತೆ, ದುಡಿಮೆಯಲ್ಲಿ ಶ್ರದ್ದೆ, ತಮಗೆ ಸರಿಕಂಡದ್ದನ್ನು ಮಾಡುವ ಏಕವಾದ ಮನಸ್ಸು, ಅಂತ ಸಾಕ್ಷಿಗೆ ಅಂಜಿ ನಡೆಯುವ ಋಜುತ್ವ, ಕಂಡ ಕನಸನ್ನು, ಹಿಡಿದ ಕೆಲಸವನ್ನು ಮಾಡಿ ತೋರಿಸುವ ಛಲದಂಕ ಮಲ್ಲ,ಎಲ್ಲಕ್ಕಿಂತ ಮಿಗಿಲಾಗಿ "ಎನಗಿಂತ ಕಿರಿಯರಿಲ್ಲ" ಎನ್ನುವ ಬಸವಣ್ಣ ನವರ ವಿನಯ ಇವು ಎಸ್. ಎಸ್. ಮಲ್ಲಣ್ಣ ನವರ ವ್ಯಕ್ತಿತ್ವದ ಪ್ರಮುಖ ಗುಣ ಲಕ್ಷಣಗಳು.

"ನುಡಿಯಲು ಬಾರದು ಕೆಟ್ಟ ನುಡಿಗಳ ,
ನಡೆಯಲು ಬಾರದು ಕೆಟ್ಟ ನಡೆಗಳ ,
ನುಡಿದಡೇನು ನಡೆಯದಿರ್ದಡೇನು?
ಹಿಡಿದ ವ್ರತವ ಬಿಡದಿರಲು ಅದೇ ಮಹಾಜ್ಞಾನದಾಚಾರಣೆ ಎಂಬೆನು" ಅಜಗಣ್ಣ ತಂದೆ ಎಂಬ ಮಹಾಜ್ಞಾನಿಯಾದ ವಚನಗಾರ್ತಿ ಶರಣೆ ಮುಕ್ತಾಯಕ್ಕನ ವಚನದಂತೆ ಒಮ್ಮೆ ಹಿಡಿದ ಕಾರ್ಯವನ್ನು –ಕಾಯಕವನ್ನು ಬಿಡದೆ ತಮ್ಮ ಅರಿವು–ಆಚಾರ ಗಳಿಂದ ತಮ್ಮ ಬದುಕಿನಲ್ಲಿ, ಉದ್ಯಮದಲ್ಲಿ ಯಶಸ್ಸನ್ನು ಪಡೆದ ಸಾಧಕ– ಜ್ಞಾನಿ ಎಂದರೆ ಎಸ್. ಎಸ್. ಮಲ್ಲಣ್ಣ ನವರು.

"ಕಣ್ಗೆ ಶೃಂಗಾರ ಗುರುಹಿರಿಯರ ನೋಡುವುದು, ಕರ್ಣಕ್ಕೆ ಶೃಂಗಾರ ಪುರಾತನರ ಸಂಗೀತನಂಗಳ ಕೇಳುವುದು, ದಾವಣಗೆರೆ ಜಿಲ್ಲೆಯ ಜನತೆಗೆ ಶೃಂಗಾರ ಎಸ್ ಎಸ್ ಮಲ್ಲಣ್ಣ ನವರ ಅಭಿವೃದ್ಧಿಪರ ದೂರದೃಷ್ಟಿಯ ಚಿಂತನೆ ಗಳನ್ನು ನೋಡುವುದು".

"ಸೂರ್ಯನ ಉದಯ ತಾವರೆಗೆ ಜೀವಾಳ, ಚಂದ್ರಮನ ಉದಯ ನೆಯ್ದಿಲೆಗೆ ಜೀವಾಳ ಎನ್ನುವ ಹಾಗೆ ಎಸ್ ಎಸ್ ಮಲ್ಲಣ್ಣ ನವರ ಉದಯ ದಾವಣಗೆರೆ ಜಿಲ್ಲೆಯ ಜನತೆಗೆ ಜೀವಾಳ" ಎಂದರೆ ಅತಿಶಯೋಕ್ತಿ ಯಾಗಲಾರದು.

ಎಸ್ ಎಸ್ ಮಲ್ಲಣ್ಣನೆಂದರೆ ಸಾಕು "ಹಲವರಿಗೆ ಹಾವು ಕಚ್ಚಿದಂತೆ, ಕೆಲವರಿಗೆ ಚೇಳು ಕುಟುಕಿದಂತೆ ಕಂಡರೆ, ಅನೇಕರಿಗೆ ಕಾರ್ಗತ್ತಲಿನಲ್ಲಿ ಜ್ಯೋತಿಯಂತೆ " ಕಾಣುವರು. ಅಣ್ಣ ಬಸವಣ್ಣನವರ ವಾಣಿಯಂತೆ...

ಇವನಾರವ ಇವನಾರವ ಇವನಾರವನೆಂದೆನಿಸದೆ, ಇವ ನಮ್ಮವ ಇವ ನಮ್ಮವ ಇವ ನಮ್ಮವನೆಂದೆನಿಸುತ್ತಾ ಸರ್ವರನ್ನೂ ಜಾತ್ಯಾತೀತವಾಗಿ, ಧರ್ಮಾತೀತವಾಗಿ, ಬಡವ –ಬಲ್ಲಿದನೆಬ ತಾರತಮ್ಯವಿಲ್ಲದೆ ಎಲ್ಲರನ್ನೂ ಅಪ್ಪಿಕೊಳ್ಳುವಂತಹ ಮಾನವೀಯ ಗುಣಗಳನ್ನು, ಮೌಲ್ಯ ಗಳನ್ನು ಹೊಂದಿರುವ, ಮಾನವನ ಘನತೆ –ಗೌರವವನ್ನು ಎತ್ತಿ ಹಿಡಿಯಬೇಕೆನ್ನುವ,ಕುಲ, ಜಾತಿ, ಸೀಮೆಗಳ ಪರಿಮಿತಿ ಇಲ್ಲದೆಯೇ, ಜಾತಿ–ವಿಜಾತಿಗಳ, ಮತ–ಪಂಥ ಗಳ, ಪ್ರಾಂತ–ಪ್ರದೇಶಗಳ ಭೇದವಿಲ್ಲದೆ ಪ್ರತಿಯೊಬ್ಬರ ಕಲ್ಯಾಣವನ್ನೇ, ಲೇಸನ್ನೇ ಬಯಸುತ್ತಿರುವ ಜಿಲ್ಲೆಯ ಜನತೆಗೆ ಬೆಳದಿಂಗಳಂತಿರುವ ಎಸ್. ಎಸ್ ಮಲ್ಲಣ್ಣ ನವರು ಒಬ್ಬ ಮಾದರಿ ರಾಜಕಾರಣಿ. ಮನುಷ್ಯ ಮನುಷ್ಯರನ್ನು ಪ್ರೀತಿ

ಅಭಿವೃದ್ಧಿಯಲ್ಲಿ ಮನೆ –ಮಠ, ಊಟ –ನಿದ್ರೆ ಗಳೆನ್ನದೆ ಹಗಲಿರಳು ದಣಿವರಿಯದೆ ದುಡಿದು ಎಲ್ಲರೂ ಮೆಚ್ಚುವಂತೆ ಬೆಚ್ಚುವಂತೆ ಮಾಡಿದ ಅಭಿವೃದ್ಧಿಯ ಸಾಧಕರು.

" ಹಗಲು ನಾಲ್ಕು ಜಾವ ಅಶನಕ್ಕೆ ಕುದಿವರು,ಇರಳು ನಾಲ್ಕು ಜಾವ ವ್ಯಸನಕ್ಕೆ ಕುದಿವರು, ಅಗಸ ನೀರೊಳ ಗಿದ್ದು ಬಾಯಾರಿ ಸತ್ತಂತೆ, ತಮ್ಮೊಳಗಿರ್ದ ಮಹಾಘನವನರಿಯರು ಚೆನ್ನಮಲ್ಲಿಕಾರ್ಜುನಾ ಎಂಬ ವಚನಗಾರ್ತಿ ಅಕ್ಕ ಮಹಾದೇವಿಯರ ನುಡಿಯಂತೆ, ಮಲ್ಲಣ್ಣ ನವರಲ್ಲಿರುವ ದೂರದೃಷ್ಟಿಯ ಅಭಿವೃದ್ಧಿ ಪರ ಚಿಂತನೆಗಳನ್ನು, ಜನತೆಯ ಹಿತ ಕಾಯುವ ತುಡಿತವನ್ನು, ಅವರಲ್ಲಿರುವ ಭ್ರಾತೃತ್ವ ಮತ್ತು ಬಂಧುತ್ವದ ಗುಣಗಳನ್ನು ಗ್ರಹಿಸದಿರುವುದು ಅಗಸ ನೀರೊಳಗೆ ಇದ್ದುಕೊಂಡು ಬಾಯಾರಿ ಸತ್ತಂತೆ ಆಗಿದೆ ಎಂದರೆ ತಪ್ಪಾಗಲಾರದು.

### ನೊಂದವರ ದ್ರುವತಾರೆ

ದಾವಣಗೆರೆಯ ದ್ರುವತಾರೆಯಾದ ಎಸ್ ಎಸ್ ಮಲ್ಲಣ್ಣ ನವರು ಸಚಿವರಾಗಿದ್ದ ಅವಧಿಯಲ್ಲಿ ನಗರದಲ್ಲಿ ಆಕರ್ಷಣೀಯವಾದ ಗ್ಲಾಸ್ ಹೌಸ್ ನ್ನು, ಹಲವು ಪಾರ್ಕ್ ಗಳನ್ನು ನಿರ್ಮಿಸಿ ಮತ್ತು ನಗರದ ತುಂಬಾ ಮತ್ತು ಪಿ ಬಿ ರಸ್ತೆಯ ಉದ್ದಕ್ಕೂ ಹೈಮಾಸ್ಟ್ ದೀಪಗಳನ್ನು ಹಾಕಿಸಿ, ಮಕ್ಕಳಿಗಾಗಿ ಆಡಲು ನೂತನ ಮಾದರಿಯ ಮಕ್ಕಳ ಪಾರ್ಕ್ ನ್ನು ಮತ್ತು ಆಧುನಿಕ ಕ್ಲಾಕ್ ಟವರ್ ನ್ನು ನಿರ್ಮಿಸಿ, ಪ್ಲೇ ಓವರ್‌ಗಳನ್ನು ನಿರ್ಮಿಸಿ ದಾವಣಗೆರೆ ನಗರಕ್ಕೆ ಸೌಂದರ್ಯದ ಮೆರಗನ್ನು ತಂದು ಕೊಟ್ಟವರು ಎಸ್ ಎಸ್ ಎಂ ರವರು. ಹಾಗೂ ಕರೋನ ಸಮಯದಲ್ಲಿ ತನ್ನ ಕ್ಷೇತ್ರದ ಜನತೆಯ ಆರೋಗ್ಯವನ್ನು ಕಾಪಾಡುವುದಕ್ಕೋಸ್ಕರ ತಮ್ಮ ಸ್ವಂತ ಹಣದಲ್ಲಿ ಕೋವಿಡ್ ಲಸಿಕೆಯನ್ನು ತರಿಸಿ ಜನತೆಗೆ ಉಚಿತವಾಗಿ ನೀಡಿ ಜನರ ಆರೋಗ್ಯ ಕಾಪಾಡಿದ ಆರೋಗ್ಯದಾತ. ಎಸ್ ಎಸ್ ಮಲ್ಲಣ್ಣ ನವರು 2023 ರಲ್ಲಿ ಮತ್ತೆ ಶಾಸಕರಾಗಿ ಸಿದ್ದರಾಮಯ್ಯ ನವರ ಮಂತ್ರಿ ಮಂಡಲದಲ್ಲಿ ಗಣಿ, ಭೂ ವಿಜ್ಞಾನ, ತೋಟಗಾರಿಕೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾಗಿ ಜನಪರ ಕೆಲಸಗಳನ್ನು ಮಾಡುತ್ತಾ ಜನಮಾನಸದಲ್ಲಿ ಮಾಸದ ಹೆಜ್ಜೆಯಾಗಿರುವ ದಾವಣಗೆರೆ ಜಿಲ್ಲೆಯ ಮಾಣಿಕ್ಯ.

ಹೀಗೆ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿರುವ ಎಸ್ ಎಸ್ ಮಲ್ಲಣ್ಣ ನವರು "ಸುಜ್ಞಾನ ಜ್ಯೋತಿಯಾಗಿ, ಸುಮ ಮಾನಸ ಸಿರಿಯಾಗಿ, ಸಂತಸದ ಸಾಗರವಾಗಿ ದಾವಣಗೆರೆ ಜಿಲ್ಲೆಯ ಜನತೆಯ ಬೆನ್ನ ಹಿಂದಿನ ಶಕ್ತಿಯಾಗಿ –ಕಣ್ಣ್ ಮುಂದಿನ ಬೆಳಕಾಗಿದ್ದಾರೆ". ಇಂತಹ ದಿಟ್ಟ ಹೆಜ್ಜೆಯ ದೀಮಂತ ರಾಜಕಾರಿಣಿ, ಛಲದಂಕಮಲ್ಲ, ಹೃದಯವಂತ,ಕರುಣಾಳು, ದಾವಣಗೆರೆ ಜಿಲ್ಲೆಯ ಚೌಕೀದಾರ, ಮಾನಸಪುತ್ರ ಎಸ್ ಎಸ್ ಮಲ್ಲಣ್ಣ ನವರಿಗೆ ಆ ಭಗವಂತ ಮತ್ತು ಮಾತಾ–ಪಿತೃ ರ, ಬಸವಾದಿ ಶಿವಶರಣರ ಆಶೀರ್ವಾದಗಳೊಂದಿಗೆ ಹೆಚ್ಚಿನ ಆರೋಗ್ಯ –ಆಯುಷ್ಯ ಕರುಣಿಸಲೆಂದು ಆಶಿಸುತ್ತಾ

**ಎಸ್. ಎಸ್. ಮಲ್ಲಣ್ಣ ನವರ 58 ನೇ ವರ್ಷದ ಹುಟ್ಟು ಹಬ್ಬಕ್ಕೆ ನಾವೆಲ್ಲರೂ ಶುಭಾಶಯಗಳನ್ನು ಕೋರೋಣ ಬಂಧುಗಳೇ...**

**ಕೊಂಡಜ್ಜಿ ಬಣಕಾರ್ ಶಿವಕುಮಾರ್**
**ವಕೀಲರು, ದಾವಣಗೆರೆ**
**ಮೊಬೈಲ್ : 9980184766**



**ಹಿರಿಯ ನಾಗರಿಕರ ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ನ್ಯಾಯಾಧೀಶ ಎಂ.ವಿಜಯ್ ಹೇಳಿಕೆ**

# ಜಿಲ್ಲೆಯಲ್ಲಿ ರಾಜ್ಯದ ಮೊದಲ ಹಿರಿಯ ನಾಗರಿಕ ಸಲಹಾ ಕೇಂದ್ರ ಸ್ಥಾಪನೆ

**ಚಿತ್ರದುರ್ಗ:** ಹಿರಿಯ ನಾಗರಿಕರಿಗೆ ಸರ್ಕಾರದ ಸವಲತ್ತುಗಳನ್ನು ಸಕಾಲದಲ್ಲಿ ತಲುಪಿಸಲು ರಾಜ್ಯದ ಮೊದಲ ಹಿರಿಯ ನಾಗರಿಕರ ಸಲಹಾ ಕೇಂದ್ರವನ್ನು ಜಿಲ್ಲೆಯಲ್ಲಿ ಸ್ಥಾಪಿಸಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ನಗರದ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘ, ರೋಟರಿ ಕ್ಲಬ್ ಚಿನ್ಮೂಲಾದ್ರಿ, ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳು ಇವರುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ–2025ರ ಅಂಗವಾಗಿ ಹಿರಿಯ ನಾಗರಿಕರ ಕ್ರೀಡಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಹಿರಿಯ ನಾಗರಿಕರಿಗೆ ಉಚಿತ ಆರೋಗ್ಯ ತಪಾಸಣೆ ಹಾಗೂ ಔಷಧಿ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಹಿರಿಯ ನಾಗರಿಕರ ಕಲ್ಯಾಣ ಇಲಾಖೆ ಸಹಯೋಗದಲ್ಲಿ ನಗರದ ಲೋಕಾಯುಕ್ತ ಕಚೇರಿ ಹಿಂಭಾಗದಲ್ಲಿ ಸಲಹಾ ಕೇಂದ್ರ ಕಾರ್ಯನಿರ್ವಹಿಸುತ್ತಿದೆ. ರಾಜ್ಯಕ್ಕೆ ಮಾದರಿಯಾಗುವ ರೀತಿಯಲ್ಲಿ ಸಲಹಾ ಕೇಂದ್ರ ಕೆಲಸ ನಿರ್ವಹಿಸಬೇಕು ಎಂದು ನ್ಯಾಯಾಧೀಶ ಎಂ.ವಿಜಯ್ ಹೇಳಿದರು.

ಇಳಿ ವಯಸ್ಸಿನಲ್ಲಿ ಸ್ನೇಹಿತರೊಂದಿಗೆ ಒಡನಾಟ ಇಟ್ಟುಕೊಳ್ಳುವುದರಿಂದ ಒತ್ತಡ ಹಾಗೂ ಆತಂಕದಿಂದ ದೂರವಾಗಿ ಜೀವನ ನಡೆಸಬಹುದು. ಸ್ನೇಹಿತರೊಂದಿಗೆ ಬೆರೆತು ಕಾಲ ಕಳೆಯುವುದರಿಂದ ಒಳ್ಳೆಯ ಜೀವನ ನೆಮ್ಮದಿಯಾಗುತ್ತದೆ. ಸರ್ಕಾರ ಹಾಗೂ ನ್ಯಾಯಾಂಗ ಇಲಾಖೆ ಹಿರಿಯ ನಾಗರಿಕರ ಶ್ರೇಯೋಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಜಾರಿ ಮಾಡಿವೆ. ಹಿರಿಯ ನಾಗರಿಕ ಪ್ರಕರಣಗಳನ್ನು ತ್ವರಿತವಾಗಿ ವಿಚಾರಣೆಗೆ ಕೈಗೆತ್ತಿಕೊಂಡು ಇತ್ಯರ್ಥ ಪಡಿಸಲಾಗುವುದು. ನೇರವಾಗಿ ನ್ಯಾಯಾಲಯಕ್ಕೆ ಹಾಜರಾಗಿ ದೂರು ಸಲ್ಲಿಸಲು ಕಷ್ಟವಾದರೆ, ಟೋಲ್ ಫ್ರೀ ಸಂಖ್ಯೆ 15100 ಕರೆ ಅಥವಾ ಸಂದೇಶ ಮೂಲಕ ಮನವಿ ಮಾಡಿಕೊಳ್ಳಬಹುದು. ಸರ್ವೋಚ್ಚ ನ್ಯಾಯಾಲಯದಿಂದಲೇ ಸಹಾಯವಾಣಿಯನ್ನು ನಿರ್ವಹಣೆ ಮಾಡುತ್ತಿರುವುದರಿಂದ ತಕ್ಷಣವೇ ಸ್ಪಂದನೆ ಹಾಗೂ ನೆರವು ದೊರೆಯಲಿದೆ ಎಂದು ನ್ಯಾ.ಎಂ.ವಿಜಯ್ ತಿಳಿಸಿದರು.

ಜಿಲ್ಲಾ ಮಟ್ಟದಲ್ಲಿ ಉಪವಿಭಾಗಾಧಿಕಾರಿ, ಹಿರಿಯ ನಾಗರಿಕರ ಹಕ್ಕುಗಳ ಸಂರಕ್ಷಣೆಯ ಹೊಣೆ ಹೊತ್ತಿರುತ್ತಾರೆ. ಇತ್ತೀಚೆಗೆ ಜಿಲ್ಲೆಯಲ್ಲಿ ವೃದ್ಧರೊಬ್ಬರ ಜೀವರಕ್ಷಣೆ ಮಾಡುವಲ್ಲಿ ಉಪವಿಭಾಗಾಧಿಕಾರಿ ಉತ್ತಮ ಕೆಲಸ ಮಾಡಿದ್ದಾರೆ ಎಂದು ನ್ಯಾಯಾಧೀಶ ಎಂ.ವಿಜಯ್ ಮೆಚ್ಚುಗೆ ವ್ಯಕ್ತಪಡಿಸಿದರು. ಜಿಲ್ಲಾಡಳಿತ, ಜಿಲ್ಲಾ ನ್ಯಾಯಾಲಯ, ಹಿರಿಯ ನಾಗರಿಕರ ಹಕ್ಕುಗಳ ರಕ್ಷಣೆ ಸದಾ ಬದ್ದ ಇರುವುದಾಗಿ ತಿಳಿಸಿದರು.

ವಕೀಲರ ಸಂಘದ ಅಧ್ಯಕ್ಷ ಹೆಚ್.ಎಸ್. ಮಹೇಶ್ವರಪ್ಪ ಮಾತನಾಡಿ, ಹಿರಿಯ ನಾಗರಿಕರು ಉತ್ತಮ ಜೀವನ ಪದ್ದತಿಗಳನ್ನು ಅಳವಡಿಸಿಕೊಳ್ಳಬೇಕು. ಬದುಕಿನ ಜಂಜಾಟಗಳನ್ನು ತೊರೆದು 60 ವರ್ಷದ ನಂತರದ ನಿವೃತ್ತಿ ಜೀವನವನ್ನು ಸುಖದಿಂದ ಕಳೆಯಬೇಕು ಎಂದು ಸಲಹೆ ನೀಡಿದರು.

ಉಪವಿಭಾಗಾಧಿಕಾರಿ ಹಾಗೂ ಪಾಲಕರ ಪೋಷಣೆ ಸಂರಕ್ಷಣೆ ಹಿರಿಯ ನಾಗರಿಕರ ರಕ್ಷಣಾ ಮಂಡಳಿ ಅಧ್ಯಕ್ಷ ಮೆಹಬೂಬ್ ಜಿಲಾನಿ ಖುರೇಷಿ ಮಾತನಾಡಿ, 60 ವರ್ಷದ ನಂತರ ಮನುಷ್ಯ ಆಲೋಚನೆ ಹಾಗೂ ಜೀವನ ಪದ್ದತಿಗಳು ಬದಲಾಗುತ್ತವೆ. ಪ್ರಸ್ತುತ ಜೀವನದಲ್ಲಿ ಹಣ ಹಾಗೂ ಸಂಪತ್ತಿನ ಅಭಿಲಾಷೆಯಿಂದ ದೇವರಿಗೆ ಮೊರೆಯಿಡುತ್ತೇವೆ. ಆದರೆ ಇಳಿ ವಯಸ್ಸಿನಲ್ಲಿ ಉತ್ತಮ ಆರೋಗ್ಯ ಬೇಕು ಎಂದು ಕೇಳುವುದಿಲ್ಲ. ದೇವರು ನಮ್ಮ ಐಹಿಕ ಇಚ್ಛೆಗಳನ್ನು ಪೂರೈಸುವುದರೊಂದಿಗೆ ಆರೋಗ್ಯ ತೊಂದರೆಗಳನ್ನು ಸಹ ಕರುಣಿಸುತ್ತಾನೆ. ಆದ್ದರಿಂದ ಸಂಪತ್ತಿನ ಬದಲಿಗೆ ನಾವೆಲ್ಲರೂ ಉತ್ತಮ ಆರೋಗ್ಯವನ್ನು ಬೇಡಿಕೊಳ್ಳಬೇಕು ಎಂದರು.

ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಹಿರಿಯ ನಾಗರಿಕರ ಕ್ರೀಡಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದ ಅಂಗವಾಗಿ ಪುರುಷರಿಗೆ ಹಾಗೂ ಮಹಿಳೆಯರಿಗೆ ಪ್ರತ್ಯೇಕವಾಗಿ ಮ್ಯೂಸಿಕಲ್ ಚೇರ್, ಬಿರುಸಿನ ನಡಿಗೆ, ಬಕೆಟ್ ನಲ್ಲಿ ಬಾಲ್ ಎಸೆಯುವುದು, ಗಾಯನ ಸ್ಪರ್ಧೆ, ಏಕ ಪಾತ್ರಾಭಿನಯ ಸ್ಪರ್ಧೆಗಳು ನಡೆದವು. ಇದೇ ಸಂದರ್ಭದಲ್ಲಿ ಹಿರಿಯ ನಾಗರಿಕರಿಗೆ ಉಚಿತ ಆರೋಗ್ಯ ತಪಾಸಣೆ ಹಾಗೂ ಔಷಧಿ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಕೆ.ಹೆಚ್.ವಿಜಯ್ ಕುಮಾರ್, ರೋಟರಿ ಕ್ಲಬ್ ಚಿನ್ಮೂಲಾದ್ರಿ ಅಧ್ಯಕ್ಷ ದಿಸ್ ಶಾದ್ ಉನ್ನೀಸಾ, ರಾಜ್ಯ ಸರ್ಕಾರಿ ನಿವೃತ್ತ ನೌಕರರ ಜಿಲ್ಲಾ ಸಂಘ ಅಧ್ಯಕ್ಷ ಪ್ರೇಮನಾಥ, ರಾಜ್ಯ ಸರ್ಕಾರಿ ನಿವೃತ್ತ ನೌಕರರ ಜಿಲ್ಲಾ ಸಂಘ ನಿಕಟಪೂರ್ವ ಅಧ್ಯಕ್ಷ ರಂಗಪ್ಪ ರೆಡ್ಡಿ ಸೇರಿದಂತೆ ಹಿರಿಯ ನಾಗರಿಕರು ಇದ್ದರು.

# ಭದ್ರಾ ಬಲದಂಡೆ ನಾಲಾದಿಂದ ಹೊಸದುರ್ಗ ಮತ್ತು ತರೀಕೆರೆ ಗಳಿಗೆ ಕುಡಿಯುವ ನೀರು ಪೂರೈಕೆ

**ಹೊನ್ನಾಳಿ :** ಭದ್ರಾ ಬಲದಂಡೆ ನಾಲಾದಿಂದ ಹೊಸದುರ್ಗ ಮತ್ತು ತರೀಕೆರೆ ಗಳಿಗೆ ಕುಡಿಯುವ ನೀರು ಪೂರೈಕೆ ಕಾಮಗಾರಿ ಕುರಿತು ತಾಲೂಕಿನ ಕುಂದೂರಿನಲ್ಲಿ ಮಾಜಿ ಸಚಿವರು,ಬಿಜೆಪಿ ಮುಖಂಡರುಗಳು ರೈತ ಸಮಾವೇಶ ಮಾಡಿದ ಸಂದರ್ಭದಲ್ಲಿ ಅಧ್ಯಕ್ಷತೆ ವಹಿಸಿದ್ದ ರೈತ ಒಕ್ಕೂಟದ ಮುಖಂಡ ಕೋಳೇನಳ್ಳಿ ಸತೀಶ್ ಅವರು ಸ್ಥಳೀಯ ಶಾಸಕ ಡಿ.ಜಿ.ಶಾಂತನಗೌಡ ವಿರುದ್ಧ ಆರೋಪ ಮಾಡಿ ಶಾಸಕರು ಗುತ್ತಿಗೆದಾರರಿಂದ ಹಣ ಪಡೆದಿದ್ದು ಈ ಕಾರಣಕ್ಕೆ ಅವರು ಸುಮ್ಮನಿದ್ದಾರೆ, ಹಣ ಪಡೆದಿಲ್ಲವೆಂದಾದರೆ ಈ ಬಗ್ಗೆ ಕುಂದೂರು ಆಂಜನೇಯ ಸ್ವಾಮಿ ದೇವಸ್ಥಾನಕ್ಕೆ ಅವರು ಬಂದು ಪ್ರಮಾಣ ಮಾಡಲಿ ಎಂದು ಸವಾಲು ಹಾಕಿದ್ದರು. ಈ ಸವಾಲನ್ನು ಸ್ವೀಕರಿಸಿದ ಶಾಸಕ ಡಿ.ಜಿ.ಶಾಂತನಗೌಡ ಸೆ.20ರ ಶನಿವಾರ ಕುಂದೂರು ದೇವಸ್ಥಾನಕ್ಕೆ ಪ್ರಮಾಣ ಮಾಡಲು ಸಿದ್ದರಾಗಿ ಬಂದಿದ್ದರು, ಆದರೆ ಸವಾಲು ಹಾಕಿದ್ದ ರೈತ ಮುಖಂಡ ಕೋಳೇನಹಳ್ಳಿಸತೀಶ್ ಅವರೇ ಗೈರು ಅಗಿದ್ದರು.

ತಾಲೂಕಿನ ಕುಂದೂರು ಅಂಜನೇಯ ಸ್ವಾಮಿ ದೇವಸ್ಥಾನಕ್ಕೆ ಸೆ.20 ಶನಿವಾರ ಅಣೆ ಪ್ರಮಾಣ ಮಾಡಲು ಸಿದ್ದರಾಗಿ ಕೂಂದೂರಿಗೆ ಮಧ್ಯಾಹ್ನ 1 ಗಂಟೆಗೆ ಬಂದಿದ್ದ ಸ್ಥಳೀಯ ಶಾಸಕ ಡಿ.ಜಿ.ಶಾಂತನಗೌಡ ಅವರು ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ನಂತರ ಜನರನ್ನುದ್ದೇಶಿಸಿ ಮಾತನಾಡಿ, ಪ್ರಮಾಣಕ್ಕೆ ಬರುವ ವಿಚಾರವಾಗಿ ಮುಂಚಿತವಾಗಿ ಎಲ್ಲಾ ಮಧ್ಯಮಗಳಲ್ಲಿ, ಸಾಮಾಜಿಕ ಜಾಲತಾಣಗಳಲ್ಲಿ ತಿಳಿಸಲಾಗಿತ್ತು, ತಾನು ಭದ್ರಾ ಬಲದಂಡೆ ಕಾಮಗಾರಿ ವಿಚಾರವಾಗಿ ಗುತ್ತಿಗೆದಾರರಿಂದ ಹಣ ಪಡೆಯದೇ ಇರುವ ಕಾರಣ ಧೈರ್ಯವಾಗಿ ಪ್ರಮಾಣ ಮಾಡಲು ಬಂದಿದ್ದೇನೆ, ಅದರೆ ಸವಾಲು ಎಸೆದವರೇ ಪತ್ತೆ ಇಲ್ಲ ಎಂದರೆ ಈ ಬಗ್ಗೆ ಜನತೆಯೇ ತೀರ್ಮಾನ ತೆಗೆದುಕೊಳ್ಳಬೇಕು ಇದರಿಂದ ಸವಾಲು ಹಾಕಿದವರೇ ಭ್ರಷ್ಟರು ಎಂದು ಕೋಳೇನಹಳ್ಳಿ ಸತೀಶ್ ಅವರು ತನ್ನನ್ನು ತಾನೇ ಸಾಬೀತು ಪಡೆಸಿಕೊಂಡಂತಾಗಿದೆ ಎಂದು ಖಾರವಾಗಿ ನುಡಿದರು.



ಕಳೆದ ಕೆಲವಾರು ತಿಂಗಳಿನಿಂದ ಭದ್ರಾ ಬಲದಂಡೆ ನಾಲೆಯಿಂದ ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ,ಚಿಕ್ಕಮಗಳೂರು ಜಿಲ್ಲೆಯ ತರೀಕರೆ ಪಟ್ಟಣಗಳಿಗೆ ಕುಡಿಯುವ ನೀರು ಒಯ್ಯುವ ಕಾಮಗಾರಿ ನಡೆಯುತ್ತಿದ್ದು ಬಹುಪಾಲು ಮುಕ್ತಾಯ ಹಂತದಲ್ಲಿದೆ.ಆಲ್ಲಿನ ವಸ್ತುಸ್ಥಿತಿಗಳ ಬಗ್ಗೆ ಸಮಗ್ರ ಮಾಹಿತಿ ಪಡೆದು, ನಂತರ ತಮ್ಮ ಕ್ಷೇತ್ರದ ಕುಂದೂರು ಅಂಜನೇಯ ಸ್ವಾಮಿ ದೇವಸ್ಥಾನ ಆವರಣದಲ್ಲಿ ಅಚ್ಚುಕಟ್ಟು ಪ್ರದೇಶಗಳ ಶಾಸಕಕರುಗಳು, ಮುಖಂಡರೊಂದಿಗೆ ರೈತ ಸಮಾವೇಶ ನಡೆಸಿ ರೈತರಿಗೆ ಈ ಕಾಮಗಾರಿಯಿಂದ ಯಾವುದೇ ತೊಂದರೆ ಇಲ್ಲ ಎಂದು ಮನವರಿಕೆ ಮಾಡಿಕೊಡಲಾಗಿತ್ತು,

ಕೆಲವಾರು ದಿನಗಳ ನಂತರ ಕುಂದೂರಿನ ಇದೇ ದೇವಸ್ಥಾನದ ಅವರದಲ್ಲಿಯೇ ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಅವರ ನೇತೃತ್ವದಲ್ಲಿ ಅನೇಕ ಮುಖಂಡರುಗಳು ರೈತ ಸಮಾವೇಶ ನಡೆಸಿ ಅವರ ದೃಷ್ಟಿಕೋನದಲ್ಲಿ ಸಾಧಕ-ಬಾಧಕಗಳ ಕುರಿತು ಮಾತನಾಡಿದ್ದರು.ಈ

ಸಮಾವೇಶದ ಅಧ್ಯಕ್ಷತೆವಹಿಸಿದ್ದ ಜಿಲ್ಲಾ ರೈತ ಒಕ್ಕೂಟದ ಅಧ್ಯಕ್ಷ ಕೊಳೆನಹಳ್ಳಿ ಸತೀಶ್ ಅವರು ತಮ್ಮ ಭಾಷಣದಲ್ಲಿ, ಸ್ಥಳೀಯ ಶಾಸಕರು ಭದ್ರಾ ನಾಲೆ ಕಾಮಗಾರಿ ಗುತ್ತಿಗೆದಾರರಿಂದ ಹಣಪಡೆದುಕೊಂಡು ಸುಮ್ಮನಾಗಿದ್ದಾರೆ, ಹಣ ಪಡೆದೇ ಇದ್ದರೆ ಅವರು ಇದೇ ಕುಂದೂರು ದೇವಸ್ಥಾನಕ್ಕೆ ಬಂದು ಪ್ರಮಾಣ ಮಾಡಲಿ ಎಂದು ಬಹಿರಂಗ ಸವಾಲು ಹಾಕಿದ್ದರು.

ಅವರ ಸವಾಲನ್ನು ಸ್ವೀಕರಿಸಿ ಸೆ.20ರ ಶನಿವಾರ ಅವರೇ ಹೇಳಿರುವಂತೆ ಕುಂದೂರು ಆಂಜನೇಯ ಸ್ವಾಮಿ ದೇವಸ್ಥಾನಕ್ಕೆ ಪ್ರಮಾಣ ಮಾಡಲು ಬಂದಿದ್ದೇನೆ ಆದರೆ ಸವಾಲು ಹಾಕಿದವರೇ ನಾಪತ್ತೆಯಾಗಿದ್ದಾರೆ ಇದರಿಂದ ನಿಜವಾದ ಭ್ರಷ್ಟರು ಯಾರು ಎಂದು ಜನತೆಗೆ ತಿಳಿಯುತ್ತದೆ ಎಂದು ಹೇಳಿದರು

ಈ ಸಂದರ್ಭದಲ್ಲಿ ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷ ಎಚ್.ಬಿ.ಮಂಜಪ್ಪ ಅವರು ಮಾತನಾಡಿ, ಸ್ಥಳೀಯ ಶಾಸಕರು ಈ ವಿಚಾರದಲ್ಲಿ ಪಾರದರ್ಕವಾಗಿದ್ದು, ಈ ಕಾರಣದಿಂದ ಇಂದು ಧೈರ್ಯವಾಗಿ ಅಣೆ-ಪ್ರಮಾಣ ಮಾಡಲು ಸಿದ್ದರಾಗಿ ಬಂದಿದ್ದಾರೆ ಆದರೆ ರೈತ ಮುಖಂಡ ಕೊಳೆನಳ್ಳಿ ಸತೀಶ್ ಅವರೇ ಗೈರಾಗುವ ಮೂಲಕ ತಮ್ಮ ಆರೋಪ ಹಸಿ ಸುಳ್ಳು ಎಂದು ಸಾಬೀತು ಪಡಿಸಿದ್ದಾರೆ ಎಂದು ಹೇಳಿದರು

ಕಾಂಗ್ರೆಸ್ ತಾಲೂಕು ಅಧ್ಯಕ್ಷ ಸಣ್ಣಕ್ಕಿ ಬಸವರನಗೌಡ, ಸಾಸ್ವೇಹಳ್ಳಿ ಬ್ಲಾಕ್ ಅಧ್ಯಕ್ಷ ಆರ್. ನಾಗಪ್ಪ, ಡಿ.ಸಿ.ಸಿ.ಬ್ಯಾಂಕ್ ನಿರ್ದೇಶಕ ಡಿ.ಜಿ.ವಿಶ್ವನಾಥ್, ಹಿರಿಯ ಮುಖಂಡ ವರದರಾಜಪ್ಪ ಗೌಡ ,ಕೆಚ್.ಷಣ್ಮುಖಪ್ಪ, ಕೂಲಂಬಿ ಲೋಕೇಶ್ ಪಾಟೀಲ್, ರಾಜಪ್ಪ, ಎಸ್.ಎಂ.ನಾಗರಾಜಪ್ಪ,ತಿಮ್ಮೇನಹಳ ರಾಜಣ್ಣ, ಮುಕ್ತೇನಹಳ್ಳಿ ಮುರುಳಸಿದ್ದಪ್ಪ, ಆರೆಕೆರೆ ಮಧುಗೌಡ, ಪೀರ್ಯನಾಯಕ್, ಸೇರಿದಂತೆ ಅನೇಕ ಮುಖಂಡರು,ಕಾರ್ಯಕರ್ತರು ಇದ್ದರು.

.20ಎಚ್ಎನ್ಎಲ್1ಚಿತ್ರ1: ತಾಲೂಕಿನ ಕುಂದೂರು ಆಂಜನೇಯ ಸ್ವಾಮಿ ದೇವಸ್ಥಾನದ ಅವರಣದಲ್ಲಿ ಸವಾಲನ್ನು ಸ್ವೀಕಿರಿಸಿ ಪ್ರಮಾಣ ಮಾಡಲು ಸಿದ್ದರಾಗಿ ಬಂದಿದ್ದ ಶಾಸಕ ಡಿ.ಜಿ.ಶಾಂತನಗೌಡ ಅವರು ಜನರನ್ನುದ್ದೇಶಿಸಿ ಮಾತನಾಡಿದರು.

# ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ಅರಿವು ಕಾರ್ಯಕ್ರಮ

**ಚಿಕ್ಕಮಗಳೂರು:** ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಸಾರಿಗೆ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ವತಿಯಿಂದ ನಗರದ ವಿಜಯಪುರದ ಒಕ್ಕಲಿಗರ ಸಮುದಾಯ ಭವನದಲ್ಲಿ ಸೆಪ್ಟಂಬರ್ 23 ರಂದು ಬೆಳಿಗ್ಗೆ 11 ಗಂಟೆಗೆ ಚಿಕ್ಕಮಗಳೂರು ಜಿಲ್ಲೆಯ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ಅರಿವು ಕಾರ್ಯಕ್ರಮ ನಡಯಲಿದೆ.

ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಘನ ಉಪಸ್ಥಿತರಿರಲಿದ್ದು, ಮಾನ್ಯ ಕಾರ್ಮಿಕ ಸಚಿವರಾದ ಶ್ರೀ ಸಂತೋಷ್ ಎಸ್.ಲಾಡ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಶಾಸಕ ಹೆಚ್.ಡಿ.ತಮ್ಮಯ್ಯ ಅಧ್ಯಕ್ಷತೆ ವಹಿಸುವರು. ವಿಧಾನ ಪರಿಷತ್ ಮಾನ್ಯ ಉಪ ಸಭಾಪತಿ ಶ್ರೀ ಎಂ.ಕೆ.ಪ್ರಾಣೇಶ್, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಶಾಸಕ ಟಿ.ಡಿ.ರಾಜೇಗೌಡ, ವಿಧಾನ ಪರಿಷತ್ ಸದಸ್ಯೆ ಹಾಗೂ ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷೆ ಡಾ.ಆರತಿ ಕೃಷ್ಣ, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಶ್ರೀನಿವಾಸ್, ಉಡುಪಿ-ಚಿಕ್ಕಮಗಳೂರು ಕ್ಷೇತ್ರದ ಸಂಸದ ಕೋಟ ಶ್ರೀನಿವಾಸ ಪೂಜಾರಿ ಪಾಲ್ಗೊಳ್ಳುವರು.

ರಾಜ್ಯಸಭೆ ಸದಸ್ಯರಾದ ಜೈರಾಮ್ ರಮೇಶ್, ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೇಯಸ್ ಎಂ. ಪಟೇಲ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಶಾಸಕರುಗಳಾದ ಜಿ.ಹೆಚ್.ಶ್ರೀನಿವಾಸ್, ಕೆ.ಎಸ್.ಆನಂದ್, ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯರುಗಳಾದ ಸಿ.ಟಿ.ರವಿ, ಡಾ.ಧನಂಜಯ ಸರ್ಜಿ, ಭದ್ರಾ ಕಾಡಾ ಅಧ್ಯಕ್ಷರಾದ ಡಾ.ಕೆ.ಪಿ.ಅಂಶುಮಂತ್, ಕ.ರಾ. ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್.ಹರೀಶ್, ನಗರಸಭೆ ಅಧ್ಯಕ್ಷೆ ಶೀಲಾ ದಿನೇಶ್,ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ನಯಾಜ್ ಅಹಮ್ಮದ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ, ಭಾಗವಹಿಸುವರು.ಕಾರ್ಮಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮೊಹಮ್ಮದ್ ಮೊಹಸಿನ್, ರಾಜ್ಯ ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಠಾರಿಯಾ, ಸಾರಿಗೆ ಇಲಾಖೆ ಕಾರ್ಯದರ್ಶಿ ಡಾ.ಎನ್.ವಿ.ಪ್ರಸಾದ್, ಕಾರ್ಮಿಕ ಇಲಾಖೆಯ ಆಯುಕ್ತ ಡಾ.ಗೋಪಾಲಕೃಷ್ಣ ಹೆಚ್. ಎನ್., ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು ಹಾಗೂ ಕಾರ್ಯದರ್ಶಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ ಮುಂತಾದವರು ಪಾಲ್ಗೊಳ್ಳುವರು.

# ಶ್ರೀಮಹರ್ಷಿ ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆ

**ದಾವಣಗೆರೆ :** ಸೆಪ್ಟೆಂಬರ್ 25 ರಂದು ಬೆಳಿಗ್ಗೆ 10 ಗಂಟೆಗೆ ತಹಶೀಲ್ದಾರ್ ಕಾರ್ಯಾಲಯ, ಹರಿಹರ ಇಲ್ಲಿ ಶ್ರೀಮಹರ್ಷಿ ವಾಲ್ಮೀಕಿ ಜಯಂತಿಯ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ. ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ಬೀದಿನಾಯಿಗಳ ನಿಯಂತ್ರಣಕ್ಕೆ ಅಗತ್ಯ ಮುಂಜಾಗ್ರತಾ ಕ್ರಮ : ಶೀಲಾದಿನೇಶ್

**ಚಿಕ್ಕಮಗಳೂರು:** ನಗರದಲ್ಲಿ ಬೀದಿನಾಯಿಗಳ ಉಪಟಳದಿಂದಾಗಿ ಹಲವಾರು ಮಕ್ಕಳು, ನಾಗರಿಕರನ್ನುಕಚ್ಚಿ ಗಾಯಗೊಳಿಸಿರುವುದನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರದಲ್ಲೇ ಅಗತ್ಯ ಮುಂಜಾಗ್ರತಾಕ್ರಮ ಕೈಗೊಳ್ಳಲಾಗುವುದು ಎಂದು ನಗರಸಭಾಧ್ಯಕ್ಷೆ ಶೀಲಾದಿನೇಶ್ ತಿಳಿಸಿದರು.

ಅವರು ನಗರಸಭೆಆವರಣದಲ್ಲಿಆಯೋಜಿಸಲಾಗಿದ್ದ ಪಶುಪಾಲನಾ ಇಲಾಖೆ ಹಾಗೂ ನಗರಸಭೆ ಇವರುಗಳ ಸಂಯುಕ್ತಾಶ್ರಯದಲ್ಲಿ ಬೀದಿನಾಯಗಳ ನಿಯಂತ್ರಣಕುರಿತ ವಿಶೇಷ ಸಭೆಯಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬೀದಿನಾಯಿಗಳ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಭೆ ನಡೆಸಲಾಗಿದ್ದು, ಅಗತ್ಯ ನಿಯಂತ್ರಣಕ್ಕೆ ಬೇಕಾದ ಮುಂಜಾಗ್ರತಾಕ್ರಮ ಕೈಗೊಳ್ಳುವುದರ ಬಗ್ಗೆ ಈ ಸಭೆಯಲ್ಲಿತೀರ್ಮಾನ ಕೈಗೊಳ್ಳಲಾಗಿದೆ ಎಂದು ಹೇಳಿದರು.

ನಗರಸಭೆ ಸದಸ್ಯರುತಮ್ಮ ವಾರ್ಡ್‌ಗಳಲ್ಲಿ ಬೀದಿನಾಯಿಗಳ ಉಪಟಳದಿಂದಾಗಿ ಮಕ್ಕಳು ಮತ್ತು ನಾಗರಿಕರಿಗೆ ಬಹಳ ತೊಂದರೆಯಾಗುತ್ತಿದೆಎಂದು ಬಂದ ದೂರುಗಳ ಹಿನ್ನೆಲೆಯಲ್ಲಿಅಗತ್ಯಕ್ರಮ ಕೈಗೊಳ್ಳುವುದರ ಬಗ್ಗೆ ಸೂಕ್ತ ನಿರ್ಧಾರಕ್ಕೆ ಬರಲಾಗಿದೆಎಂದರು.

ಪೌರಾಯುಕ್ತ ಬಿ.ಸಿ. ಬಸವರಾಜ್ ಮಾತನಾಡಿ, ಬೀದಿನಾಯಿಗಳ ಉಪಟಳಕ್ಕೆ ಕಡಿವಾಣ ಹಾಕುವ ದೃಷ್ಟಿಯಿಂದ ನಗರಸಭೆ ಮತ್ತು ಸ್ಥಳೀಯ ಸಂಘಸಂಸ್ಥೆಗಳನ್ನು ಒಳಗೊಂಡಂತೆ ಈ ಕುರಿತುಆರು ಬಾರಿಟೆಂಡರ್‌ಕರೆಯಲಾಗಿದ್ದು, ಯಾರೂ ಭಾಗವಹಿಸಿಲ್ಲ. ತರೀಕೆರೆಯಲ್ಲಿ 2, ಕಡೂರಿನಲ್ಲಿ 2 ಬಾರಿಟೆಂಡರ್‌ಕರೆದಿದ್ದರೂಯಾರೂ ಭಾಗವಹಿಸುತ್ತಿಲ್ಲಎಂದು ವಿಷಾಧಿಸಿದರು.



ಬೆಂಗಳೂರಿನ ಡಬ್ಲೂಬಿಎನ್‌ಎಸ್ ಸಂಸ್ಥೆ ಈಗ ಮುಂದೆ ಬಂದಿದ್ದು, ಪಶುಪಾಲನಾ ಇಲಾಖೆಯ ಸಹಯೋಗದಲ್ಲಿಆರೋಗ್ಯಪೂಣ ್ಣಚರ್ಚೆ ನಡೆದಿದೆ. ನಾಯಿಗಳನ್ನು ಹಿಡಿಯುವ ಬಗ್ಗೆ ನಗರಸಭೆ ಪೌರಕಾರ್ಮಿಕರಿಗೆತರಬೇತಿ ನೀಡಿದರೆ ಈ ಸಮಸ್ಯೆಯನ್ನು ಸಂಪೂರ್ಣ ಹತೋಟಿಗೆತಂದು ನಿಯಂತ್ರಿಸಬಹುದಾಗಿದೆ. ಈ ಸಂಬಂಧ ಜಿಲ್ಲಾಧಿಕಾರಿಗಳ ಗಮನ ಸೆಳೆಯಲಾಗಿದ್ದು, ಇದು ಒಳ್ಳೆಯ ಸಲಹೆ ಎಂದು ಹೇಳಿದ್ದಾರೆ ಎಂದರು.

ನಗರದಲ್ಲಿ ಎಬಿಸಿ ಕೇಂದ್ರಗಳನ್ನು ಸ್ಥಳೀಯ ಸಂಸ್ಥೆಗಳೇ ನಿರ್ಮಾಣ ಮಾಡುವ ನಿಟ್ಟಿನಲ್ಲಿ ವೈದ್ಯರ ನೇಮಕ ಮಾಡಿಕ್ರಮ ವಹಿಸುವುದಾಗಿ ಸಭೆಗೆ ಭರವಸೆ ನೀಡಿದರು.

ಬೀದಿನಾಯಿಗಳಿಗೆ

ನಾಗರೀಕರುಎಲ್ಲೆಂದರಲ್ಲಿಆಹಾರ

ಹಾಕುತ್ತಿದ್ದಾರೆ. ಇದರಿಂದಾಗಿ ನಾಯಿಗಳು ಮಕ್ಕಳು, ಮಹಿಳೆಯರನ್ನು ಕಚ್ಚಿ ಗಾಯಗೊಳಿಸುತ್ತಿವೆ. ಮುಂದೆ ನಗರಸಭೆಆರೋಗ್ಯ ನಿರೀಕ್ಷಕರುಗುರ್ತಿಸುವ ಸ್ಥಳದಲ್ಲಿ ಆಹಾರ ಹಾಕಬೇಕೆಂದು ಮನವಿ ಮಾಡಿದರು.

ಸಧ್ಯದಲ್ಲೇ ನಗರದಲ್ಲಿ ನಗರಸಭೆ ಸದಸ್ಯರನ್ನೊಳಗೊಂಡ ಸಭೆ ನಡೆಸಿ ಔಪಚಾರಿಕಚರ್ಚೆ ನಡೆಸಿ ಬೀದಿನಾಯಿಗಳ ನಿಯಂತ್ರಣಕ್ಕೆಅಗತ್ಯಕ್ರಮ ಕೈಗೊಳ್ಳುವ ನಿರ್ಧಾರ ಕೈಗೊಳ್ಳಲಾಗುವುದೆಂದು ಹೇಳಿದರು.

ಪಶುಪಾಲನಾ ಇಲಾಖೆಯಉಪನಿರ್ದೇಶಕ ಮೋಹನ್‌ಕುಮಾರ್ ಮಾತನಾಡಿ, ಬೀದಿನಾಯಿಗಳ ಉಪಟಳ ತಡೆಗೆ ಸಂತಾನ ಹರಣ ಶಸ್ತ್ರಚಿಕಿತ್ಸೆ ನಡೆಸಿ ಅವು ಇರುವಜಾಗಕ್ಕೆತಂದು ಬಿಡಬೇಕು ಎಂಬ ನಿಯಮವಿದೆಎಂದರು.

ನಗರದಲ್ಲಿ ಈಗಾಗಲೇ 5 ಸಾವಿರ ಬೀದಿನಾಯಿಗಳಿವೆ ಎಂದುಗುರ್ತಿಸಲಾಗಿದೆ. ಎಬಿಸಿ ಜೊತೆಗೆ ವ್ಯಾಕ್ಸಿನೇಷನ್ ಮಾಡಬೇಕು, ಇದಕ್ಕೆ ಮೂಲಭೂತ ಸೌಕರ್ಯದಅಗತ್ಯವಿದ್ದು, ಇಲಾಖೆಯಿಂದ ನಗರಸಭೆ ಸಹಕಾರ ನೀಡಿದರೆ ವಾರ್ಡ್‌ವಾರು ವ್ಯಾಕ್ಸಿನೇಷನ್ ನೀಡಲು ಬದ್ಧಎಂದು ಹೇಳಿದರು.

ಜಿಲ್ಲೆಯನ್ನು

ರೇಬಿಸ್‌ನಿಂದ ಮುಕ್ತಗೊಳಿಸಬೇಕಾದರೆ ಸರ್ವರೂಒಟ್ಟುಗೂಡಿ

ಶ್ರಮಿಸಬೇಕಾದಅಗತ್ಯವಿದೆ. ಇದಕ್ಕೆ ಇಲಾಖೆ ಮತ್ತು ನಗರಸಭೆ ಪೌರಕಾವಿ ್ಕರತಂಡದಅವಶ್ಯಕತೆಯೂ ಬಹಳ ಮುಖ್ಯಎಂದರು.ಈ ಸಂದರ್ಭದಲ್ಲಿಉಪಾಧ್ಯಕ್ಷೆ ಲಲಿತಾಬಾಯಿ ಉಪಸ್ಥಿತರಿದ್ದರು.

# ಡಾ.ವಿಷ್ಣುವರ್ಧನ್ 75ನೇ ಜನ್ಮದಿನ ಅಂಗವಾಗಿ ಕಲಾವಿದರು ಲೇಖಕರಿಗೆ ಸನ್ಮಾನ ಹಾಗೂ ಗೀತ ಗಾಯನ ಕಾರ್ಯಕ್ರಮ



**ಚಿತ್ರದುರ್ಗ :** ಭಾರತೀಯ ಯೋಗ ಶಿಕ್ಷಣ ಸಂಸ್ಥೆ, ಹಾಗೂ ಕೋಟೆ ವಾಯು ವಿಹಾರಿಗಳ ಸಂಘ ಚಿತ್ರದುರ್ಗ ಇವರು ಸಂಯುಕ್ತವಾಗಿ ಕನ್ನಡ ಚಿತ್ರರಂಗದ ಮೇರುನಟ ಡಾ. ವಿಷ್ಣುವರ್ಧನ ಅವರ 75ನೇ ಜನ್ಮದಿನದ ಅಮೃತ ಮಹೋತ್ಸವ ಅಂಗವಾಗಿ ಅವರ ಕರ್ಮ ಭೂಮಿಯದ ಚಿತ್ರದುರ್ಗ ಕೋಟೆ ಆವರಣದಲ್ಲಿ ಗುರುವಾರ ಸಂಜೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಕಾರ್ಯಕ್ರಮದಲ್ಲಿ ಡಾ. ವಿಷ್ಣುವರ್ಧನ್ ಅವರ ಜೀವನ ಕುರಿತು ಹೊರತಂದಿರುವ ' ಆ ಕರ್ಣನಂತೆ ' ಪುಸ್ತಕದ ಲೇಖಕ ಸಿದ್ದಾಪುರ ಶಿವಕುಮಾರ್ ಹಾಗೂ ಚಿತ್ರಕಲಾವಿದ ಕ್ರಿಯೇಟಿವ್ ವೀರೇಶ್ ಅವರನ್ನು ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಲೇಖಕ ಸಿದ್ದಾಪುರ ಶಿವಕುಮಾರ್ "ಡಾ. ವಿಷ್ಣುವರ್ಧನ್ ಅವರು ತಮ್ಮ ವೃತ್ತಿ ಜೀವನದಲ್ಲಿ ಮಾತ್ರವಲ್ಲದೆ, ವೈಯಕ್ತಿಕ ಜೀವನದಲ್ಲಿಯೂ ತಮ್ಮ ಮಾನವೀಯ ಮೌಲ್ಯಗಳಿಗಾಗಿ ಹೆಸರುವಾಸಿಯಾಗಿದ್ದರು. ಅಭಿಮಾನಿಗಳಿಂದ "ಸಾಹಸಸಿಂಹ" ಎಂದು ಕರೆಸಿಕೊಳ್ಳುತ್ತಿದ್ದರೂ, ಅವರ ನಿಜವಾದ ವ್ಯಕ್ತಿತ್ವ ಅತ್ಯಂತ ನಮ್ರತೆ ಮತ್ತು ನಿರ್ಗತರ ಕುರಿತು ದಯಾ ಭಾವನೆ, ಮಹಿಳೆಯರಿಗೆ, ಹಿರಿಯ ಮತ್ತು ಕಿರಿಯರಿಗೆ ನೀಡುತ್ತಿದ್ದ ಗೌರವ ನನಗೆ ಆ ಕರ್ಣನಂತೆ ಗ್ರಂಥ ರಚನೆಗೆ ಪ್ರೇರಣೆ ನೀಡಿತು ಎಂದು ತಿಳಿಸಿದರು. ಇದಕ್ಕೂ ಮೊದಲು ಡಾಕ್ಟರ್ ವಿಷ್ಣುವರ್ಧನ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಚಿತ್ರದುರ್ಗ ನಗರಸಭೆ ಸದಸ್ಯ ಆರ್. ಶ್ರೀನಿವಾಸ್ ಮಾತನಾಡಿ ಯಾವುದೇ ನಟರು ತಮ್ಮ ಪಾತ್ರಗಳ ಮೂಲಕ ಸಮಾಜದ ಮೇಲೆ ದೊಡ್ಡ ಪ್ರಭಾವ ಬೀರಬಹುದು. ಸ್ಫೂರ್ತಿದಾಯಕ ಪಾತ್ರಗಳು ಕೇವಲ ಮನರಂಜನೆ ನೀಡುವುದಲ್ಲದೆ, ಪ್ರೇಕ್ಷಕರಿಗೆ ಹೊಸ ಆಲೋಚನೆಗಳನ್ನು ಮತ್ತು ಸಕಾರಾತ್ಮಕ ಮೌಲ್ಯಗಳನ್ನು ಕಲಿಸುತ್ತವೆ. ಅಂತಹ ಪೂರ್ತಿದಾಯಕ ಮತ್ತು ಕೌಟುಂಬಿಕ ಚಲನಚಿತ್ರಗಳ ಮೂಲಕ ಅನೇಕ ಒಡೆದುಹೋದ ಕುಟುಂಬಗಳನ್ನು ಒಟ್ಟುಗೂಡಿಸಿದ ಹಿರಿಮೆ ಡಾ. ವಿಷ್ಣುವರ್ಧನ್ ಅವರಿಗೆ ಸಲ್ಲುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕೋಟೆ ವಾಯು ವಿಹಾರಿಗಳ ಸಂಘದ ಅಧ್ಯಕ್ಷ ಆರ್ ಸತ್ಯಣ್ಣ"ನಟ ಡಾ. ವಿಷ್ಣುವರ್ಧನ್ ಅವರಿಗೆ ಅವರ ಕರ್ಮಭೂಮಿಯದ ಚಿತ್ರದುರ್ಗದ ಮೇಲೆ ಅಪಾರ ಪ್ರೀತಿ ಇತ್ತು. ಇದು ಕೇವಲ ಮಾತಿನಲ್ಲಿ ಮಾತ್ರವಲ್ಲ, ಅವರ ನಡೆ ಮತ್ತು ನುಡಿಗಳಲ್ಲಿಯೂ ಕಾಣುತ್ತಿತ್ತು.ಈ ನೆಲದ ಮೇಲೆ ಅವರಿಗಿದ್ದ ಪ್ರೀತಿಯನ್ನು ಹಲವಾರು ಸಂದರ್ಶನಗಳಲ್ಲಿ ಮತ್ತು ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ವ್ಯಕ್ತಪಡಿಸಿದ್ದರು ಎಂದು ಹೇಳುತ್ತಾ ಸ್ವತಹ ತಾವೇ ಡಾಕ್ಟರ್ ವಿಷ್ಣುವರ್ಧನ್ ಭೇಟಿಯಾದ ಸಂದರ್ಭಗಳನ್ನು ಹಂಚಿಕೊಂಡರು.

ವೇದಿಕೆ ಕಾರ್ಯಕ್ರಮದ ಬಳಿಕ ಚಿತ್ರದುರ್ಗದ ಕರಡಿ ಸಿದ್ದಾಪುರ ಗ್ರಾಮದ ಗಾಯಕ ನಾಗಭೂಷಣ್ ಅವರು ನಡೆಸಿಕೊಟ್ಟ ಡಾಕ್ಟರ್ ವಿಷ್ಣುವರ್ಧನ್ ಅವರ ಚಲನಚಿತ್ರಗಳ ಗೀತಾ ಗಾಯನ ಪ್ರೇಕ್ಷಕರನ್ನು ರಂಜಿಸಿತು.

ಕಾರ್ಯಕ್ರಮದ ಆಯೋಜಕ ಹಾಗೂ ಯೋಗ ಪ್ರಚಾರಕ ರವಿ ಕೆ. ಅಂಬೇಕರ್ ನಿರೂಪಣೆ ಹೊಂದಿದ್ದ ಈ ಕಾರ್ಯಕ್ರಮದಲ್ಲಿ ಹಿರಿಯ ನಾಗರಿಕರಾದ ಕೂಬ ನಾಯಕ್, ನಿವೃತ್ತ ಪೊಲೀಸ್ ಅಧಿಕಾರಿ ಮಲ್ಲಿಕಾರ್ಜುನ ಚಾರ್, ನಿವೃತ್ತ ಪಾಚಾರ್ಯ ಡಾ. ಸಂಗೇನಹಳ್ಳಿ ಅಶೋಕ್ ಕುಮಾರ್ ಹಾಗೂ ಡಾಕ್ಟರ್ ವಿಷ್ಣುವರ್ಧನ್ ಅವರ ಅನೇಕ ಅಭಿಮಾನಿಗಳು ಭಾಗವಹಿಸಿದ್ದರು.

# ಮಕ್ಕಳ ದಸರಾ ಅಂಗವಾಗಿ ವಿವಿಧ ಸ್ಪರ್ಧೆಗಳು ಹಾಗೂ ಕಾರ್ಯಕ್ರಮ

**ಶಿವಮೊಗ್ಗ :** ಶಿವಮೊಗ್ಗ ಮಹಾನಗರ ಪಾಲಿಕೆಯು ಸೆ. 22 ಮತ್ತು 23 ರಂದು ಕುವೆಂಪು ರಂಗಮಂದಿರ, ಎನ್.ಇ.ಎಸ್. ಮೈದಾನ ಹಾಗೂ ಅಂಬೇಡ್ಕರ್ ಭವನದಲ್ಲಿ ಮಕ್ಕಳ ದಸರಾ ಅಂಗವಾಗಿ ವಿವಿಧ ಸ್ಪರ್ಧೆ ಮತ್ತು ಕಾರ್ಯಕ್ರಮಗಳನ್ನು ಆಯೋಜಿಸಿದೆ.ಸೆ. 22 ರಂದು ಬೆಳಗ್ಗೆ 9.00ಕ್ಕೆ ಕುವೆಂಪು ರಂಗಮಂದಿರ ಹಾಗೂ ಎನ್.ಇ.ಎಸ್. ಮೈದಾನದಲ್ಲಿ 5 ರಿಂದ 7ನೇ ತರಗತಿ ವಿಧ್ಯಾರ್ಥಿಗಳಿಗೆ ಮತ್ತು 8 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಚಿತ್ರಕಲಾ ಸ್ಪರ್ದೆ, ಶಿವಮೊಗ್ಗ ದಸರಾ ವೈವಿದ್ಯತೆ ಬಗ್ಗೆ ಪ್ರಬಂಧ ಸ್ಪರ್ಧೆ, ಛದ್ಮವೇಷ, 1 ನಿಮಿಷದಲ್ಲಿ ಪ್ಲಾಸ್ಟಿಕ್ ಬಾಟಲಿಗೆ ಬೊಗಸೆಯಿಂದ ನೀರು ತುಂಬಿಸುವುದು, ದೇಶಭಕ್ತಿ ಗೀತೆ ಸ್ಪರ್ದೆ, ಶಾಟ್‌ಪುಟ್ ಸ್ಪರ್ದೆ ಹಾಗೂ 100&200 ಮೀ.

ಸೆ. 23 ರಂದು ಬೆಳಗ್ಗೆ 9.00ಕ್ಕೆ ಮಕ್ಕಳ ಜಾಥಾ ಹಮ್ಮಿಕೊಂಡಿದ್ದು ಡಿ.ವಿ.ಎಸ್. ಶಾಲೆಯಿಂದ ಶಿವಮೂರ್ತಿ ಸರ್ಕಲ್ ಮಾರ್ಗವಾಗಿ ಶಿವಪ್ಪ ನಾಯಕ ವೃತ್ತದವರೆಗೆ, ಕೃಷಿ ಇಲಾಖೆಯಿಂದ ಓ.ಟಿ.ರಸ್ತೆಯ ಮಾರ್ಗವಾಗಿ ಶಿವಪ್ಪ ನಾಯಕ ವೃತ್ತದವರೆಗೆ, ಮಿಳಘಟ್ಟ ಕಡೆಯಿಂದ ಅಶೋಕವೃತ್ತದ ಮಾರ್ಗವಾಗಿ ಶಿವಪ್ಪ ನಾಯಕ ವೃತ್ತದವರೆಗೆ, ಹೊಳೆ

ಬಸ್ ಸ್ಟಾಪ್ ರಸ್ತೆಯ ಮಾರ್ಗವಾಗಿ ಶಿವಪ್ಪ ನಾಯಕ ವೃತ್ತದವರೆಗೆ ಹಾಗೂ ಜೈಲ್ ರಸ್ತೆಯಿಂದ ಗೋಪಿ ವೃತ್ತದ ಮಾರ್ಗವಾಗಿ ಶಿವಪ್ಪ ನಾಯಕ ವೃತ್ತದವರೆಗೆ ಸಾಗುತ್ತದೆ. ಅಂದು ಸಂಜೆ 5.00ಕ್ಕೆ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಸಮಾರೋಪ ಸಮಾರಂಭ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಕ್ಕಳ ದಸರಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

**ಪರಿಶಿಷ್ಟ ಜಾತಿ, ಪ.ಪಂಗಡ ಉಪಯೋಜನೆ ಪ್ರತಿ ಪರಿಶೀಲನಾ ಮೇಲ್ವಿಚಾರಣಾ ಸಮಿತಿ ಸಭೆ**

# ಸರ್ಕಾರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ಒದಗಿಸಲು ಸೂಚನೆ

**ದಾವಣಗೆರೆ:** ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಹೆಚ್ಚಿನ ಜಾಗೃತಿ ವಹಿಸಿ, ಸರ್ಕಾರದ ಯೋಜನೆಗಳನ್ನು ಸಮರ್ಪಕವಾಗಿ ತಲುಪಿಸಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ವಿವಿಧ ಇಲಾಖೆಗಳಿಂದ ಪ.ಜಾತಿ, ಪ.ಪಂಗಡ ಉಪಯೋಜನೆ, ಬುಡಕಟ್ಟು ಉಪಯೋಜನೆಯ ಅಭಿವೃದ್ಧಿ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ಮೇಲ್ವಿಚಾರಣ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರಿಗೆ ವಿವಿಧ ಇಲಾಖೆಗಳಲ್ಲಿನ ವಿಶೇಷ ಘಟಕ ಯೋಜನೆ ಮತ್ತು ಬುಡಕಟ್ಟು ಯೋಜನೆಯಡಿ ನೀಡಲಾಗುವ ಸೌಲಭ್ಯ, ಸವಲತ್ತುಗಳನ್ನು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ಒದಗಿಸಬೇಕು. ಹಾಗೆಯೇ ಈ ಇಲಾಖೆ ವ್ಯಾಪ್ತಿಗೆ ಒಳಪಡುವ ಮಕ್ಕಳಿಗೆ ಬಾಲಕಾರ್ಮಿಕ, ಜೀತ ಪದ್ಧತಿ ಕುರಿತು ಬೀದಿ ನಾಟಕ ಆಯೋಜನೆ ಮಾಡುವ ಮೂಲಕ ಹೆಚ್ಚಿನ ಜಾಗೃತಿ ಮೂಡಿಸಬೇಕು. ವಿದ್ಯಾರ್ಥಿಗಳಿಗೆ ಅವಶ್ಯ ಹಾಗೂ ಅಗತ್ಯವಾಗಿರುವ ಪಠ್ಯ, ಶೂ ಇನ್ನಿತರೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದ ಅವರು, ಕೆಲವು ಇಲಾಖೆ ಹಾಗೂ ನಿಗಮಗಳಲ್ಲಿ ಹಲವು ಲೋಪಗಳು ಕಂಡು ಬರುತ್ತಿದ್ದು, ತ್ವರಿತವಾಗಿ ಪರಿಹಾರ ಕಂಡುಕೊಂಡು ವಿವಿಧ ಇಲಾಖೆಗಳಲ್ಲಿನ ಯೋಜನೆ, ಕಾರ್ಯಕ್ರಮಗಳನ್ನು ಫಲಾನುಭಗವಿಗಳಿಗೆ ಕಾಲಮಿತಿಯೊಳಗೆ ಒದಗಿಸಬೇಕು ಎಂದು ತಾಕೀತು ಮಾಡಿದರು.



ಇದೇ ವೇಳೆ ಜೆಜೆಎಂ ಯೋಜನೆಯಡಿ ಈಗಾಗಲೇ 50 ಗ್ರಾಮಗಳನ್ನು 24*7 ಶುದ್ಧ ಕುಡಿಯುವ ನೀರು ಪೂರೈಕೆ ಮಾಡುತ್ತಿದ್ದು, ಜನವರಿ ವೇಳೆಗೆ 100 ಗ್ರಾಮಗಳಿಗೆ ಸುಸ್ಥಿರ ಮತ್ತು ಶುದ್ಧ ಕುಡಿಯುವ ನೀರು ಪೂರೈಕೆಗೆ ಕ್ರಮವಹಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಪ್ರಗತಿ ವಿವರ: ಪ್ರಸಕ್ತ ಸಾಲಿಗೆ ವಿವಿಧ ಇಲಾಖೆ, ವಿಶೇಷ ಘಟಕ ಯೋಜನೆ ಮತ್ತು ಬುಡಕಟ್ಟು ಉಪಯೋಜನೆಯಡಿ ಒಟ್ಟು 39 ಇಲಾಖೆಗಳು ಸೇರಿದಂತೆ ಕೇಂದ್ರ, ರಾಜ್ಯ ಹಾಗೂ ಜಿಲ್ಲಾ ವಲಯವಾರು ಸೇರಿದಂತೆ ಜಿಲ್ಲೆಗೆ ಒಟ್ಟು ಎಸ್.ಸಿ.ಪಿ.ಯಡಿ ರೂ.149.67 ಕೋಟಿ ಅನುದಾನ ಹಂಚಿಕೆ ಮಾಡಲಾಗಿದೆ. ಇದರಲ್ಲಿ ರೂ.80.48 ಕೋಟಿ ಬಿಡುಗಡೆಯಾದ ಅನುದಾನದಲ್ಲಿ 52.04 ಕೋಟಿ ವೆಚ್ಚ ಮಾಡಿ ಶೇ 64.67 ರಷ್ಟು ಖರ್ಚು ಮಾಡಲಾಗಿದೆ.

ಗಿರಿಜನ ಉಪಯೋಜನೆಯಡಿ 92.47 ಕೋಟಿ ಹಂಚಿಕೆಯಾಗಿದ್ದು ಬಿಡುಗಡೆಯಾದ ರೂ.48.16 ಕೋಟಿ ಮೊತ್ತದಲ್ಲಿ ರೂ.37.73 ಕೋಟಿ ಖರ್ಚು ಮಾಡಿ ಶೇ 78.35 ರಷ್ಟು ಪ್ರಗತಿ ಸಾಧಿಸಲಾಗಿದ್ದು ಎರಡು ಯೋಜನೆಗಳಿಂದ ಶಶೇ 69.87 ರಷ್ಟು ಜಿಲ್ಲಾ ಹಂತದಲ್ಲಿ ಪ್ರಗತಿ ಸಾಧಿಸಲಾಗಿದೆ.

ಕ್ರಿಯಾ ಯೋಜನೆ ಅನುಗುಣವಾಗಿ ಆಯಾ ಇಲಾಖೆಯವರು ಫಲಾನುಭವಿಗಳ ಪಟ್ಟಿ ಮತ್ತು ಯೋಜನೆಗಳಿಗೆ ಅನುಮೋದನೆ ಪಡೆದು ಬಿಡುಗಡೆಯಾದ ಮೊತ್ತವನ್ನು ಶೇ 100 ರಷ್ಟು ವೆಚ್ಚ ಮಾಡಬೇಕೆಂದು ಜಿಲ್ಲಾಧಿಕಾರಿ ಅವರು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವ ವಿಠಲ ರಾವ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್, ಪರಿಶಿಷ್ಟ ವರ್ಗಗಳ ಇಲಾಖೆ ಅಧಿಕಾರಿ ನವೀನ್ ಮಠದ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಾನಾಯ್ಕ ಸೇರಿದಂತೆ ವಿವಿಧ ಇಲಾಖೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಲೋಕ್ ಅದಾಲತ್‌ನಲ್ಲಿ 1,46,464 ಪ್ರಕರಣಗಳು ಇತ್ಯರ್ಥ: ನ್ಯಾ.ಎಂ.ಎಸ್. ಸಂತೋಷ್

**ಶಿವಮೊಗ್ಗ :** ಸೆ.13 ರಂದು ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ವಿಚಾರಣೆ ಹಂತದಲ್ಲಿ ಬಾಕಿ ಇದ್ದ ವಿವಿಧ ಸ್ವರೂಪದ ಪ್ರಕರಣಗಳು ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳು ಸೇರದಂತೆ ಒಟ್ಟು 1,46,464 ಪ್ರಕರಣಗಳನ್ನು ರಾಜಿ ಸಂಧಾನ ಮಾಡಿಸುವ ಮೂಲಕ ಇತ್ಯರ್ಥ ಪಡಿಸಲಾಯಿತು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ಎಸ್. ಸಂತೋಷ್ ತಿಳಿಸಿದ್ದಾರೆ.ಪ್ರಕರಣಗಳನ್ನು ರಾಜಿ ಮಾಡಿಸಲು ಶಿವಮೊಗ್ಗ ಜಿಲ್ಲೆಯಲ್ಲಿನ ಎಲ್ಲಾ ತಾಲ್ಲೂಕುಗಳ ನ್ಯಾಯಾಲಗಳನ್ನು ಒಳಗೊಂಡಂತೆ ಒಟ್ಟು 38 ಲೋಕ್ ಅದಾಲತ್ ಪೀಠಗಳನ್ನು ರಚನೆ ಮಾಡಲಾಗಿದ್ದು, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಂಜುನಾಥ ನಾಯಕ್ ರವರ ಮಾರ್ಗದರ್ಶನದಲ್ಲಿ ವಿವಿಧ ಪ್ರಕರಣಗಳನ್ನು ರಾಜಿ ಸಂಧಾನ ಮಾಡಿಸಲಾಯಿತು ಎಂದು ತಿಳಿಸಿದ್ದಾರೆ.ವಿವಿಧ ಸ್ವರೂಪದ 14,550 ಹಾಗೂ ವ್ಯಾಜ್ಯ ಪೂರ್ವ 1,13,914 ಪ್ರಕರಣಗಳನ್ನು ರಾಜಿ ಸಂಧಾನ ಮಾಡಲಾಗಿದ್ದು, ಇವುಗಳ ಪೈಕಿ 16 ದಂಪತಿಗಳು ತಮ್ಮ ಪ್ರಕರಣವನ್ನು ಹಿಂಪಡೆದು ಒಟ್ಟಾಗಿ ಜೀವನ ನಡೆಸುವಂತೆ ರಾಜಿ ಮಾಡಿಕೊಂಡಿದ್ದು ವಿಶೇಷವಾಗಿದೆ. ಹತ್ತು ವರ್ಷಕ್ಕಿಂತ ಹಳೆಯದಾದ 6, ಐದು ವರ್ಷಕ್ಕಿಂತ ಹಳೆಯದಾದ 49 ಹಾಗೂ ಹಿರಿಯ ನಾಗರೀಕರಿಗೆ ಸಂಬಂಧಿಸಿದ ಒಟ್ಟು 31 ಪ್ರಕರಣಗಳು ರಾಜಿ ಸಂಧಾನದಿಂದ ಇತ್ಯರ್ಥಗೊಂಡಿವೆ ಎಂದು ಮಾಹಿತಿ ನೀಡಿದ್ದಾರೆ.ಸಾಥಿ ಅಭಿಯಾನದಡಿ ಜನನ ಪ್ರಮಾಣಪತ್ರವನ್ನು ಪಡೆಯುವ ಉದ್ದೇಶದಿಂದ ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದ ಸಂಯೋಜನೆಯಲ್ಲಿ ಜಿಲ್ಲಾ ಕಾನೂನು ಸೇವಗಳ ಪ್ರಾಧಿಕಾರ ಹಾಗೂ ಎಲ್ಲಾ ತಾಲ್ಲೂಕು ಕಾನೂನು ಸೇವಾ ಸಮಿತಿಗಳ ಮೂಲಕ ನ್ಯಾಯಾಲಯಗಳಲ್ಲಿ ಒಟ್ಟು 385 ಅರ್ಜಿಗಳನ್ನು ದಾಖಲಿಸಿ ರಾಷ್ಟ್ರೀಯ ಲೋಕಾ ಅದಾಲತ್‌ನ ನ್ಯಾಯಾಲಯಗಳಿಂದ ಜನನ ನೋಂದಣಿಗೆ ಸಂಬಂಧಿಸಿದಂತೆ ಸೂಕ್ತ ಆದೇಶವನ್ನು ಹೊರಡಿಸಲಾಗಿದೆ.

## ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಸಮೀಕ್ಷೆಗೆ ಸಹಕರಿಸಲು ಮನವಿ

**ಶಿವಮೊಗ್ಗ :** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಹಮ್ಮಿಕೊಂಡಿರುವ ಕರ್ನಾಟಕ ರಾಜ್ಯದ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಸಮೀಕ್ಷಾ ಕಾರ್ಯವು ದಿನಾಂಕ 22–9–2025 ರಿಂದ ದಿ:7–10–2025 ರವರೆಗೆ ನಡೆಯಲಿದೆ. ಮೆಸ್ಕಾಂ ಇಲಾಖೆಯ ಮಾಹಿತಿ ಪ್ರಕಾರ ಶಿವಮೊಗ್ಗ ಜಿಲ್ಲೆಯಲ್ಲಿ ಖಖ ಸಂಖ್ಯೆ ಹೊಂದಿರುವ ಅಂದಾಜು 543925 ಮನೆಗಳಿದ್ದು, ಈಗಾಗಲೇ ಮೀಟರ್ ರೀಡರ್ಗಳಿಂದ ಮನೆ ಮನೆಗೆ ಬೇಟಿ ನೀಡಿ ಜಿಯೋ ಟ್ಯಾಗಿಂಗ್ ಮಾಡುವ ಕಾರ್ಯವು ಮುಕ್ತಾಯ ಹಂತದಲ್ಲಿರುತ್ತದೆ. ಹಾಗೂ ಸಮೀಕ್ಷಾ ಕಾರ್ಯಕ್ಕಾಗಿ ಅಂದಾಜು 4215 ಸಂಖ್ಯೆಯ ಗಣತಿದಾರರನ್ನು ನೇಮಕ ಮಾಡಿದ್ದು, ಸದರಿ ಗಣತಿದಾರರು ಮನೆ ಮನೆಗೆ ಭೇಟಿ ನೀಡಿ ಕುಟುಂಬಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಕುರಿತು ಆಯೋಗದ ಪ್ರಶ್ನಾವಳಿಗೆ ಮೊಬೈಲ್ ಆಪ್ ಮೂಲಕ ಸಮೀಕ್ಷೆ ನಡೆಸಲಿದ್ದಾರೆ. ಹಾಗೂ ಜಿಲ್ಲೆಯಲ್ಲಿ ಮೊಬೈಲ್ ನೆಟ್ವರ್ಕ್ ಇಲ್ಲದಿರುವ ಗ್ರಾಮಗಳಲ್ಲಿರುವ ಕುಟುಂಬಗಳ ಸಮೀಕ್ಷೆ ಕೈಗೊಳ್ಳಲು ಮೊಬೈಲ್ ನೆಟ್ವರ್ಕ್ ಸಂಪರ್ಕವಿರುವ ಸಮೀಪದ ಗ್ರಾಮ ಪಂಚಾಯತಿ/ಶಾಲಾ ಕಟ್ಟಡಗಳನ್ನು ಗುರುತಿಸಿದ್ದು ಇಲ್ಲಿ ಸಮೀಕ್ಷೆಗಾಗಿ ಎಲ್ಲಾ ವ್ಯವಸ್ಥೆಗಳನ್ನು ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.

## ಚೌಡೇಶ್ವರಿ ಅಮ್ಮನವರ ದೇವಸ್ಥಾನದಲ್ಲಿ ಶರನ್ನವರಾತ್ರಿ

**ಶಿವಮೊಗ್ಗ :** ನಗರದ ಚಾಲುಕ್ಯನಗರದಲ್ಲಿರುವ ಶ್ರೀ ಚೌಡೇಶ್ವರಿ ಅಮ್ಮನವರ ದೇವಸ್ಥಾನದಲ್ಲಿ ಸೆ.22 ರಿಂದ ಅ.02ರವರೆಗೆ ಸಂಭ್ರಮದ ಶರನ್ನವರಾತ್ರಿ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ. ಸೆ.22ರಂದು ದೇವಿಗೆ ಅರಿಶಿನಿ ಕುಂಕುಮ ಅಲಂಕಾರ, ಬೆಳಿಗ್ಗೆ 9.30 ರಿಂದ ಶ್ರೀ ದುರ್ಗಾಹೋಮ, 12.30ಕ್ಕೆ ಮಹಾಮಂಗಳಾರತಿ ತೀರ್ಥ ಪ್ರಸಾದ ವಿನಿಯೋಗ.ಸಂಜೆ 6.30 ರಿಂದ ದುರ್ಗಾ ದೀಪ ನಮಸ್ಕಾರ , ಸಂಜೆ 8.00 ರಿಂದ ದೇವಿಗೆ ಉಯ್ಯಾಲೇ ಸೇವೆ 8.30ಕ್ಕೆ ಮಹಾಮಂಗಳಾರತಿ ತೀರ್ಥಪ್ರಸಾದ ವಿನಿಯೋಗಪ್ರತಿನಿತ್ಯ ದೇವಿಗೆ ವಿವಿಧ ಅಲಂಕಾರ, ಬೆಳಿಗ್ಗೆ 7.30 ರಿಂದ ಚಂಡಿಕಾಪಾರಾಯಣ , 9.30 ರಿಂದ ಹೋಮ ಪ್ರಾರಂಭ ಮಧ್ಯಾಹ್ನ 12.30ಕ್ಕೆ ಮಹಾಮಂಗಳಾರತಿ ತೀರ್ಥಪ್ರಸಾದ ವಿನಿಯೋಗ.ಪ್ರತಿನಿತ್ಯ ಸಂಜೆ 6.30 ರಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

# ಕಚೇರಿಯ ಸುತ್ತಮುತ್ತ ಸ್ವಚ್ಛತೆ ಕಾಪಾಡಲು ಜಿ.ಪಂ. ಸಿಇಒ ಸಲಹೆ

**ಚಿಕ್ಕಮಗಳೂರು:** ಅಧಿಕಾರಿಗಳು ತಮ್ಮ ಕಚೇರಿಯ ಸುತ್ತಮುತ್ತ ಸ್ವಚ್ಛತೆ ಕಾಪಾಡಿಕೊಳ್ಳುವಂತೆ ಜಿ.ಪಂ. ಮುಖ್ಯ ಕಾಯರ್ನಿರ್ವಹಣಾಧಿಕಾರಿ ಹೆಚ್.ಎಸ್. ಕೀರ್ತನಾ ಸೂಚಿಸಿದರು.

ನಗರದ ಜಿ.ಪಂ ಮಿನಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಪಂಚಾಯಿತಿ ಸ್ವಚ್ಛ ಭಾರತ್ ಮಿ?ನ್ ಗ್ರಾಮೀಣ ಯೋಜನೆಯಡಿ ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮೊದಲು ಸರ್ಕಾರಿ ಕಚೇರಿ ಸ್ವಚ್ಛವಾಗಿರಬೇಕು ಜೊತೆಗೆ ಕಚೇರಿ ಆವರಣ ಹಾಗೂ ತಮ್ಮ ವ್ಯಾಪ್ತಿಗೆ ಬರುವ ಗ್ರಾಮ ಪಂಚಾಯಿತಿ, ಶಾಲೆ, ಆಸ್ಪತ್ರೆ., ದೇವಸ್ಥಾನ. ವಸತಿ ನಿಲಯ ಮೊದಲು ಇವುಗಳ ಸ್ವಚ್ಛತೆಯನ್ನು ಮಾಡಬೇಕು. ಕಚೇರಿಯ ಆವರಣದಲ್ಲಿ ವ್ಯವಸ್ಥಿತವಾಗಿ ಗಿಡಗಳನ್ನು ಬೆಳೆಸುವಂತೆ ತಿಳಿಸಿದರು.

ಕಚೇರಿಗಳು ಹಾಗೂ ಆಸ್ಪತ್ರೆಗಳಲ್ಲಿನ ಶೌಚಾಲಯವನ್ನು ಸಮರ್ಪಕವಾಗಿ ನಿರ್ವಹಿಸುವುದರ ಜೊತೆಗೆ ಶಾಲಾ ಕಟ್ಟಡಗಳಿಗೆ ಬಣ್ಣವನ್ನು ಬಳಿದು ಸುಂದರವಾಗಿ ಕಾಣುವಂತೆ ಮಾಡಲು ತಿಳಿಸಿದ ಅವರು, ಶಾಲಾ ಆವರಣದಲ್ಲಿ ಬೆಳೆದಿರುವ ಗಿಡಕಂಟಿಗಳನ್ನು ತೆರವುಗೊಳಿಸಿ ಕೈತೋಟವನ್ನು ಬೆಳೆಸುವಂತೆ ಸೂಚಿಸಿದರಲ್ಲದೆ, ಆಸ್ಪತ್ರೆಗಳು ಹಾಗೂ ಶಾಲಾ ಕಾಲೇಜುಗಳಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಸರಿಪಡಿಸುವಂತೆ ತಿಳಿಸಿದ ಅವರು ಶಾಲಾಕಾಲೇಜುಗಳಲ್ಲಿ ಶೌಚಾಲಯ ಸ್ವಚ್ಛತೆಯಿಂದ ಕೂಡಿರುವಂತೆ ನೋಡಿಕೊಳ್ಳಬೇಕೆಂದರು.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ತಮ್ಮ ವ್ಯಾಪ್ತಿಯಲ್ಲಿ ಬರುವ ಚರಂಡಿಗಳನ್ನು ಸ್ವಚ್ಛಗೊಳಿಸಿ ಜೊತೆಗೆ ಕಸದ ರಾಶಿಗಳು ಕಂಡುಬಂದರೆ ಅವುಗಳನ್ನು ತೆರವುಗೊಳಿಸುವಂತೆ ತಿಳಿಸಿದ ಅವರು, ಶಾಲಾ ಕಾಲೇಜಿನ ಅಕ್ಕ ಪಕ್ಕ ಚರಂಡಿ ಮತ್ತು




ಸುತ್ತಮುತ್ತ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವಂತೆ ತಿಳಿಸಿದರು.

ಪೌರ ಕಾರ್ಮಿಕರನ್ನು ಆಗಿಂದಾಗ್ಗೆ ಆರೋಗ್ಯ ತಪಾಸಣೆಗೆ ಒಳಪಡಿಸುವಂತೆ ತಿಳಿಸಿದ ಅವರು ಸ್ವಚ್ಛತೆ ಮಾಡುವ ಸಂದರ್ಭದಲ್ಲಿ ಅವರಿಗೆ ಕೈಗವಸು, ಶೂಗಳನ್ನು ಕಡ್ಡಾಯವಾಗಿ ನೀಡಬೇಕು. ಅವರು ನಿರ್ವಹಿಸುವ

ಸ್ವಚ್ಛತಾ ಕಾರ್ಯಗಳ ಬಗ್ಗೆ ನಾವು ಕೃತಜ್ಞತೆ ಸಲ್ಲಿಸಬೇಕು ಅವರ ಮಕ್ಕಳಿಗೆ ವಿದ್ಯಾಭ್ಯಾಸ ಒದಗಿಸಲು ವಸತಿ ಶಾಲೆಗಳಲ್ಲಿ ಪ್ರವೇಶಾವಕಾಶ ಕಲ್ಪಿಸಬೇಕು. ವಿದ್ಯಾರ್ಥಿ ವೇತನ ಹಾಗೂ 60 ವರ್ಷದ ಮೇಲ್ಪಟ್ಟವರಿದ್ದರೆ ಅವರಿಗೆ ಮಾಸಾಶನ ಬರುವಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಶಿಕ್ಷಕರು ಕಾಲೇಜು ವಿದ್ಯಾರ್ಥಿಗಳಿಂದ ತಮ್ಮ ವ್ಯಾಪ್ತಿಯಲ್ಲಿರುವ ದೇವಸ್ಥಾನಗಳ ಸ್ವಚ್ಛತೆ ಮಾಡಿಸುವಂತೆ ತಿಳಿಸಿದ ಅವರು, ವಾಸಿಸುವ ಮನೆ ಹಾಗೂ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಡುವುದು ಪ್ರತಿಯೊಬ್ಬ ನಾಗರಿಕನ ಆದ್ಯ ಕರ್ತವ್ಯ.

ನಗರ ಪ್ರದೇಶಗಳ ಸ್ವಚ್ಛತೆಗೆ ಕಾರಣೀಕೃತರಾದ ಪೌರಕಾರ್ಮಿಕರ ಕಾರ್ಯ ತುಂಬಾ ಶ್ಲಾಘನೀಯ. ಪ್ರತಿಯೊಂದು ಕೆಲಸಕ್ಕೂ ತನ್ನದೇ ಆದ ಗೌರವವಿದೆ, ತಮ್ಮ ದೈನಂದಿನ ಚಟುವಟಿಕೆಗಳನ್ನು ಸ್ವಚ್ಛತೆಗಾಗಿ ಮೀಸಲಿಟ್ಟಿರುವ ಪೌರಕಾರ್ಮಿಕರನ್ನು ಪ್ರತಿಯೊಬ್ಬರೂ ಗುರುತಿಸಿ ಗೌರವಿಸಬೇಕು ಎಂದ ಅವರು ಪರಿಸರವನ್ನು ಸ್ವಚ್ಛವಾಗಿರಿಸಿಕೊಂಡು ಆರೋಗ್ಯಯುತ ಜೀವನವನ್ನು ನಡೆಸಬೇಕು ಎಂದರು.

ಸ್ವಚ್ಛತೆ ನಮ್ಮ ಮನೆಯಿಂದ ಆರಂಭವಾಗಬೇಕು. ಮನೆಯ ತ್ಯಾಜ್ಯವನ್ನು ಮೂಲದಲ್ಲಿಯೇ ವಿಂಗಡಿಸಿ ಕಸ ವಿಲೇವಾರಿ ವಾಹನಕ್ಕೆ ಹಾಕುವ ಮೂಲಕ ಸ್ವಚ್ಛ ಹಾಗೂ ಸುಂದರ ಪರಿಸರ ಕಾಪಾಡಲು ಎಲ್ಲರೂ ಕೈ ಜೋಡಿಸಬೇಕು ಎಂದು ಹೇಳಿದರು.

ಸ್ವಚ್ಛತಾ ಹೀ ಸೇವಾ ಅಭಿಯಾನದ ಬಗ್ಗೆ ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅರಿವು ಮೂಡಿಸಿ ಗುರುತಿಸಿರುವ ಸ್ಥಳದಲ್ಲಿಯೇ ಕಸವನ್ನು ಹಾಕುವುದಲ್ಲದೆ, ಸಕಾಲದಲ್ಲಿ ಅವುಗಳನ್ನು ತೆರವುಗೊಳಿಸಬೇಕು ಈ ಬಗ್ಗೆ ಅಲ್ಲಿಯ ಜನರಿಗೆ ಅರಿವು ಮೂಡಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿ.ಪಂ. ಉಪ ಕಾರ್ಯದರ್ಶಿ (ಅಭಿವೃದ್ಧಿ) ಗೌರವ್‌ಕುಮಾರ್ ಶೆಟ್ಟಿ, ಜಿಲ್ಲಾ ಯೋಜನಾ ನಿರ್ದೇಶಕ ಗೋಪಾಲ್ ಜಾದವ್ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಒತ್ತಡಕ್ಕೆ ಮಣಿಯದೇ ಸಮೀಕ್ಷೆಗೆ ಆದೇಶ ಸ್ವಾಗತಾರ್ಹ

**ದಾವಣಗೆರೆ:** ಇತ್ತೀಚೆಗೆ ನಡೆದ ಸಚಿವ ಸಂಪುಟ ಸಭೆಯಲ್ಲಿ ರಾಜ್ಯದಲ್ಲಿ ಕರ್ನಾಟಕ ಹಿಂದುಳಿದ ವರ್ಗಗಳ ಆಯೋಗದಿಂದ ನಡೆಸಲುದ್ದೇಶಿಸಿರುವ ಸಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ (ಜಾತಿಗಣತಿ)ಯನ್ನು ಮುಂದೂಡಬೇಕೆಂದು ಲಿಂಗಾಯತ ಮತ್ತು ಒಕ್ಕಲಿಗ ಸಮುದಾಯಕ್ಕೆ ಸೇರಿರುವ ಸಚಿವರು ಒತ್ತಡ ಹಾಕಿದ್ದರೂ ಯಾವುದೇ ಒತ್ತಡಕ್ಕೆ ಮಣಿಯದೇ, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಿಮೀಕ್ಷೆಯನ್ನು ಸೆ.22ರಿಂದಲೇ ನಡೆಸುವಂತೆ ಆದೇಶಿಸಿರುವುದು ಸ್ವಾಗತಾರ್ಹ ಎಂದು ಕರ್ನಾಟಕ ಪ್ರದೇಶ ಕುರುಬರ ಸಂಘದ ದಾವಣಗೆರೆ ದಕ್ಷಿಣ ವಲಯದ ಅಧ್ಯಕ್ಷ ಬಿ.ಲಿಂಗರಾಜ್ ತಿಳಿಸಿದ್ದಾರೆ.ಹಿಂದೆ ನ್ಯಾ.ಕಾಂತರಾಜ್ ಆಯೋಗ ನಡೆಸಿದ ಸಮೀಕ್ಷೆಯ ವರದಿ ಅವೈಜ್ಞಾನಿಕ ಎಂದು ಹುಯಿಲೆಬ್ಬಿಸಿ, ಆ ವರದಿ ಅನುಷ್ಠಾನಗೊಳ್ಳದಂತೆ ತಡೆದ, ಅಹಿಂದ ವರ್ಗದ ಏಳಿಗೆಯನ್ನು ಕಡೆಗಣಿಸುವ ಪ್ರಬಲ ಸಮುದಾಯದ ಸಚಿವರುಗಳೇ ಈಗಲೂ ಸಮೀಕ್ಷೆಯನ್ನು ಮುಂದೂಡುವಂತೆ ಒತ್ತಡ ಹಾಕುತ್ತಿದ್ದಾರೆ. ಆದರೆ, ಸಂವಿಧಾನದ ಆಶಯದಂತೆ ಜನಸಂಖ್ಯೆಗೆ ಅನುಗುಣವಾಗಿ ಸರಕಾರದ ಸೌಲಭ್ಯ ಕಲ್ಪಿಸಲು, ಎಲ್ಲಾ ಸಮುದಾಯಗಳ ಜನರ ಸ್ಥಿತಿಗತಿ ಅವಶ್ಯಕತೆ ಅರಿತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಯಾರ ಒತ್ತಡಕ್ಕೂ ಮಣಿಯದೇ ಸಮೀಕ್ಷೆ ನಡೆಸಲು ಆದೇಶಿಸಿ ದಿಟ್ಟ ನಿರ್ಧಾರ ಪ್ರದರ್ಶಿಸಿರುವುದು ಸ್ವಾಗತಾರ್ಹವಾಗಿದೆ. ಅಹಿಂದ ನಾಯಕ ಸಿದ್ದರಾಮಯ್ಯರ ಬೆನ್ನಿಗೆ ಇಡೀ ಅಹಿಂದ ಸಮುದಾಯ ಇರಲಿದೆ ಎಂದು ಹೇಳಿದರು.

## ಅರಿವು ಕಾರ್ಯಾಗಾರ

**ಶಿವಮೊಗ್ಗ:** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕೆ.ಸಿ.ಟಿ.ಯು. ಟೆಕ್ಸಾಕ್, ಬೆಂಗಳೂರು ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರ ಶಿವಮೊಗ್ಗ, ಇವರ ಸಂಯುಕ್ತಾಶ್ರಯದಲ್ಲಿ ಸೆ.19 ರಂದು ಬೆಳಗ್ಗೆ 10.30 ಕ್ಕೆ ಮಾಚೇನಹಳ್ಳಿ ಕೈಗಾರಿಕಾ ಪ್ರದೇಶದ ಶಾಂತಲಾ ಸ್ಪೆರೋಕ್ಯಾಸ್ಟ್ ಲರ್ನಿಂಗ್ ಸೆಂಟರ್‌ನಲ್ಲಿ ಎಂ.ಎಸ್.ಎಂ.ಇ.ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವುದು (ಖಂಒಕ)ಯೋಜನೆಯಡಿಯಲ್ಲಿ ಖಖಜಆಖ ಯೋಜನೆ ಕುರಿತು ಒಂದು ದಿನದ ಅರಿವು ಕಾರ್ಯಾಗಾರವನ್ನು ಆಯೋಜಿಸಲಾಗಿದೆ. ಕಾರ್ಯಾಗಾರದ ಉದ್ಘಾಟನೆಯನ್ನು ಅಪರ ಜಿಲ್ಲಾಧಿಕಾರಿ ಅಭಿಷೇಕ್ ವಿ. ನೆರವೇರಿಸಲಿದ್ದಾರೆ.

# ಕ್ರೀಡೆಗಳು ಮಾನಸಿಕ, ದೈಹಿಕ ಸಮತೋಲನಕ್ಕೆ ಸಹಕಾರಿ

**ಚಿಕ್ಕಮಗಳೂರು:** ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿದಾಗ ಮಾನಸಿಕ ಮತ್ತುದೈಹಿಕವಾಗಿ ಸದೃಢರಾಗಿ ಸಮತೋಲನ ಕಂಡುಕೊಳ್ಳಲು ಸಹಕಾರಿಯಾಗುತ್ತದೆಎಂದು ಶಾಸಕ ಹೆಚ್. ಡಿ.ತಮ್ಮಯ್ಯ ಅಭಿಪ್ರಾಯಿಸಿದರು.

ಅವರುಇಂದು ನೇತಾಜಿ ಸುಭಾಷ್‌ಚಂದ್ರಬೋಸ್‌ಜಿಲ್ಲಾಆಟದ ಮೈದಾನದಲ್ಲಿ ಜಿಲ್ಲಾಡಳಿತ, ಜಿ.ಪಂ, ತಾ.ಪಂ, ನಗರಸಭೆ, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಮತ್ತುಕ್ಷೇತ್ರ ಸಂಪನ್ಮೂಲ ಕೇಂದ್ರ ಹಾಗೂ ವಿದ್ಯಾಭಾರತಿ ವಿದ್ಯಾಸಂಸ್ಥೆ ಇವರುಗಳ ಸಂಯುಕ್ತಾಶ್ರಯದಲ್ಲಿಏರ್ಪಡಿಸಲಾಗಿದ್ದತಾಲ್ಲೂಕು ಮಟ್ಟದಕ್ರೀಡಾಕೂಟ 2025–26 ನ್ನು ಉದ್ಘಾಟಿಸಿ ಮಾತನಾಡಿದರು.

ಕ್ರೀಡೆಗಳಲ್ಲಿ ಸೋಲು–ಗೆಲುವ ಸಹಜ, ಕ್ರೀಡಾ ಮನೋಭಾವದಿಂದ ಕ್ರೀಡಾಕೂಟಗಳಲ್ಲಿ ಭಾಗವಹಿಸುವುದು ಮುಖ್ಯ. ಗೆದ್ದವರು ಬೀಗದೆ ಸೋತವರು ಭಾಗದೆಕ್ರೀಡಾ ಸಾಧನೆಗಳು ಜನರ ಮೆಚ್ಚುಗೆ ಗಳಿಸಲಿ ಎಂದು ಶುಭ ಹಾರೈಸಿದರು.

ಗ್ರಾಮೀಣ ಗುಂಪು ಕ್ರೀಡೆಗಳಾದ ಖೋಖೋ, ಕಬ್ಬಡ್ಡಿ, ವಾಲಿಬಾಲ್, ಥ್ರೋಬಾಲ್ ಮುಂತಾದ ಕ್ರೀಡೆಗಳು ಈ ಕ್ರೀಡಾಕೂಟದಲ್ಲಿಇದ್ದು, ಒಬ್ಬ ನಾಯಕಕ್ರೀಡಾಪುಟುವಿನ ಮೈಮರೆವುತಂಡದ ಸೋಲಿಗೆ ಕಾರಣವಾಗುತ್ತದೆಎಂಬುದನ್ನುಅರಿತುಎಚ್ಚರಿಕೆಯಿಂದ ಆಟ ಆಡಬೇಕುಎಂದು ಸಲಹೆ ನೀಡಿದರು.

ಪಠ್ಯೇತರ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸುವ ಮೂಲಕ ಕ್ರೀಡೆಗಳಲ್ಲಿ ಹೆಚ್ಚು ಹೆಚ್ಚು ತೊಡಗಿಸಿಕೊಳ್ಳುತ್ತಿದ್ದಾರೆ. ಈ ನಿಟ್ಟಿನಲ್ಲಿ ಆಟ ಆಡುವಾಗ ಪೋಷಕರು, ಶಿಕ್ಷಕರು, ಪ್ರೇಕ್ಷಕರು, ತೀರ್ಪುಗಾರರು ಪ್ರತಿಕ್ಷಣವನ್ನು ಗಮನಿಸುತ್ತಿದ್ದಾರೆಎಂಬುದನ್ನುಅರಿಯಬೇಕೆಂದರು.



ಉತ್ತಮ ಕ್ರೀಡಾಪಟುಗಳಾಗಬೇಕಾದರೆ ಪೌಷ್ಠಿಕ ಆಹಾರ, ದಿನನಿತ್ಯ ವ್ಯಾಯಾಮಅಭ್ಯಾಸ, ಕ್ರೀಡೆಯ ಬಗ್ಗೆ ಆಸಕ್ತಿ ಇದ್ದಾಗ ಮಾತ್ರ ಎದುರಾಳಿಯನ್ನು ಸಮರ್ಥವಾಗಿಎದುರಿಸಲು ಸಾಧ್ಯಎಂದು ಹೇಳಿದರು.

ನಗರಸಭಾಧ್ಯಕ್ಷೆ ಶೀಲಾ ದಿನೇಶ್ ಮಾತನಾಡಿ, ದೈರ್ಯದಿಂದಕ್ರೀಡಾಕೂಟದಲ್ಲಿ ಭಾಗವಹಿಸಿ ಜಯಗಳಿಸಿ ರಾಜ್ಯ, ರಾಷ್ಟ್ರಕ್ಕೆಕೀರ್ತಿತರಬೇಕೆಂದು ಶುಭ ಹಾರೈಸಿದರು.

ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು ತೀರ್ಪುಗಾರರಿಗೆಗೌರವವನ್ನುಕೊಡಬೇಕು. ಈ ಮೂಲಕ ತಮ್ಮಆರೋಗ್ಯವನ್ನು ಕಾಪಾಡಿಕೊಳ್ಳಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿಡಿಡಿಪಿಐತಿಮ್ಮರಾಜು, ಕ್ಷೇತ್ರ ಶಿಕ್ಷಣಾಧಿಕಾರಿ ರುದ್ರಪ್ಪ, ನಗರಸಭೆಉಪಾಧ್ಯಕ್ಷೆ ಲಲಿತಾ ಬಾಯಿ ಸೇರಿದಂತೆ ವಿವಿಧ ಶಿಕ್ಷಕರ ಸಂಘದಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಶಿಕ್ಷಕರು ಭಾಗವಹಿಸಿದ್ದರು.ಮೊದಲಿಗೆ ವಿದ್ಯಾಭಾರತಿ ಶಾಲೆಯಕಾರ್ಯದರ್ಶಿ ಡಾ. ಅಪ್ಸರ್‌ಅಹಮದ್‌ಹಿಂದೂಸ್ಥಾನಿ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಶಾಲಾ ಪ್ರಾಂಶುಪಾಲೆ ಶಾಹಿರಾ ಫಾತಿಮಾ, ಡಿಡಿಪಿಐತಿಮ್ಮರಾಜು, ಕ್ಷೇತ್ರದ ಶಿಕ್ಷಣಾಧಿಕಾರಿ ರುದ್ರಪ್ಪ, ಜಿ.ಮಹೇಶ್‌ಅಕ್ಷರದಾಸೋಹ ನಿರ್ದೇಶಕರು ನೀಲಕಂಠಪ್ಪ, ಪ್ರೌಢಶಾಲ ಸಹಶಿಕ್ಷರು ಅಧ್ಯಕ್ಷರು ಮಂಜುನಾಥ್, ಪ್ರೌಢಶಾಲೆ ಕಾರ್ಯದರ್ಶಿ ಉಮೇಶ್, ಪ್ರಶಾಂತ್, ಟಿ.ಕೆ.ಜಿಅರಸು ಶಿಕ್ಷಕರ ಸಂಯೋಜಕರು, ಜಗದೀಶ್ ಶಿಕ್ಷಣ ಸಂಯೋಜನೆ, ವಿರೇಶ್ ಕೌಲಗಿ ಜಾನಕಮ್ಮ, ಭಾಗ್ಯ ಪ್ರವಿಣ್ ಪಿಂಟೊ ಶಂಕರೆಗೌಡ, ಪರಮೇಶ್ ಮುರಬತ್‌ಗ್ರೇಡ್‌ವನ್ ಉಪಸ್ಥಿತರಿದ್ದರು,

# ಸ್ವಯಂ ಸೇವಕರ ನೆಚ್ಚಿನ ಸಂಘಕ್ಕೆ ಶತಾಬ್ಧಿಯ ಸಂಭ್ರಮ : ರಾಜೇಶ್ ಪದ್ಮಾರ್

**ಹಾಸನ :** ರಾಷ್ಟ್ರಭಾವ ಜಾಗೃತಗೊಳಿಸುತ್ತಿರುವ ರಾಷ್ಟ್ರೀಯ ಸ್ವಯಂಸೇವಕ ಸಂಘಕ್ಕೆ 100 ವರ್ಷ. ಮನ ಮನೆಗಳನ್ನು ಬೆಸೆದುಕೊಳ್ಳುತ್ತಿರುವ ಸಂಘ ಚಿಂತನೆ ವ್ಯಾಪಿಸಿದ ಮತ್ತು ವ್ಯಾಪಿಸುತ್ತಿರುವ ರೀತಿ ಅನನ್ಯ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ ಪ್ರಾಂತ ಪ್ರಚಾರ ಪ್ರಮುಖ್ ರಾಜೇಶ್ ಪದ್ಮಾರ್ ಅವರು ಅಭಿಪ್ರಾಯಪಟ್ಟರು.

ನಗರದ ಸೀತಾರಾಮಾಂಜನೇಯ ಕಲ್ಯಾಣ ಮಂಟಪದಲ್ಲಿ ಹಾಸನ ಮಂಥನ ಬಳಗದ ವತಿಯಿಂದ ರಾಷ್ಟ್ರೀಯ ಸ್ವಯಂಸೇವಕ ಸಂಘದ ಶತಾಬ್ದಿ ನಿಮಿತ್ತ ಆಯೋಜಿಸಿದ್ದ ಸಂಘ ಶತ ಪಥ ನೂರರ ಹಾದಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಂಘ ಹುಟ್ಟಿದ್ದು ಮಹಾರಾಷ್ಟ್ರ 1925ರ ವಿಜಯದಶಮಿಯ ದಿನ. ಡಾ.ಹೆಡಗೇವಾರ್ ಅವರ ಮನೆಯಲ್ಲೇ ಸಂಘ ಔಪಚಾರಿಕವಾಗಿ ಶುರುವಾಯಿತು. ಆರ್‌ಎಸ್‌ಎಸ್‌ನ ಮೊದಲ ದೈನಂದಿನ 'ಶಾಖೆ' 1926ರ ಮೇ 28 ರಿಂದ ಮೊಹಿತೇವಾಡಾ ಮೈದಾನದಲ್ಲಿ ಶುರುವಾಯಿತು. ವ್ಯಕ್ತಿ ನಿರ್ಮಾಣ ಆಗಬೇಕು ಎಂದರೆ ವ್ಯಕ್ತಿ ಸಮಾಜಮುಖಿಯಾಗಬೇಕು. ಸಮಾಜಮುಖಿಯಾಗುವಾಗ ಇರಬೇಕಾದ ಮನಸ್ಥಿತಿ ಸ್ವಾರ್ಥಕ್ಕಿಂತ ಹೆಚ್ಚು ಸಮಾಜವೇ ಮುಖ್ಯವಾಗಬೇಕು. ಎಲ್ಲದಕ್ಕೂ ಮೊದಲು ದೇಶವೇ ಇರಬೇಕು. ಈ ಚಿಂತನೆ ದೇಶದ ಅಭಿವೃದ್ಧಿಗೆ ಪೂರಕ. ಇದನ್ನೇ ಆರ್‌ಎಸ್‌ಎಸ್ ಮಾಡುತ್ತ ಬಂದಿದೆ. ಆದ್ದರಿಂದಲೇ ಇಂದು ಜಗತ್ತಿನ ಅತಿದೊಡ್ಡ ಸಂಘಟನೆಯಾಗಿ ಸಮಾಜದೊಳಗೆ ಒಂದಾಗಿ ಸಾಗಿದೆ.

ಶಾಖೆ ಎಂದರೆ ಸಮಾಜದ ವಿವಿಧ ವರ್ಗದವರು ಒಂದೆಡೆ ಸೇರುವ ಒಂದು




ವೇದಿಕೆ. ಅಲ್ಲಿ ವಯಸ್ಸಿನ ಅಥವಾ ಇನ್ಯಾವುದೇ ಭೇದಭಾವಗಳಿರುವುದಿಲ್ಲ. ಐದಾರು ವರ್ಷದ ಮಗುವಿನಿಂದ ಹಿಡಿದು ಅರವತ್ತು ಎಪ್ಪತ್ತು ವರ್ಷ ಮೇಲ್ಪಟ್ಟವರೂ ಇರುತ್ತಾರೆ. ಸಂಘ ಪರಿವಾರ ಅಂದರೆ ಆರ್‌ಎಸ್‌ಎಸ್ ಮತ್ತು ಅದರ ಪರಿವಾರ ಸಂಘಟನೆಗಳು. ಇದರಲ್ಲಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್, ವನವಾಸಿ ಕಲ್ಯಾಣ, ಭಾರತೀಯ ಕಿಸಾನ್ ಸಂಘ, ವಿಶ್ವ ಹಿಂದೂ ಪರಿಷದ್, ಹೀಗೆ ಹತ್ತಾರು ಸಂಘಟನೆಗಳಿವೆ. ಇದಲ್ಲದೇ, ಇದೇ ವಿಚಾರಧಾರೆಯಿಂದ ಪ್ರಭಾವಿತವಾಗಿ ಹುಟ್ಟಿಕೊಂಡ ಅನೇಕ ಸಂಸ್ಥೆಗಳೂ ಇವೆ. ಒಂದು ದೇಶ ಎಂಬ ರಾಷ್ಟ್ರಭಾವವನ್ನು ಜಾಗೃತಗೊಳಿಸುತ್ತ ಸಮಾಜದೊಳಗೆ ಸೇರಿಕೊಳ್ಳುತ್ತ ಸಾಗುತ್ತಿರುವ ಸಂಘಟನೆ ಎಂದರು.

ಯಾವುದೇ ಸ್ವಹಿತಾಸಕ್ತಿಯ ಪಲಾಪೇಕ್ಷೆ ಬಯಸದೇ, ಯಾರದೋ ಒತ್ತಡದ ಪ್ರೇರಣೆಯಿಂದ ಕೆಲಸ ಮಾಡದೇ ಸಮಾಜ ಮತ್ತು ದೇಶದ ಹಿತಾಸಕ್ತಿಗೆ ಅನುಗುಣವಾಗಿ ಕೆಲಸ ಮಾಡುವವನು ಸ್ವಯಂಸೇವಕ. ಸ್ವಯಂ ಸೇವಕ ಎಲ್ಲ ಧರ್ಮವನ್ನು ಗೌರವದಿಂದ ಕಾಣುವ ಗುಣವುಳ್ಳವನಾಗಿದ್ದು ಇತರರಿಂದ ಹಿಂದೂ ಧರ್ಮಕ್ಕೆ ದಕ್ಕೆಯಾದರೆ ಸಿಡಿದೆದ್ದು ತನ್ನ ಮಾತೃಧರ್ಮವನ್ನು ಕಾಪಾಡಲು ಎಲ್ಲ ರೀತಿಯ ತ್ಯಾಗಕ್ಕೂ ಸಿದ್ಧನಿರುತ್ತಾನೆ. ಸ್ವಯಂಸೇವಕನಿಗೆ ರಾಷ್ಟ್ರವೇ ಮೊದಲು, ಮಿಕ್ಕಿದ್ದೆಲ್ಲಾ ಆಮೇಲೆ. ರಾಷ್ಟ್ರೀಯವಾದವೇ ಸ್ವಯಂಸೇವಕನ ಸಿದ್ಧಾಂತ.

ರಾಷ್ಟ್ರದ ಭದ್ರತೆಯ ವಿಷಯ ಬಂದರೆ ಯಾವುದೇ ವಿಷಯದಲ್ಲೂ ರಾಜೀಯಾಗದೆ ಪ್ರಾಣದ ಹಂಗು ತೊರೆದು ಹೋರಾಡುವ ಗುಣವುಳ್ಳವರಾಗಿರುತ್ತಾರೆ ನಮ್ಮ ಸ್ವಯಂಸೇವಕರು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಯುವ ವೈದ್ಯ ಡಾ ನವೀನ್, ಆರ್‌ಎಸ್‌ಎಸ್ ಕಾರ್ಯಕರ್ತರಾದ ಕೆಂಪೇಗೌಡ, ಮಾಜಿ ಶಾಸಕರಾದ ಪ್ರೀತಮ್ ಗೌಡ, ವಿಶ್ವ ಹಿಂದೂ ಪರಿಷತ್ತಿನ ಮಹಿಪಾಲ್, ಬಿಜೆಪಿ ಜಿಲ್ಲಾಧ್ಯಕ್ಷಧ್ಯಕ್ಷ ಸಿದ್ದೇಶ್ ನಾಂಗೇಂದ್ರ ಸೇರಿದಂತೆ ಹಿಂದು ಸಂಘಟನೆ ಮುಖಂಡರು, ಕಾರ್ಯಕರ್ತರು ಹಾಜರಿದ್ದರು.

## ಮಹರ್ಷಿ ಶ್ರೀ ವಾಲ್ಮೀಕಿ ಜನ್ಮದಿನಾಚರಣೆ ನಿಮಿತ್ತ ಪೂರ್ವಭಾವಿ ಸಭೆ

**ಗದಗ:** ದಿನಾಂಕ 07–10–2025 ರಂದು ಮಹರ್ಷಿ ಶ್ರೀ ವಾಲ್ಮೀಕಿ ಜನ್ಮ ದಿನಾಚರಣೆಯನ್ನು ಆಚರಿಸುವ ಕುರಿತು ಸೆಪ್ಟೆಂಬರ್ 22 ರಂದು ಬೆಳಿಗ್ಗೆ 11–30 ಘಂಟೆಗೆ ತಹಶೀಲ್ದಾರರು ಶಿರಹಟ್ಟಿ ಇವರ ಕಾರ್ಯಾಲಯದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ.

ಎಲ್ಲ ತಾಲೂಕ ಮಟ್ಟದ ಅಧಿಕಾರಿಗಳು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮುಖಂಡರು, ದಲಿತಪರ ಸಂಘಟನೆಗಳ ಮುಖಂಡರು, ವಿವಿಧ ಸಂಘಟನೆಗಳ ಮುಖಂಡರು, ಸರ್ವ ಸದಸ್ಯರು, ಗಣ್ಯವ್ಯಕ್ತಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು ಮತ್ತು ಪತ್ರಿಕಾ ಮಾಧ್ಯಮದವರು ಹಾಗೂ ಸಾರ್ವಜನಿಕರು ಸಕಾಲಕ್ಕೆ ಆಗಮಿಸಿ ತಮ್ಮ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಬೇಕೆಂದು ಶಿರಹಟ್ಟಿಯ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಕಸಿತ ಭಾರತ ಕ್ವಿಜ್ ಸ್ಪರ್ಧೆ

**ಚಿಕ್ಕಮಗಳೂರು:** ಯುವ ಕಾರ್ಯಕ್ರಮ ಮತ್ತು ಕ್ರೀಡಾ ಸಚಿವಾಲಯವು ವಿಕಸಿತ ಭಾರತ ಯುವ ನಾಯಕ ಸಂವಾದ–2026 ಅಡಿ ವಿಕಸಿತ ಭಾರತ ಕ್ವಿಜ್ ಅನ್ನು ಮೈ ಭಾರತ ಪೋರ್ಟಲ್ ಮೂಲಕ ಪ್ರಾರಂಭಿಸಿದೆ.ಈ ಕ್ವಿಜ್‌ನ ಉದ್ದೇಶವು 2047ರೊಳಗೆ ವಿಕಸಿತ ಭಾರತ ನಿರ್ಮಾಣದ ಕನಸಿನಲ್ಲಿ ಯುವಕರನ್ನು ತೊಡಗಿಸಿಕೊಳ್ಳುವುದು. ಇದು 12 ಭಾಷೆಗಳಲ್ಲಿ ಲಭ್ಯವಿದ್ದು, ಭಾರತದ ಸಾಧನೆಗಳು, ಪಯಣ ಮತ್ತು ಭವಿಷ್ಯದ ಆಶಾವಾದಗಳ ಬಗ್ಗೆ ಜ್ಞಾನವನ್ನು ಹೆಚ್ಚಿಸಲು ರೂಪಿಸಲಾಗಿದೆ. ಮುಂದಿನ ಹಂತಗಳಿಗೆ ಅರ್ಹರಾಗುತ್ತಾರೆ. ಕ್ವಿಜ್ ಈಗಾಗಲೇ ಆರಂಭವಾಗಿದ್ದು ಅಕ್ಟೋಬರ್ 15 ರವರೆಗೆ ನಡೆಯಲಿದೆ. ಭಾಗವಹಿಸುವವರು 10 ನಿಮಿಷದಲ್ಲಿ 20 ಪ್ರಶ್ನೆಗಳಿಗೆ ಉತ್ತರಿಸಬೇಕಾಗುತ್ತದೆ. ಕೇವಲ ಒಂದು ಪ್ರಯತ್ನಕ್ಕೆ ಮಾತ್ರ ಅವಕಾಶವಿದ್ದು, ಕನಿಷ್ಠ 7 ಅಂಕಗಳು ಕಡ್ಡಾಯ. ಹೆಚ್ಚು ಅಂಕ ಪಡೆದವರನ್ನು ಆಯ್ಕೆ ಮಾಡಿ, ವಿಜೇತರನ್ನು ಕಂಪ್ಯೂಟರ್ ಲಾಟರಿ ವ್ಯವಸ್ಥೆಯಿಂದ ಘೋಷಿಸಲಾಗುತ್ತದೆ. ಆಯ್ಕೆಯಾದವರು ಪ್ರಬಂಧ ಬರವಣಿಗೆ, ಪ್ರಸ್ತುತಿಕೆ ಮುಂತಾದ ಹಂತಗಳಲ್ಲಿ ಭಾಗವಹಿಸಲಿದ್ದಾರೆ.

# ಸ್ವಚ್ಛ ಭಾರತ್ ದಿನ ಆಚರಣೆ



**ಶಿರಹಟ್ಟಿ:** ರಾಷ್ಟ್ರಪಿತ ಮಹಾತ್ಮಗಾಂಧೀಜಿಯವರ ಜಯಂತಿ ಪ್ರಯುಕ್ತ ಪ್ರತಿ ವರ್ಷ ಅಕ್ಟೋಬರ್ 2ನ್ನು ಸ್ವಚ್ಛ ಭಾರತ್ ದಿನವನ್ನಾಗಿ ಆಚರಿಸುತ್ತಿದ್ದು ಪೂರ್ವಾಭಾವಿಯಾಗಿ ಹಲವು ಜಾಗೃತಿ ಕಾರ್ಯಕ್ರಮ ಹಾಗೂ ಸಾಮೂಹಿಕ ಸ್ವಚ್ಛತಾ ಶ್ರಮದಾನಗಳನ್ನು ಅಲ್ಲಲ್ಲಿ ಹಮ್ಮಿಕೊಳ್ಳಲಾಗುತ್ತಿದೆ.

ನಗರ ಮತ್ತು ಗ್ರಾಮೀಣ ಪ್ರದೇಶದ ಜನರಲ್ಲಿ ನೈರ್ಮಲ್ಯ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಲಶಕ್ತಿ ಮಂತ್ರಾಲಯ ಹಾಗೂ ಕೇಂದ್ರ ನಗರ ವಸತಿ ವ್ಯವಹಾರ ಗಳ ಸಚಿವಾಲಯ ಸೆಪ್ಟೆಂಬರ್ 17ರಿಂದ ಅಕ್ಟೋಬರ್ 2ರವರೆಗೆ 'ಸ್ವಚ್ಛತಾ ಹೀ ಸೇವಾ ಪಾಕ್ಷಿಕ– 2025' ಅಭಿಯಾನವನ್ನು 'ಸ್ವಚೋತ್ಸವ' ಎಂಬ ಘೋಷವ್ಯಾಕ್ಯದೊಂದಿಗೆ ಆಚರಿಸುತ್ತಿದೆ.

ಸದರ ಕಾರ್ಯಕ್ರಮದಡಿ ತಾಲೂಕಿನ ಬೆಳಟ್ಟಿ ಗ್ರಾಮದಲ್ಲಿ ಸ್ವಚ್ಛ ಭಾರತ್ ಮಿಷನ್ ಗ್ರಾಮೀಣ ಯೋಜನೆಯಡಿ ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮದ ಅಂಗವಾಗಿ ಆಯೋಜಿಸಿದ್ದ ಜಾಗೃತಿ ಮೂಡಿಸುವ ಜಾಥಾಕ್ಕೆ ಗ್ರಾಮ ಪಂಚಾಯತ ಅಧ್ಯಕ್ಷರು ಚಾಲನೆ ನೀಡಿ, ಸ್ವಚ್ಛತೆಯ ಪ್ರತಿಜ್ಞಾವಿಧಿ ಬೋಧಿಸಿ ಸಮಾರಂಭದಲ್ಲಿ ಸ್ವಚ್ಛ ವಾಹಿನಿ ವಾಹನ ಚಾಲಕಿ ಹಾಗೂ ಗ್ರಾಮ ಪಂಚಾಯಿತಿಯಲ್ಲಿ ಕೆಲಸ ನಿರ್ವಹಿಸುವ ಸಫಾಯಿ ಕರ್ಮಚಾರಿಗಳಿಗೆ ಸನ್ಮಾನ ಮಾಡಲಾಯಿತು. ಗ್ರಾಮ ಪಂಚಾಯತ ಉಪಾಧ್ಯಕ್ಷರು ಸರ್ವ ಸದಸ್ಯರು ಗ್ರಾಮ ಪಂಚಾಯತ್ ಸಿಬ್ಬಂದಿಗಳು ಆಶಾ ಅಂಗನವಾಡಿ ಕಾರ್ಯಕರ್ತೆಯರು ಬಾಗವಹಿಸಿ ಯಶಸ್ವಿಗೊಳಿಸಿದರು

# ಯುವನಿಧಿ ಫಲಾನುಭವಿಗಳು ಕೌಶಲ್ಕಾರ್ ಪೋರ್ಟಲ್ ನಲ್ಲಿ ಕಡ್ಡಾಯ ನೋಂದಣಿ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆಯಲ್ಲಿ ಯುವನಿಧಿ ಯೋಜನೆಯಡಿಯಲ್ಲಿ ನಿರುದ್ಯೋಗ ಭತ್ಯೆ ಪಡೆಯುತ್ತಿರುವ ಫಲಾನುಭವಿಗಳಿಗೆ ಯುವನಿಧಿ ಪ್ಲಸ್ ಯೋಜನೆಯಡಿಯಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳು (ITI), GTTC, CEDOK, KSDಅ ವತಿಯಿಂದ ಉಚಿತ ಕೌಶಲ್ಯಾಧಾರಿತ ತರಬೇತಿಗಳನ್ನು ನೀಡುತ್ತಿದ್ದು, ಯುವನಿಧಿ ಯೋಜನೆಯಡಿಯಲ್ಲಿ ನೋಂದಾಯಿಸಿಕೊಂಡು ನೇರ ನಗದು ವರ್ಗಾವಣೆ (DBT) ಮೂಲಕ ನಿರುದ್ಯೋಗ ಭತ್ಯೆ ಪಡೆಯುತ್ತಿರುವ ಫಲಾನುಭವಿಗಳು ಕಡ್ಡಾಯವಾಗಿ ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ವೆಬ್ ಸೈಟ್ ಼ttps://www.kaushalkar.com/app/registration_verify ಲಿಂಕನ್ನು ಬಳಸಿಕೊಂಡು ನೋಂದಾಯಿಸಿಕೊಳ್ಳಲು ಸೂಚಿಸಿದೆ.

## ಅರೆಕಾಲಿಕ ಸ್ವಯಂ ಸೇವಕರ ಹುದ್ದೆಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಹಾಗೂ ಶಿವಮೊಗ್ಗ ಜಿಲ್ಲೆಯ ಎಲ್ಲಾ ತಾಲೂಕುಗಳ ಕಾನೂನು ಸೇವಾ ಸಮಿತಿಗಳಿಗೆ ಅರೆಕಾಲಿಕ ಸ್ವಯಂ ಸೇವಕರನ್ನು ನೇಮಿಸಿಕೊಳ್ಳುತ್ತಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಿದೆ.

ಸಮಾಜದಲ್ಲಿನ ಸಾಮಾಜಿಕ ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗದ ಜನರಿಗೆ ಹಾಗೂ ಕಾನೂನು ಸೇವೆಗಳನ್ನು ಪಡೆಯಲು ಅರ್ಹರಿರುವ ವ್ಯಕ್ತಿಗಳಿಗೆ ಸೇವಾ ಮನೋಭಾವದಿಂದ ಕೆಲಸ ಮಾಡುವವರಿಗೆ ಮತ್ತು 10ನೇ ತರಗತಿ ಉತ್ತೀರ್ಣರಾಗಿರುವ ಕನ್ನಡ ಓದಲು ಮತ್ತು ಬರೆಯಲು ಬರುವವರಿಗೆ ಆದ್ಯತೆ ನೀಡಲಾಗುವುದು. ಈ ನೇಮಕಾತಿಯು 1 ವರ್ಷದ ಅವಧಿಯವರಿಗೆ ಮಾತ್ರ ಇರುತ್ತದೆ. ಪ್ರಾಧಿಕಾರ/ಸಮಿತಿ ನೀಡುವ ಗೌರವಧನ ಹೊರತುಪಡಿಸಿ ಯಾವುದೇ ಮೊತ್ತವನ್ನು ಅಪೇಕ್ಷಿಸಬಾರದು. ಪ್ರಾಧಿಕಾರ/ಸಮಿತಿ ನೀಡುವ ತರಬೇತಿಯನ್ನು ಮತ್ತು ಸಭೆಗಳಿಗೆ ತಪ್ಪದೆ ಹಾಜರಾಗಬೇಕು ಹಾಗೂ ಅವರಿಗೆ ವಹಿಸಲಾಗುವ ಕಾರ್ಯಗಳನ್ನು ಕ್ಷಮತೆಯಿಂದ ಪ್ರಾಮಾಣಿಕವಾಗಿ ಮಾಡಬೇಕು.ಆಸಕ್ತರು ನಿಗದಿತ ನಮೂನೆ ಅರ್ಜಿಯನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿ ಹಾಗೂ ಆಯಾ ತಾಲೂಕು ಸಮಿತಿಗಳ ಕಚೇರಿಗಳಲ್ಲಿ ಉಚಿತವಾಗಿ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಭಾವಚಿತ್ರದೊಂದಿಗೆ ಸೆ. 30 ರೊಳಗಾಗಿ ಸಲ್ಲಿಸುವಂತೆ ಜಿ.ಕಾ.ಸೇ.ಪ್ರಾ.ದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಸಮೀಕ್ಷಾ ಕಾರ್ಯ

**ದಾವಣಗೆರೆ :** ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಕರ್ನಾಟಕ ರಾಜ್ಯದ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ಸಮೀಕ್ಷಾ ಕಾರ್ಯವನ್ನು ಸೆ.22 ರಂದು ಅ.7 ರವರೆಗೆ ಆಯೋಜಿಸಲಾಗಿದೆ. ಪಾಲಿಕೆ ವ್ಯಾಪ್ತಿಯಲ್ಲಿ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷಾ ಕಾರ್ಯವನ್ನು ಯಶಸ್ವಿಯಾಗಿ ನಿರ್ವಹಿಸಬೇಕು. ನಗರ ವ್ಯಾಪ್ತಿಯಲ್ಲಿನ ಮನೆ ಮನೆಗೆ ಗಣತಿದಾರರು ಭೇಟಿ ನೀಡಿದಾಗ ಗಣತಿದಾರರು ಕೋರುವ ಮಾಹಿತಿಯನ್ನು ನೀಡಬೇಕೆಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

## ಸೆ.22 ರಿಂದ ಅ.3ರವರೆಗೆ ನವರಾತ್ರಿ, 22ನೇ ವರ್ಷದ ಕಾರ್ಯಕ್ರಮ ದೇವನಗರಿ ದಸರಾ ಸಾಂಸ್ಕೃತಿಕ ಉತ್ಸವ

**ದಾವಣಗೆರೆ.ಸೆ.21:** ನಗರದ ಶ್ರೀ ಜೋಡಿ ಬನ್ನಿ ಮಹಾಂಕಾಳಿ ಮತ್ತು ಶ್ರೀ ದುರ್ಗಾಪರಮೇಶ್ವರಿ ದೇವಸ್ಥಾನ ಸೇವಾ ಸಮಿತಿ, ಕೆ.ಎಸ್.ಆರ್.ಟಿ.ಸಿ. ರಸ್ತೆ, ಸಿದ್ದೇಶ್ವರ ಮಿಲ್ ಆವರಣ, ನಿಟ್ಟುವಳ್ಳಿ, ವತಿಯಿಂದ ಸೆ.22 ರಿಂದ ಅಕ್ಟೋಬರ್ 3ರವರೆಗೆ ನವರಾತ್ರಿ ನಾಡಹಬ್ಬದ 22ನೇ ವರ್ಷದ ಕಾರ್ಯಕ್ರಮ ದೇವನಗರಿ ದಸರಾ ಸಾಂಸ್ಕೃತಿಕ ಉತ್ಸವ ಆಯೋಜಿಸಲಾಗಿದೆ ಎಂದು ಸಮಿತಿಯ ಅಧ್ಯಕ್ಷೆ ಪುಷ್ಪಾ ಗುಂಡಿ ಸಿದ್ದೇಶ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆಪ್ಟಂಬರ್ 22ರ ಸೋಮವಾರ ಬೆಳಿಗ್ಗೆ 9.30ರಿಂದ ಶ್ರೀ ದೇವಿಯ ಮೂರ್ತಿಯನ್ನು ವಿವಿಧ ವಾದ್ಯ ಮೇಳಗಳೊಂದಿಗೆ ಹಾಗೂ ಸುಮಂಗಲಿಯರ ಕುಂಭ ಮೇಳದೊಂದಿಗೆ ನಿಟ್ಟುವಳ್ಳಿ ಶ್ರೀ ದುರ್ಗಾಂಭಿಕ ದೇವಸ್ಥಾನದಿಂದ ಶ್ರೀ ಜೋಡಿ ಬನ್ನಿ ಮಹಾಂಕಾಳಿ ದೇವಸ್ಥಾನಕ್ಕೆ ಆಗಮಿಸಿ ಶ್ರೀ ದೇವಿಯನ್ನು ಪ್ರತಿಷ್ಠಾಪಿಸುವುದು.ಮತ್ತು ಮಧ್ಯಾಹ್ನ 12.30ರಿಂದ ಅನ್ನಸಂತರ್ಪಣೆ ಕಾರ್ಯಕ್ರಮ ನಡೆಯಲಿದೆ. ಪ್ರತಿದಿನ ಸಂಜೆ 6:30 ರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ಹೇಳಿದರು.

22ರಂದು ಅವರಗೊಳ್ಳ ಪುರವರ್ಗ ಮಠದ ಓಂಕಾರ ಶಿವಾಚಾರ್ಯ ಶ್ರೀಗಳು ಆಗಮಿಸಲಿದ್ದಾರೆ. ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರ ಸ್ವಾಮಿ, ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್, ತಹಶೀಲ್ದಾರ್ ಅಶ್ವಥ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ, ಡಿಹೆಚ್‌ಓ ಡಾ.ಎಸ್.ಷಣ್ಮುಖಪ್ಪ, ಪಾಲಿಕೆ ಆಯುಕ್ತೆ ರೇಣುಕಾ ಆಗಮಿಸಲಿದ್ದು, ಸಮಾರಂಭದ ಅಧ್ಯಕ್ಷತೆಯನ್ನು ಸಮಿತಿಯ ಅಧ್ಯಕ್ಷೆ ಪುಷ್ಪಾ ಗುಂಡಿ ಸಿದ್ದೇಶ್ ವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಹೀಗೆ 10ದಿನಗಳ ಕಾಲ ಪ್ರತಿದಿನ ವಿವಿಧ ಪೂಜಾ ಕಾರ್ಯಗಳು, ವಿಶೇಷ ಪೂಜೆ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಪ್ರತಿದಿನವೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದರು.

ಸಂಚಾಲಕ ಮಹೇಶ್ವರಪ್ಪ ದೊಡ್ಮನಿ ಮಾತನಾಡಿ, ಆಧುನಿಕತೆಯ ಭರದಲ್ಲಿ ನಮ್ಮ ಸಂಸ್ಕೃತಿ, ಅಚಾರ, ವಿಚಾರ, ಸಂಸ್ಕಾರಗಳು ಮರೆಯಾಗುತ್ತಿವೆ. ಈ ಹಿನ್ನೆಲೆಯಲ್ಲಿ ಪ್ರತಿದಿನ ಒಂದೊಂದು ಕಾರ್ಯಕ್ರಮಗಳು ನಡೆಯಲಿವೆ. ವೀಣಾವಾದನ, ವೀರಗಾಸೆ, ಭರತ ನಾಟ್ಯ, ಹಳೆಯ ಗೀತೆಗಳ ಗಾಯನ, ನಾಟಕ, ನೃತ್ಯ ರೂಪಕ ಸೇರಿದಂತೆ ವಿವಿಧ ಕಾರ್ಯಕ್ರಮಗಳು ನಡೆಯಲಿವೆ. ಅಕ್ಟೋಬರ್ 2ರಂದು ಗುರುವಾರ ಮಧ್ಯಾಹ್ನ 2.30ರಿಂದ ನಗರದ ರಾಜಬೀದಿಗಳಲ್ಲಿ ಮೆರವಣಿಗೆ ನಡೆಯಲಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಎನ್.ಹೆಚ್.ಯಲ್ಲಪ್ಪ, ಮೋತಿ ರುದ್ರೇಶ್, ಎಂ.ಮುರುಗೇಶ್ ಇದ್ದರು.

## ಸಮೀಕ್ಷೆಯಲ್ಲಿ ಜಾತಿ, ಉಪ ಜಾತಿ ಕಾಲಂನಲ್ಲಿ ಛಲವಾದಿ ಎಂದೇ ಬರೆಸಲು ಮನವಿ

**ದಾವಣಗೆರೆ.ಸೆ.21:** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸೆಪ್ಟಂಬರ್ 22ರಿಂದ ಅಕ್ಟೋಬರ್ 7ರವರೆಗೆ ನಡೆಯುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಜಾತಿ ಹಾಗೂ ಉಪ ಜಾತಿ ಕಾಲಂನಲ್ಲಿ ಛಲವಾದಿ ಎಂದು ಬರೆಸಬೇಕೆಂದು ಜಿಲ್ಲಾ ಛಲವಾದಿ ಮಹಾಸಭಾದ ಅಧ್ಯಕ್ಷ ಎನ್. ರುದ್ರಮುನಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರವು ಜಾತಿ ಮತ್ತು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಆರ್ಥಿಕ ಸ್ಥಿತಿಗತಿಗಳ ಬಗ್ಗೆ ಆಯೋಗವು ಸಮೀಕ್ಷೆ ನಡೆಸುವುದರಿಂದ ನಮ್ಮ ಸಮಾಜದ ಬಂಧುಗಳು ಧರ್ಮದ ಕಾಲಂನಲ್ಲಿ ತಾವು ಅನುಸರಿಸುವ ಧರ್ಮ ಮತ್ತು ಜಾತಿ ಕಾಲಂನಲ್ಲಿ ಪರಿಶಿಷ್ಟ ಜಾತಿಯೆಂದು. ಉಪಜಾತಿ ಕಾಲಂನಲ್ಲಿ ಛಲವಾದಿ ಎಂದು ನಮೂದಿಸಲು ಮನವಿ ಮಾಡಿದರು.

ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಆಯೋಗವು ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಮತ್ತು ಜಾತಿ ಗಣತಿಯನ್ನು ಕೈಗೊಳ್ಳಲಿದ್ದು, ನಿಮ್ಮ ಮನೆಗೆ ಗಣಿತದಾರರು ಬಂದಾಗ ಬಲಗೈ, ಛಲವಾದಿ, ಒಲೆಯ, ಮಹರ್, ಮಾಲಾ, ಪರಯನ್ ಹಾಗೂ ಬಲಗೈ ಸಂಬಂಧಿತ ಸಮುದಾಯದವರು ಕಡ್ಡಾಯವಾಗಿ ಜಾತಿಗಣತಿಯಲ್ಲಿ ಬಲಗೈ ಸಂಬಂಧಿಸಿದ ಜಾತಿಗಳನ್ನು ಮಾತ್ರ ನಮೂದಿಸಲು ಮತ್ತು ಯಾವುದೇ ಕಾರಣಕ್ಕೂ ಆದಿದ್ರಾವಿಡ, ಆದಿ ಆಂಧ್ರ ಅಥವಾ ಆದಿಕರ್ನಾಟಕ ಎಂದು ನಮೂದಿಸಬಾರದೆಂದು ಕೋರಿದರು.

ಸುದ್ದಿಗೋಷ್ಠಿಯಲ್ಲಿ ಎಸ್.ಶೇಖರಪ್ಪ, ಜಯಪ್ರಕಾಶ್, ಬಸವನಾಳು ಹಾಲೇಶ್, ವೀರಸ್ವಾಮಿ ಜಗಳೂರು, ಎಂ.ಸಿ. ಓಂಕಾರಪ್ಪ, ಎಲ್.ಟಿ.ಮಧುಸೂದನ್, ನಾಗಭೂಷಣ್, ಜಯಣ್ಣ ಇತರರು ಇದ್ದರು.

## ಎಕೆ,ಎಡಿ,ಎಎ. ಎಂಬುದಾಗಿ ಬರೆಸದೆ ಮೂಲಜಾತಿ ಮಾದಿಗ ಎಂದೇ ಬರೆಸಿ: ಹೆಗ್ಗೆರೆ ರಂಗಪ್ಪ

**ದಾವಣಗೆರೆ.ಸೆ.21:** ಹಿಂದುಳಿದ ವರ್ಗಗಳ ಆಯೋಗದಿಂದ ಸೆ.22 ರಿಂದ ನಡೆಯಲಿರುವ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯಲ್ಲಿ ಮಾದಿಗ ಎಂದೇ ಬರೆಸಬೇಕು ಎಂದು ಒಳ ಮೀಸಲಾತಿ ಹೋರಾಟ ಸಮಿತಿಯ ಹೆಗ್ಗೆರೆ ರಂಗಪ್ಪ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ್ಯಾಯಮೂರ್ತಿ ಎಚ್. ಎನ್.ನಾಗಮೋಹನ್ ದಾಸ್ ವರದಿಯಲ್ಲಿ 37 ಲಕ್ಷ ಜನ ಮಾದಿಗರಿದ್ದಾರೆ ಎಂದು ನಮೂದಿಸಿದೆ. 1972-73 ರಲ್ಲಿ ಹಾವನೂರು, ಎ.ಜೆ.ಸದಾಶಿವ ಆಯೋಗ, ಮಾಜಿ ಸಚಿವ ಮಾಧುಸ್ವಾಮಿ ವರದಿಯಲ್ಲೂ ಮಾದಿಗ ಸಮುದಾಯ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಇದ್ದಾರೆ ಎಂದು ಹೇಳಿವೆ. ಅದರ ಆಧಾರದಲ್ಲಿ ಶೇ.6 ಮೀಸಲಾತಿ ಘೋಷಿಸಿದೆ. ರಾಜ್ಯ ಸರ್ಕಾರ ಸಂಪುಟ ಸಭೆಯಲ್ಲಿ ಎ ಗುಂಪಿಗೆ ಸೇರಿಸಿದೆ ಎಂದು ತಿಳಿಸಿದರು.

ಕಾಲಕಾಲಕ್ಕೆ ಒಳಮೀಸಲಾತಿ ಪ್ರಮಾಣ ಜನಸಂಖ್ಯೆ ಆಧಾರಿತವಾಗಿ ನಿಗದಿ ಆಗಲು ಪರಿಶಿಷ್ಟ ಜಾತಿಗಳ ಶಾಶ್ವತ ಆಯೋಗ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಹಾಗಾಗಿ ಸೆ. 22 ರಿಂದ ನಡೆಯುವ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯಲ್ಲಿ ಎಕೆ, ಎಡಿ, ಎಎ.. ಎಂಬುದಾಗಿ ಬರೆಸದೆ ಮೂಲಜಾತಿ ಮಾದಿಗ ಎಂದೇ ಬರೆಸಬೇಕು ಎಂದು ಮನವಿ ಮಾಡಿದರು.

ಮೂಲಜಾತಿಯನ್ನೇ ಬರೆಸಬೇಕು. ಇಲ್ಲವಾದಲ್ಲಿ ನಮ್ಮ ಜನಸಂಖ್ಯೆಯೇ ಹೆಚ್ಚು ಎಂದು ಪ್ರತಿಪಾದಿಸುತ್ತಾರೆ. ಜನಸಂಖ್ಯೆ ಆಧಾರಿತ ಒಳ ಮೀಸಲಾತಿ ಸೌಲಭ್ಯಗಳನ್ನು ಕೈ ತಪ್ಪಿ ಹೋಗದಂತೆ ನೋಡಿಕೊಳ್ಳಬೇಕು.ನಂಬರ್ 61 ರಲ್ಲಿ ಕಡ್ಡಾಯವಾಗಿ ಮಾದಿಗ ಎಂದು ಬರೆಸಬೇಕು ಎಂದು ತಿಳಿಸಿದರು.

ಸುಮಾರು 59 ಅಲೆಮಾರಿ ಸಮುದಾಯಗಳಿಗೆ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್ ದಾಸ್ ಆಯೋಗದ ಶಿಫಾರಸುನಂತೆ ಶೇ. 1 ರಷ್ಟು ಒಳ ಮೀಸಲಾತಿಯನ್ನು ಸರ್ಕಾರ ಪ್ರತ್ಯೇಕವಾಗಿ ನೀಡಬೇಕು. ಮುಂಬಡ್ತಿಯಲ್ಲಿ ಒಳ ಮೀಸಲಾತಿ ಬಿಂದುಗಳನ್ನು ಅನುಸರಿಸ ಬೇಕು ಎಂದು ತಿಳಿಸಿದರು.

ರಾಜ್ಯ ಸರ್ಕಾರ ಪ್ರಾರಂಭಿಸಿರುವ ದೇವದಾಸಿಯರ ಸಮೀಕ್ಷೆಯಲ್ಲಿ ಎಲ್ಲ ದೇವದಾಸಿಯರು ಪಾಲ್ಗೊಂಡು ರಾಜ್ಯ ಸರ್ಕಾರ ಮೂರು ತಲೆಮಾರಿನ ಸೌಲಭ್ಯಗಳು ಕೈತಪ್ಪಿ ಹೋಗದಂತೆ ನೋಡಿಕೊಳ್ಳಬೇಕು. ಈ ಹಿಂದಿನಿಂದಲೂ ಹಿಂದೂ ಎಂದು ಹೇಳಿಕೊಂಡೇ ಬರಲಾಗುತ್ತಿದೆ.


ಕರ್ನಾಟಕ ಸರ್ಕಾರ

**ಪಂಚಾಯತ್‌ರಾಜ್ ಇಂಜಿನಿಯರಿಂಗ್ ವಿಭಾಗ, ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ, ದಾವಣಗೆರೆ.**

ಸಂ:ಕಾಪಾಇಂ/ಪಂರಾಇಂ/ವಿ/ದಾ/ಸ.ಇಂ/ಟೆಂಡರ್/2025-26/1262
ದಿನಾಂಕ:-19/09/2025

**ಸಂಕ್ಷಿಪ್ತ ಅಲ್ಪಾವಧಿ ಟೆಂಡರ್ ಪ್ರಕಟಣೆ**

**("ಕೆಪಿಪಿಪಿ-ಪ್ರೊಕ್ಯೂರ್‌ಮೆಂಟ್" ಮೂಲಕ)**

ಈ ವಿಭಾಗ ವ್ಯಾಪ್ತಿಯ ದಾವಣಗೆರೆ ಜಿಲ್ಲೆ, 2024-25ನೇ & 2025-26 ಸಾಲಿನ ವಿವಿಧ ಯೋಜನೆಯಡಿ ಅನುಮೋದನೆಯಾದ ಕಾಮಗಾರಿಗಳನ್ನು ಕರ್ನಾಟಕ ರಾಜ್ಯಪಾಲರ ಪರವಾಗಿ ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿತ ಅರ್ಹ ಹಾಗೂ ಕೆಪಿಪಿಪಿ-ಪ್ರೊಕ್ಯೂರ್‌ಮೆಂಟ್‌ನಲ್ಲಿ ನೋಂದಾಯಿಸಲ್ಪಟ್ಟ ಗುತ್ತಿಗೆದಾರರಿಂದ ಇಲಾಖಾ ನಿಯಮಾವಳಿಯ ಮೇರೆಗೆ ಕೆಪಿಪಿಪಿ-ಪ್ರೊಕ್ಯೂರ್‌ಮೆಂಟ್ ಮುಖಾಂತರ ಐಟಂವಾರು ಏಕ-ಲಕೋಟೆಯಲ್ಲಿ ಟೆಂಡರ್‌ಗಳನ್ನು ಕೆ.ಡಬ್ಲ್ಯೂ ನಮೂನೆ-1& 2ರಲ್ಲಿ ಆಹ್ವಾನಿಸಲಾಗಿದೆ. ಒಟ್ಟು ಕಾಮಗಾರಿಗಳ ಸಂಖ್ಯೆ:22 ಟೆಂಡರ್ ಗಿಟ್ಟ ಮೊತ್ತ ರೂ 5.04 ಲಕ್ಷಗಳಿಂದ 29.50 ಲಕ್ಷಗಳವರೆಗೆ ಇರುತ್ತವೆ. ಕಾಮಗಾರಿ ಸ್ವರೂಪಕಟ್ಟಡ ಮತ್ತು ರಸ್ತೆ ಕಾಮಗಾರಿಗಳು. ಟೆಂಡರ್ ಫಾರಂಗಳನ್ನು ದಿನಾಂಕ: 19/09/2025 ರಿಂದ ಭರ್ತಿ ಮಾಡಿ ಸಲ್ಲಿಸಲು ಕೊನೆಯ ದಿನಾಂಕ:30/09/2025 ಸಂಜೆ5.00 ಗಂಟೆಯವರೆಗೆ ಹೆಚ್ಚಿನ ವಿವರಗಳಿಗೆ ಈ ಕಛೇರಿಯ ದೂರವಾಣಿ ಸಂಖ್ಯೆ: 08192-250156 ಅಥವಾ www.KPPP.karnataka.gov.in ವೆಬ್‌ಸೈಟ್‌ನಲ್ಲಿ ಪಡೆಯಬಹುದಾಗಿರುತ್ತದೆ.

ವಾಸಾಇ/ಡಿವಿಜಿ/360/ ಕೆಎಸ್‌ಎಂಸಿಎ/2025-26

ಸಹಿ/- ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ.ವಿಭಾಗ, ದಾವಣಗೆರೆ.


### ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮ ತಿದ್ದುಪಡಿಯಿಂದ ಶಿಕ್ಷಕರ ಬಡ್ತಿ, ನೇಮಕಾತಿಗೆ ಅನುಕೂಲ

# 13 ಸಾವಿರ ಶಿಕ್ಷಕರ ನೇಮಕಾತಿಗೆ ಕ್ರಮ : ಸಚಿವ ಮಧು ಬಂಗಾರಪ್ಪ

**ದಾವಣಗೆರೆ :** ಮಕ್ಕಳಿಗೆ ಸರಿಯಾದ ಶಿಕ್ಷಣ ನೀಡಿದಾಗ ದೇಶ ವಿವಿಧ ರಂಗಗಳಲ್ಲಿ ಮುಂದುವರೆಯಲು ಸಾಧ್ಯ ಈ ನಿಟ್ಟಿನಲ್ಲಿ 13 ಸಾವಿರ ಶಿಕ್ಷಕರ ನೇಮಕಾತಿಗೆ ಕ್ರಮವಹಿಸಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್.ಮಧು ಬಂಗಾರಪ್ಪ ಹೇಳಿದರು.

ಅವರು ಸೆ.20 ಚನ್ನಗಿರಿಯ ಆಂಜನೇಯಸ್ವಾಮಿ ಸಮುದಾಯ ಭವನದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಿಂದ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನ ಮತ್ತು ಗುರುಭವನ ನಿರ್ಮಾಣದ ಶಂಕುಸ್ಥಾಪನೆ ನೆರವೇರಿಸಿ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಭವಿಷ್ಯಕ್ಕಾಗಿ ಮುಂದಿನ ಪೀಳಿಗೆಗೆ ನಾವು ಏನಾದರೂ ಕೊಡುಗೆ ನೀಡಬೇಕಾಗಿದ್ದರೆ ಅದು ಶಿಕ್ಷಣ ವಾಗಿವಾಗಿರಬೇಕು. ಈ ನಿಟ್ಟಿನಲ್ಲಿ ಶಿಕ್ಷಣವೇ ನಿರ್ಣಾಯಕವಾಗಿದ್ದು ಇದಕ್ಕಾಗಿ ಶಿಕ್ಷಕರು ಪ್ರಾಮಾಣಿಕೆ ಸೇವೆ ಸಲಿಸುತ್ತಿದ್ದಾರೆ. ಶಿಕ್ಷಣ ಎನ್ನುವುದು ನಿರಂತರ ಇದಕ್ಕೆ ಯಾವುದೇ ಅಂತಿಮ ಇರುವುದಿಲ್ಲ ಎಂದರು.

ವಲಸೆ ಹೋಗಿ ಗಂಡ, ಹೆಂಡತಿ ಇಬ್ಬರೂ ದುಡಿಯುತ್ತಿದ್ದರೆ ಮಕ್ಕಳು ಅಲ್ಲೆ ಆಟ ಆಡುತ್ತಿದ್ದರು. ಇದನ್ನು ಮನಗಂಡ ಮುಖ್ಯಮಂತ್ರಿ ದಿವಗಂತ ಬಂಗಾರಪ್ಪ ಅವರು ಅಂಗನವಾಡಿಗಳನ್ನು ತೆರೆದರು. ಇದರಿಂದ ಶಿಕ್ಷಣ ವಂಚಿತ ಮಕ್ಕಳು ಸಹ ಶಿಕ್ಷಣ ಪಡೆಯಲು ಸಾಧ್ಯವಾಯಿತು. ಗ್ರಾಮೀಣ ಭಾಗದಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ಶೇಕಡ ಹದಿನೈದು ರಷ್ಟು ಅಂಕ



ನೀಡಿ ಗ್ರಾಮೀಣ ಭಾಗದಲ್ಲಿ ಓದಿದವರಿಗೆ ವಿದ್ಯಾಭ್ಯಾಸ ಮತ್ತು ನೌಕರಿಯಲ್ಲಿ ನೆರವಾಗಿದ್ದರಷ್ಟೆ ಅಲ್ಲದೆ ಆಶ್ರಯ ಯೋಜನೆ ಮತ್ತು ಆರಾಧನಾ ಯೋಜನೆಗಳನ್ನು ಜಾರಿಗೆ ತಂದರು. ಇದರಿಂದ ಅನೇಕ ಗ್ರಾಮೀಣ ಜನರಿಗೆ ಸಾಕಷ್ಟು ಅನುಕೂಲವಾಗಿ ಬಡತನದಿಂದ ಮೇಲೆ ಬರಲು ಸಾಧ್ಯವಾಗಿದೆ ಎಂದರು. ನಮ್ಮ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಅನೇಕ ಮನೆಗಳು ಬೆಳಗುತ್ತಿವೆ, ಪ್ರಾಣಾಳಿಕೆಯಲ್ಲಿ ತಿಳಿಸಿದಂತೆ ಹಳೆ ಪಿಂಚಣಿ ಪದ್ಧತಿಯನ್ನು ಜಾರಿಗೆ ತರಲಿದ್ದು ಇದರಿಂದ ಲಕ್ಷಾಂತರ ನೌಕರರಿಗೆ ಅನುಕೂಲ ವಾಗಲಿದೆ. ಇಲಾಖೆಯಲ್ಲಿ ಈಗಾಗಲೇ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡಿದ್ದು ಶಿಕ್ಷಕರಿಗೆ ಮುಂಬಡ್ತಿಯಲ್ಲಿ ಅನುಕೂಲವಾಗಲಿದೆ ಇದನ್ನು ಆದಷ್ಟು ಶೀಘ್ರದಲ್ಲಿ ಜಾರಿಗೆ ತರಲಾಗುವುದು ಎಂದರು.

ಸರ್ಕಾರ ಅಧಿಕಾರಕ್ಕೆ ಬಂದ ನಂತರ ಶಾಲೆಗಳಲ್ಲಿ ಸಂವಿಧಾನ ಪೀಠಿಕೆ ಓದುವುದನ್ನು ಕಡ್ಡಾಯ ಮಾಡಲಾಗಿದೆ. ಮತ್ತು ವರ್ಗಾವಣೆಗೆ ಕಾಯುತ್ತಿದ್ದ ಮೂವತ್ತಾರು ಸಾವಿರ ಶಿಕ್ಷಕರ ವರ್ಗಾವಣೆ ಮಾಡಲಾಗಿದೆ. ಜೊತೆಗೆ ಪರೀಕ್ಷಾ ಸುಧಾರಣೆಗೂ ಕ್ರಮವಹಿಸಲಾಗಿದ್ದು ಎಸ್. ಎಸ್.ಎಲ್.ಸಿ. ಪರೀಕ್ಷೆಯನ್ನು ನೇರವಾಗಿ ವೀಕ್ಷಣೆ ಮಾಡಲು ಎಲ್ಲಾ ಕೇಂದ್ರಗಳ ಕೊಠಡಿಗಳಲ್ಲಿ ವೆಬ್ ಕಾಸ್ಟಿಂಗ್ ಮಾಡಿ ಪರೀಕ್ಷಾ ಅವ್ಯವಹಾರ ತಡೆಗಟ್ಟಲಾಗಿದೆ. ಮತ್ತು ಸರ್ಕಾರಿ ಶಾಲೆಗಳಿಗೆ ಉಚಿತ ವಿದ್ಯುತ್ ಪೂರೈಕೆ ಮಾಡಲಾಗಿದೆ, ಸ್ಮಾರ್ಟ್ ಕ್ಲಾಸ್ ಜಾರಿಗೆ ತಂದಿದ್ದು ಇದರಿಂದ ಗುಣಮಟ್ಟದ ಶಿಕ್ಷಣ ಪಡೆಯಲು ಸಾಧ್ಯವಾಗುತ್ತಿದೆ.

ರಾಜ್ಯದಲ್ಲಿ ಸರ್ಕಾರದಿಂದ 800 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ತೆರೆಯಲು ಕ್ರಮವಹಿಸಲಾಗಿದೆ. ಪ್ರಥಮ ಮತ್ತು ದ್ವಿತೀಯ ಪಿಯುಸಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಿಇಟಿ ಹಾಗೂ ನೀಟ್ ಪರೀಕ್ಷೆಗೆ ಅನುಕೂಲವಾಗಲೆಂದು ಉಚಿತ ಕೋಚಿಂಗ್ ತರಗತಿಗಳನ್ನು ನಡೆಸಲಾಗುತ್ತಿದೆ. ಇದರಿಂದ ಇಪ್ಪತ್ತೈದು ಸಾವಿರ ವಿದ್ಯಾರ್ಥಿಗಳು ಅನುಕೂಲ ಪಡೆಯುತ್ತಿದ್ದಾರೆ. ಮುಂದೆ ಎಲ್ಲಾ ಮಕ್ಕಳಿಗೂ ಇದನ್ನು ವಿಸ್ತರಿಸಲು ಕ್ರಮ ಕೈಗೊಳ್ಳಲಾಗಿದೆ. ಇಂದು ತಂತ್ರಜ್ಞಾನ ಮುಂದುವರೆದಿದ್ದು ಇದರ ಪ್ರಯೋಜನೆ ಪಡೆಯಲು ಎಐ ತಂತ್ರಜ್ಞಾನ ದಿಂದ ಶಿಕ್ಷಣ ನೀಡುವುದು, ಶಾಲೆಯಲ್ಲಿ ಕೌಶಲ್ಯಯುತ ಶಿಕ್ಷಣಕ್ಕೆ ಆದ್ಯತೆ ನೀಡಿ ಕಲಿಯುತ ಗಳಿಸುವ ಪರಿಕಲ್ಪನೆಯನ್ನು ಅನುಷ್ಠಾನ ಮಾಡಲು ಚಿಂತನೆ ಮಾಡಿದ್ದು ಎಲ್ಲರಿಗೂ ಸಮಾನತೆ ಶಿಕ್ಷಣ ನೀಡುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

ಚನ್ನಗಿರಿ ಕ್ಷೇತ್ರದ ಶಾಸಕರಾದ ಬಸವರಾಜ ವಿ.ಶಿವಗಂಗಾ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ ಡಾ; ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮ ದಿನಾಚರಣೆ ಅಂಗವಾಗಿ ಶಿಕ್ಷಕರ ದಿನಾಚರಣೆ ಆಚರಿಸಲಾಗುತ್ತಿದೆ. ಶಾಸಕನಾದ ನಂತರ ಕ್ಷೇತ್ರದಲ್ಲಿ ಕೆರೆಗೆ ನೀರು ತುಂಬಿಸುವ ಯೋಜನೆ, ವಿದ್ಯುತ್ ಸಮಸ್ಯೆ ನಿವಾರಣೆ, ಶಿಕ್ಷಣ ಮತ್ತು ಅಸ್ಪತ್ರೆ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಿದ್ದೇನೆ. ಶಾಲೆಗಳಲ್ಲಿನ 41 ಹೊಸ ಕೊಠಡಿಗಳ ನಿರ್ಮಾಣ ಅಂತಿಮ ಹಂತದಲ್ಲಿದ್ದು 2 ಕೋಟಿ ವೆಚ್ಚದಲ್ಲಿ 18 ಹೊಸ ಶಾಲೆಗಳನ್ನು ತೆರೆಯಲು ಕ್ರಮವಹಿಸಲಾಗಿದೆ. ಇನ್ನು 85 ಕೊಠಡಿಗಳು ಅವಶ್ಯವಿದ್ದು ಅವುಗಳನ್ನು ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಡಿಡಿಪಿಐ ಜಿ.ಕೊಟ್ರೇಶ್, ಡಯಟ್ ಪ್ರಾಂಶುಪಾಲರಾದ ಗೀತಾ, ತಹಶೀಲ್ದಾರ್ ನಾಗರಾಜ್ ಹಾಗೂ ಇನ್ನಿತರೆ ಗಣ್ಯರು ಉಪಸ್ಥಿತರಿದ್ದರು.

### ರಾಜನಹಳ್ಳಿ ವಾಲ್ಮೀಕಿ ಸಭೆಯಲ್ಲಿ ರಾಜಕೀಯ ಗದ್ದಲ

# ಸಂಸದ ಈ.ತುಕಾರಾಮ್-ಬಂಗಾರು ಹನುಮಂತು ಮುಖಾಮುಖಿ

**ಹರಿಹರ :** ತಾಲೂಕಿನ ರಾಜನಹಳ್ಳಿ ವಾಲ್ಮೀಕಿ ಗುರುಪೀಠ ದಲ್ಲಿ ಗುರುವಾರ ನಡೆದ ರಾಜ್ಯಮಟ್ಟದ ವಾಲ್ಮೀಕಿ ಜನಾಂಗದ ಸಭೆ ರಾಜಕೀಯ ವಾಗ್ವಾದದಿಂದಾಗಿ ಗದ್ದಲ ಗಲಾಟೆಗೆ ತಿರುಗಿತು.

ವಾಲ್ಮೀಕಿ ಗುರುಪೀಠದ ಪೀಠಾಧಿಪತಿ ಡಾ. ಪ್ರಸನ್ನಾನಂದ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ನಡೆದ ಈ ಸಭೆಯಲ್ಲಿ, ಜಾತಿ ಜನಗಣತಿ ಸಂದರ್ಭದಲ್ಲಿ ವಾಲ್ಮೀಕಿ ಸಮಾಜದವರು ಯಾವ ಹೆಸರು ಬಳಸಬೇಕು ಎಂಬ ನಿರ್ಣಯದ ಬಗ್ಗೆ ಚರ್ಚೆ ನಡೆಯಬೇಕಿತ್ತು. ಆದರೆ ಸಭೆಯ ಶುಭಾರಂಭದ ಕೆಲವೇ ಹೊತ್ತಿನಲ್ಲಿ ರಾಜಕೀಯ ಮಾತುಗಳು ವೇದಿಕೆಯ ಗೌರವಕ್ಕೆ



ಧಕ್ಕೆ ತಂದವು.

ಗದ್ದಲಕ್ಕೆ ಕಾರಣ: ಬಿಜೆಪಿ ರಾಜ್ಯ ಎಸ್‌ಟಿ ಮೋರ್ಚಾ ಅಧ್ಯಕ್ಷ ಬಂಗಾರು ಹನುಮಂತು ಅವರು ಮಾತನಾಡುವ ವೇಳೆ, ಸಿಎಂ ಸಿದ್ದರಾಮಯ್ಯ ವಾಲ್ಮೀಕಿ ಸಮುದಾಯವನ್ನು ತುಳಿಯುತ್ತಿದ್ದಾರೆ ಎಂದು ತೀವ್ರ ಟೀಕೆ ಮಾಡಿದರು.

ಬಳ್ಳಾರಿ ಲೋಕಸಭಾ ಚುನಾವಣೆಗೆ ವಾಲ್ಮೀಕಿ ನಿಗಮದ 187 ಕೋಟಿ ರೂ ದುರುಪಯೋಗವಾಗಿದೆ ಎಂದು ಅವರು ಆಕ್ಷೇಪಿಸಿದರು.

ಇದಕ್ಕೆ ಸಭೆಯಲ್ಲಿದ್ದವರು "ರಾಜಕೀಯ ಮಾತು ಬೇಡ" ಎಂದು ವಿರೋಧ ವ್ಯಕ್ತಪಡಿಸಿದರೂ, ಹನುಮಂತು ತಮ್ಮ ಭಾಷಣ ಮುಂದುವರೆಸಿದರು.

ಆಗ ಬಳ್ಳಾರಿ ಸಂಸದ ಈ.ತುಕಾರಾಮ್ ವೇದಿಕೆಗೆ ಬಂದು, "ಇದು ಸಮಾಜದ ಸಭೆ, ರಾಜಕೀಯ ವೇದಿಕೆ ಅಲ್ಲ" ಎಂದು ಸ್ಪಷ್ಟ ಎಚ್ಚರಿಕೆ ನೀಡಿದರು.

ಸ್ವಾಮೀಜಿಯವರೂ ಸಹ ಮಧ್ಯಪ್ರವೇಶಿಸಿ, "ರಾಜಕೀಯ ಮಾತು ನಿಲ್ಲಿಸಿ, ಇದು ಸಮಾಜದ ವೇದಿಕೆ" ಎಂದು ಘೋಷಿಸಿದರು.

ಇದಲ್ಲದರ ಪರಿಣಾಮವಾಗಿ ಬಿಜೆಪಿ-ಕಾಂಗ್ರೆಸ್ ಪರ-ವಿರೋಧಿ ಮುಖಂಡರು ಪರಸ್ಪರ ಜಗಳಕ್ಕೆ ಇಳಿಯುತ್ತಾ ವೇದಿಕೆಯಲ್ಲಿ ಭಾರಿ ಗದ್ದಲ-ಗಲಾಟೆ ನಡೆಯಿತು.

# ರಾಹುಲ್ ಗಾಂಧಿ ತನಿಖೆ ಮಾಡಿದರೆ ಮತಗಳ್ಳತನದ ಬಗ್ಗೆ ತಿಳಿಯುತ್ತೆ

**ಬೀದರ್:** ಕಳ್ಳತನ ಮಾಡುವವರಿಗೆ ಕಳ್ಳತನದ ಕುರಿತು



ಗೊತ್ತಿರುತ್ತದೆ. ರಾಹುಲ್ ಗಾಂಧಿ ಅವರನ್ನೇ ತನಿಖೆ ಮಾಡಿದರೆ ಎಲ್ಲವೂ ಗೊತ್ತಾಗುತ್ತದೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಟೀಕಿಸಿದ್ದಾರೆ.

ಬೀದರ್ ನಲ್ಲಿ ಮಾತನಾಡಿದ ಅವರು, ದೇಶದ ಮೇಲೆ ಅಪನಂಬಿಕೆ ಬರುವ ರೀತಿಯಲ್ಲಿ ಮಾಡುವುದು ರಾಹುಲ್ ಗಾಂಧಿ ವಿಚಾರ. ದೇಶದಲ್ಲಿ ಕಲಹಸೃಷ್ಟಿ ಮಾಡಿ ಅಶಾಂತಿ ಹುಟ್ಟಿಸುವುದು ಕಾಂಗ್ರೆಸ್‌ನ ಉದ್ದೇಶ.

ಇದರ ಹಿಂದೆ ಜಾರ್ಜ್ ಸೊರೊಸ್ ಇದ್ದಾರೆ, ಅವರ ಉದ್ದೇಶ ಅಶಾಂತಿ ಹುಟ್ಟಿಸುವುದು. ಅಮೆರಿಕ ಸೇರಿದಂತೆ ಬೇರೆ ಬೇರೆ ದೇಶಗಳು, ಜಾರ್ಜ್ ಸೊರೊಸ್ ಶಾಂತಿ ಕದಡುವ ಉದ್ದೇಶಕ್ಕೆ ಹಣ ನೀಡುತ್ತಾರೆ. ಜಾರ್ಜ್ ಸೊರೊಸ್ ಹಾಗು ರಾಹುಲ್ ಗಾಂಧಿ ಕುರಿತಾಗಿ ತನಿಖೆ ಆಗಬೇಕು ಎಂದರು.

ಆಳಂದ ಕ್ಷೇತ್ರದ ಬಗ್ಗೆ ರಾಹುಲ್ ಆರೋಪ ಮಾಡಿದ್ದಾರೆ. ಆಳಂದದಲ್ಲಿ ಗೆದ್ದಿರುವುದು ಕಾಂಗ್ರೆಸ್ ಅಭ್ಯರ್ಥಿ ಅಲ್ಲವೆ. ಸಿದ್ದರಾಮಯ್ಯರ ವರುಣ ಕ್ಷೇತ್ರದಲ್ಲೂ ಮನೆ ಸಂಖ್ಯೆ ಜೀರೊ ಇದೆ. 20-25 ಮತದಾರರ ಪಟ್ಟಿ ನೋಡಿದರೆ ಈಗಲೂ ಜೀರೋ ಜೀರೋ ಮನೆ ನಂ. ಇದೆ.

ಮಹದೇವಪುರದಲ್ಲೂ ರಾಹುಲ್ ಗಾಂಧಿ ಆರೋಪ ಮಾಡಿದ್ದರು. ಬಾಡಿಗೆ ಮನೆಯಲ್ಲಿ ಇದ್ದವರು, ಮನೆ ನಂಬರ್ ಎ,ಬಿ,ಸಿ,ಡಿ ಮಾಡಿರ್ತಾರೆ. ಮನೆ ನಂಬರ್ ಸರಿಯಾಗಿ ಫೀಡ್ ಆಗಿರಲ್ಲಾ, ಡಾಟಾ ಆಪರೇಟರ್ ಸರಿಯಾಗಿ ಫೀಡ್ ಮಾಡಿರಲ್ಲ. ಮನೆ ನಂಬರ್ ಎಬಿಸಿಡಿ ಹಾಕಿದರೆ ಆಗುವುದಿಲ್ಲ, ಆಗ ಜೀರೊ ಜೀರೊ ಹಾಕ್ತಾರೆ. ರಾಹುಲ್ ಗಾಂಧಿ ಅವರಿಗೆ ಇದೂ ಅರ್ಥ ಅಗಲ್ಲವೆಂದರೆ ಏನೂ ಹೇಳುವುದು. ಲೋಕಸಭಾ ವಿಪಕ್ಷ ನಾಯಕನಾಗಿ ರಾಹುಲ್ ಗಾಂಧಿಗೆ ಸಾಮಾನ್ಯ ಜ್ಞಾನ ಇಲ್ಲವೆ ಎಂದು ಕಿಡಿಕಾರಿದರು.

ಮಾಲೂರು ಕಾಂಗ್ರೆಸ್ ಶಾಸಕರನ್ನು ಕೋರ್ಟ್ ಅಸಿಂಧುಗೊಳಿಸಿದ್ದು ಯಾಕೆ. ಇದಕ್ಕೆ ರಾಹುಲ್ ಗಾಂಧಿ ಉತ್ತರ ನೀಡಬೇಕು. ಮೋಸ ಮಾಡಿದವರು ಯಾರು, ಮೋಸ ಮಾಡಿ 135 ಸ್ಥಾನ ಗೆದ್ದವರು ಕಾಂಗ್ರೆಸ್. ಮಾಲೂರಿನಲ್ಲಿ ಮೋಸ ಮಾಡಿ ಗೆದ್ದವರು ಕಾಂಗ್ರೆಸ್ ನವರು. ರಾಜ್ಯದ ಕಾಂಗ್ರೆಸ್ ಸದ್ಯ ಬರ್ಬಾದ್ ಆಗಿದೆ ಎಂದರು.

ತೆಲಂಗಾಣ ಸರ್ಕಾರ ಇತ್ತೀಚಿಗೆ ಬಂದಿದೆ. ಆದರೆ ರಾಜ್ಯ ಸರ್ಕಾರ ಬಂದು 2.5 ವರ್ಷ ಮೇಲೆ ಆಗಿದೆ. ಯಾವುದಕ್ಕೂ ದುಡ್ಡಿಲ್ಲಾ, ಎಲ್ಲಾ ಕಂಪನಿಗಳು ಬೆಂಗಳೂರು ಬಿಟ್ಟು ಹೋಗುತ್ತಿವೆ. ರಸ್ತೆ ಗುಂಡಿಗಳನ್ನು ಮುಚ್ಚಲು ಕಾಂಗ್ರೆಸ್ ಬಳಿ ಹಣವಿಲ್ಲ, ಬಸ್ ಓಡಿಸಲು ಹಣವಿಲ್ಲ, ನೀವು ಮೊದಲು ಖುರ್ಚಿ ಬಿಟ್ಟು ತೊಲಗಿ ಎಂದು ಶೋಭಾ ಆಗ್ರಹಿಸಿದ್ದಾರೆ.

# ಇಂದಿನಿಂದ ರಾಜ್ಯದಲ್ಲಿ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆ ಆರಂಭ

**ಬೆಂಗಳೂರು:** ಹಲವು ಸಮುದಾಯಗಳ ವಿರೋಧ, ಅಸಮಾಧಾನ, ಆಕ್ಷೇಪ, ಕಳವಳ ಹಾಗೂ ಗೊಂದಲಗಳ ನಡುವೆಯೇ ನಾಳೆಯಿಂದ ರಾಜ್ಯದಲ್ಲಿ ಸಾಮಾಜಿಕ, ಶೈಕ್ಷಣಿ, ಆರ್ಥಿಕ ಸಮೀಕ್ಷೆ (ಜಾತಿ ಗಣತಿ) ಆರಂಭವಾಗಲಿದೆ.

ರಾಜ್ಯದ ಹಿಂದುಳಿದ ವರ್ಗಗಳ ಶಾಶ್ವತ ಆಯೋಗ ನಾಡಿನ 7 ಕೋಟಿ ಜನರ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ (ಜಾತಿ ಗಣತಿ) ಸಮೀಕ್ಷೆಗೆ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಂಡಿದ್ದು, ನಾಳೆಯಿಂದ ಅ. 7ರ ವರೆಗೆ ಗಣತಿದಾರರು ಮನೆ ಮನೆಗೆ ಭೇಟಿ ನೀಡಿ 7 ಕೋಟಿ ಕನ್ನಡಿಗರಿಂದ ಎಲ್ಲಾ ಮಾಹಿತಿಗಳನ್ನು ಸಂಗ್ರಹಿಸಲಿದ್ದಾರೆ.

ನಾಳೆಯಿಂದ ಆರಂಭವಾಗಲಿರುವ ಜಾತಿ ಗಣತಿಗೆ ಹಿಂದುಳಿದ ವರ್ಗಗಳ ಆಯೋಗ 1.75 ಲಕ್ಷ ಶಿಕ್ಷಕರನ್ನು ಬಳಸಿಕೊಳ್ಳಲಿದ್ದು, ಗಣತಿಗೆ ನಿಯೋಜಿತರಾಗಿರುವ ಶಿಕ್ಷಕರಿಗೆ ಗಣತಿ ಕಾರ್ಯವನ್ನು ಯಾವ ರೀತಿ ನಡೆಸಬೇಕು, ಯಾವೆಲ್ಲಾ ಮಾಹಿತಿಗಳನ್ನು ಸಂಗ್ರಹಿಸಬೇಕು ಎಂಬ ಬಗ್ಗೆ ಈಗಾಗಲೇ ತರಬೇತಿಯನ್ನು ನೀಡಿದೆ. ನಾಳೆಯಿಂದ ಮನೆ ಮನೆಗೆ



ತೆರಳುವ ಗಣತಿದಾರರು ಹಿಂದುಳಿದ ವರ್ಗ ಈಗಾಗಲೇ ಸಿದ್ಧಪಡಿಸಿರುವ 60 ಪ್ರಶ್ನೆಗಳನ್ನು ಕೇಳಿ, ಆ ಮಾಹಿತಿಗಳನ್ನು ದಾಖಲು ಮಾಡಿಕೊಳ್ಳಲಾಗುತ್ತದೆ.

ಪ್ರತಿ ಕುಟುಂಬದ ಸಮಗ್ರ ಸಮೀಕ್ಷೆ ಕಾರ್ಯವನ್ನು ನಡೆಸಲಾಗುತ್ತಿದ್ದು, ಕುಟುಂಬದ ಸದಸ್ಯರ ಶೈಕ್ಷಣಿಕ, ಆರ್ಥಿಕ ಹಾಗೂ ಸಾಮಾಜಿಕ ವಿವರಗಳನ್ನು ಸಂಗ್ರಹಿಸಲಾಗುತ್ತದೆ.

ಪ್ರತಿ ಕುಟುಂಬದ ಸದಸ್ಯರ ಜಾತಿಯನ್ನು ದಾಖಲು ಮಾಡುವ ಪ್ರತ್ಯೇಕ ಕಾಲಂಗಳಿದ್ದು, ಅದರಂತೆ ಪ್ರತಿ ಕುಟುಂಬದ ಸದಸ್ಯರ ಜಾತಿ, ಧರ್ಮ, ಉಪಜಾತಿ ಎಲ್ಲ ವಿವರಗಳನ್ನು ಗಣತಿದಾರರು ತಮಗೆ ನೀಡಿರುವ ನಮೂನೆಯಲ್ಲಿ ದಾಖಲು ಮಾಡುವರು. ಈಗಾಗಲೇ ವಿದ್ಯುತ್ ಮೀಟರ್ ರೀಡರ್‌ಗಳನ್ನು ಬಳಸಿಕೊಂಡು ಹಿಂದುಳಿದ ವರ್ಗಗಳ ಆಯೋಗ ಪ್ರತಿ ಮನೆಗೂ ಜಿಯೋ ಟ್ಯಾಗ್ ಸ್ಟಿಕ್ಕರ್‌ಗಳನ್ನು ಅಂಟಿಸಲಿದ್ದು, ಪ್ರತಿ ಮನೆಗೆ ವಿಶಿಷ್ಟ ಮನೆ ಸಂಖ್ಯೆ ನೀಡಲಾಗಿದೆ. ಅದನ್ನು ಸಮೀಕ್ಷೆದಾರರು ಗಮನಿಸಿ ಜಿಯೋ ಟ್ಯಾಗ್ ಮೂಲಕ ಖಚಿತಪಡಿಸಿಕೊಂಡು ಗಣತಿ ಕಾರ್ಯವನ್ನು ನಡೆಸುವರು.

# ಪತ್ನಿ ಜೊತೆ ಸೆಲ್ಫಿ: ಪ್ರಪಾತಕ್ಕೆ ಬಿದ್ದು ಶಿಕ್ಷಕ ಸಾವು

**ಚಿಕ್ಕಮಗಳೂರು:** ಪ್ರಸಿದ್ಧ ಪ್ರವಾಸಿ ತಾಣದ ಕೆಮ್ಮಣ್ಣುಗುಂಡಿಯ ವೀವ್ ಪಾಯಿಂಟ್‌ನಲ್ಲಿ ಪತ್ನಿ ಜೊತೆ ಸೆಲ್ಫಿ ತೆಗೆಯಲು ಹೋದ ಶಿಕ್ಷಕರೊಬ್ಬರು ಪ್ರಪಾತಕ್ಕೆ ಕಾಲು ಜಾರಿ ಬಿದ್ದು ಪತಿ ಮೃತಪಟ್ಟಿರುವ ದಾರುಣ ಘಟನೆ ಕೆಮ್ಮಣ್ಣುಗುಂಡಿಯಲ್ಲಿ ನಡೆದಿದೆ. ಶಿವಮೊಗ್ಗ ಜಿಲ್ಲೆಯ ಶಿಕಾರಿಪುರದ ಸಂತೋಷ್ (40) ಮೃತ ಶಿಕ್ಷಕರಾಗಿದ್ದಾರೆ.

ಶಿಕ್ಷಕ ಸಂತೋಷ್ ಮತ್ತು ಪತ್ನಿ ಶ್ವೇತ ಜಿಲ್ಲೆಯ ಪಶ್ಚಿಮ ಘಟ್ಟಗಳ ಪ್ರವಾಸಿ ತಾಣ ಕೆಮ್ಮಣ್ಣುಗುಂಡಿ ನೋಡಲು ನಿನ್ನೆ ಬಂದಿದ್ದರು. ಕೆಮ್ಮಣ್ಣುಗುಂಡಿ ಪಾರ್ಕ್ ವೀಕ್ಷಣೆ ಮಾಡಿದ ದಂಪತಿ, ಕೆಮ್ಮಣ್ಣುಗುಂಡಿ ವೀವ್ ಪಾಯಿಂಟ್ ಬಳಿ ಹೋಗಿದ್ದಾರೆ.

ಪ್ರಕೃತಿ ಸೌಂದರ್ಯದ ನಡುವೆ ಹೆಂಡತಿಯೊಂದಿಗೆ ಸೆಲ್ಫಿ ತೆಗೆಯಲು ಸಂತೋಷ್ ಮುಂದಾಗಿ ಪ್ರಪಾತದ ತುದಿಯಲ್ಲಿ ನಿಂತಿದ್ದ ಸಂತೋಷ್ ಕಾಲು ಜಾರಿ ನೂರಾರು ಅಡಿ ಆಳಕ್ಕೆ ಬಿದ್ದಾಗ ತಲೆಗೆ ಕಲ್ಲು ಬಂಡೆಗಳು ಬಡಿದು ಸ್ಥಳದಲ್ಲೇ ಪ್ರಾಣಬಿಟ್ಟಿದ್ದಾರೆ.

ಮೃತ ಶಿಕ್ಷಕ ಸಂತೋಷ್ ಅವರು ಶ್ವೇತ ಜೊತೆ ಕಳೆದ 5 ವರ್ಷಗಳ ಹಿಂದೆ ವಿವಾಹವಾಗಿದ್ದರು. ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ತಾಲೂಕಿನಲ್ಲಿರುವ ಲಕ್ಷ್ಮೀಸಾಗರ ಶಾಲೆಯಲ್ಲಿ ಶಿಕ್ಷಕರಾಗಿ ಕೆಲಸ ಮಾಡುತ್ತಿದ್ದರು. ದಸರಾ ರಜೆ ಸಿಕ್ಕ ಹಿನ್ನಲೆ ಕೆಮ್ಮಣ್ಣುಗುಂಡಿಗೆ ಹೆಂಡತಿ ಜೊತೆ ಪ್ರವಾಸಕ್ಕೆ ಬಂದಿದ್ದರು. ಈ ವೇಳೆ ಭೀಕರ ದುರಂತ ಸಂಭವಿಸಿದೆ. ಸದ್ಯ ಮೃತ ದೇಹವನ್ನು ಹಗ್ಗದ ಮೂಲಕ ನೂರಾರು ಅಡಿಗಳ ಪ್ರಪಾತದಿಂದ ಅಗ್ನಿಶಾಮಕ ದಳದ ಸಿಬ್ಬಂದಿಗಳು ಮೇಲಕ್ಕೆತ್ತಿದ್ದಾರೆ.

ಮಲೆನಾಡು ಭಾಗದಲ್ಲಿ ನಿರಂತರವಾಗಿ ಮಳೆಯಾಗುತ್ತಿದೆ.

# ಕ್ರೀಡೆಗಳು ಮಾನಸಿಕ, ದೈಹಿಕ ಸಮತೋಲನಕ್ಕೆ ಸಹಕಾರಿ : ಶಾಸಕ ತಮ್ಮಯ್ಯ

**ಚಿಕ್ಕಮಗಳೂರು:** ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿದಾಗ ಮಾನಸಿಕ ಮತ್ತು ದೈಹಿಕವಾಗಿ ಸದೃಢರಾಗಿ ಸಮತೋಲನ ಕಂಡುಕೊಳ್ಳಲು ಸಹಕಾರಿಯಾಗುತ್ತದೆ ಎಂದು ಶಾಸಕ ಹೆಚ್.ಡಿ ತಮ್ಮಯ್ಯ ಅಭಿಪ್ರಾಯಿಸಿದರು.

ಅವರು ಇಂದು ನೇತಾಜಿ ಸುಭಾಷ್ ಚಂದ್ರಬೋಸ್ ಜಿಲ್ಲಾ ಆಟದ ಮೈದಾನದಲ್ಲಿ ಜಿಲ್ಲಾಡಳಿತ, ಜಿ.ಪಂ, ತಾ.ಪಂ, ನಗರಸಭೆ, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಮತ್ತು ಕ್ಷೇತ್ರ ಸಂಪನ್ಮೂಲ ಕೇಂದ್ರ ಹಾಗೂ ವಿದ್ಯಾಭಾರತಿ ವಿದ್ಯಾಸಂಸ್ಥೆ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ತಾಲ್ಲೂಕು ಮಟ್ಟದ ಕ್ರೀಡಾಕೂಟ 2025-26 ನ್ನು ಉದ್ಘಾಟಿಸಿ ಮಾತನಾಡಿದರು.

ಕ್ರೀಡೆಗಳಲ್ಲಿ ಸೋಲು-ಗೆಲುವ ಸಹಜ,



ಕ್ರೀಡಾ ಮನೋಭಾವದಿಂದ ಕ್ರೀಡಾಕೂಟಗಳಲ್ಲಿ ಭಾಗವಹಿಸುವುದು ಮುಖ್ಯ. ಗೆದ್ದವರು ಬೀಗದೆ ಸೋತವರು ಭಾಗದೆ ಕ್ರೀಡಾ ಸಾಧನೆಗಳು ಜನರ ಮೆಚ್ಚುಗೆ ಗಳಿಸಲಿ ಎಂದು ಶುಭ ಹಾರೈಸಿದರು. ಗ್ರಾಮೀಣ ಗುಂಪು ಕ್ರೀಡೆಗಳಾದ ಖೋಖೋ, ಕಬಡ್ಡಿ, ವಾಲಿಬಾಲ್, ಥ್ರೋಬಾಲ್ ಮುಂತಾದ ಕ್ರೀಡೆಗಳು ಈ ಕ್ರೀಡಾಕೂಟದಲ್ಲಿ ಇದ್ದು, ಒಬ್ಬ ನಾಯಕ ಕ್ರೀಡಾಪಟುವಿನ ಮೈಮರೆವು ತಂಡದ ಸೋಲಿಗೆ ಕಾರಣವಾಗುತ್ತದೆ ಎಂಬುದನ್ನು ಅರಿತು ಎಚ್ಚರಿಕೆಯಿಂದ ಆಟ ಆಡಬೇಕು ಎಂದು ಸಲಹೆ ನೀಡಿದರು.

ಪಠ್ಯೇತರ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸುವ ಮೂಲಕ ಕ್ರೀಡೆಗಳಲ್ಲಿ ಹೆಚ್ಚು ಹೆಚ್ಚು ತೊಡಗಿಸಿಕೊಳ್ಳುತ್ತಿದ್ದಾರೆ. ಈ ನಿಟ್ಟಿನಲ್ಲಿ ಆಟ ಆಡುವಾಗ ಪೋಷಕರು, ಶಿಕ್ಷಕರು, ಪ್ರೇಕ್ಷಕರು, ತೀರ್ಪುಗಾರರು ಪ್ರತಿ ಕ್ಷಣವನ್ನು ಗಮನಿಸುತ್ತಿದ್ದಾರೆ ಎಂಬುದನ್ನು ಅರಿಯಬೇಕೆಂದರು.

ಉತ್ತಮ ಕ್ರೀಡಾಪಟುಗಳಾಗಬೇಕಾದರೆ ಪೌಷ್ಠಿಕ ಆಹಾರ, ದಿನನಿತ್ಯ ವ್ಯಾಯಾಮ ಅಭ್ಯಾಸ, ಕ್ರೀಡೆಯ ಬಗ್ಗೆ ಆಸಕ್ತಿ ಇದ್ದಾಗ ಮಾತ್ರ ಎದುರಾಳಿಯನ್ನು ಸಮರ್ಥವಾಗಿ ಎದುರಿಸಲು ಸಾಧ್ಯ ಎಂದು ಹೇಳಿದರು.

ನಗರಸಭಾಧ್ಯಕ್ಷೆ ಶೀಲಾ ದಿನೇಶ್ ಮಾತನಾಡಿ, ಧೈರ್ಯದಿಂದ ಕ್ರೀಡಾಕೂಟದಲ್ಲಿ ಭಾಗವಹಿಸಿ ಜಯಗಳಿಸಿ ರಾಜ್ಯ, ರಾಷ್ಟ್ರಕ್ಕೆ ಕೀರ್ತಿ ತರಬೇಕೆಂದು ಶುಭ ಹಾರೈಸಿದರು.

ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು ತೀರ್ಪುಗಾರರಿಗೆ ಗೌರವವನ್ನು ಕೊಡಬೇಕು. ಈ ಮೂಲಕ ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಡಿಡಿಪಿಐ ತಿಮ್ಮರಾಜು, ಕ್ಷೇತ್ರ ಶಿಕ್ಷಣಾಧಿಕಾರಿ ರುದ್ರಪ್ಪ, ನಗರಸಭೆ ಉಪಾಧ್ಯಕ್ಷೆ ಲಲಿತಾ ಬಾಯಿ ಸೇರಿದಂತೆ ವಿವಿಧ ಶಿಕ್ಷಕರ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಶಿಕ್ಷಕರು ಭಾಗವಹಿಸಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**